ಸಂಪುಟ: 14 Volume ಸಂಚಿಕೆ: 34 Issue ಪುಟಗಳು 08 Pages | ಶನಿವಾರ 09 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಬಾಳು ಇರುವುದು ಬದುಕುವುದಕ್ಕಾಗಿ; ಬದುಕಿನಿಂದ ಬೆಳೆಯುವುದಕ್ಕಾಗಿ.

–ಶಿವರಾಮ ಕಾರಂತ

## ಎಸ್.ಎಸ್.ಎಲ್.ಸಿ ಪರೀಕ್ಷೆ-2

**ಬೆಂಗಳೂರು:** 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ–2ನ್ನು ಮೇ 18,2026 ರಿಂದ ಮೇ 25. 2026 ರವರೆಗೆ ರಾಜ್ಯಾದ್ಯಂತ ನಡೆಸಲು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ವತಿಯಿಂದ ಎಲ್ಲಾ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಪ್ರಸ್ತುತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ–2 ಪರೀಕ್ಷೆಯಲ್ಲಿ 1,14,444 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, 358 ಪರೀಕ್ಷಾ ಕೇಂದ್ರಗಳನ್ನು ರಚಿಸಲಾಗಿದೆ. ಪರೀಕ್ಷೆ–2ನ್ನು ಹಿಂದಿನ ವರ್ಷಗಳಂತೆ ವ್ಯವಸ್ಥಿತವಾಗಿ ಮತ್ತು ಪಾರದರ್ಶಕತೆಯಿಂದ ನಡೆಸಲಾಗುವುದು.

ಪರೀಕ್ಷಾ ಪೂರ್ವದಲ್ಲಿ ಹಾಗೂ ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಸಂಬಂಧಿತ ವದಂತಿಗಳ ವಿರುದ್ಧ ಅಗತ್ಯ ಕಾನೂನು ಕ್ರಮ ಕೈಗೊಳ್ಳುವುದು. ಪರೀಕ್ಷಾ ಸಮಯದಲ್ಲಿ ವಿಶೇಷವಾಗಿ ಕೆಲವು ಕೋಚಿಂಗ್/ಟ್ಯೂಷನ್ ಕೇಂದ್ರಗಳು, ಕಂಪ್ಯೂಟರ್/ಸೈಬರ್ ಕೇಂದ್ರಗಳು. ಜೆರಾಕ್ಸ್ ಅಂಗಡಿಗಳು ಇತ್ಯಾದಿಯವರಿಂದ ಸುಳ್ಳು ವದಂತಿಗಳು ಹರಡಲು ಅವಕಾಶ ನೀಡದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು. ಪರೀಕ್ಷಾ ಕೇಂದ್ರಗಳ ಸಮೀಪ ಪರೀಕ್ಷಾ ಅಕ್ರಮಗಳಿಗೆ ಪ್ರಚೋದಿಸುವವರ ವಿರುದ್ಧ ಆಗತ್ಯ ಕಾನೂನು ಕ್ರಮ ಜರುಗಿಸಲಾಗುವುದು. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿಯು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ.

## ಅಪರಿಚಿತ ವಾಹನ ಡಿಕ್ಕಿ: ವ್ಯಕ್ತಿ ಸಾವು



**ಗುರುಮಠಕಲ್:** ತಾಲೂಕಿನ ಗಣಪೂರ ಗೇಟ್ ಸಮೀಪ ರಾಜ್ಯ ಹೆದ್ದಾರಿ–16ರಲ್ಲಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಒಬ್ಬ ವ್ಯಕ್ತಿ ಮೃತಪಟ್ಟ ಘಟನೆ ಬೆಳಕಿಗೆ ಬಂದಿದೆ. ಮೃತರನ್ನು ಗಣಪೂರ ಗ್ರಾಮದ ಕೃಷ್ಣ ತಂದೆ ಬಾಬು ಭಿಮಶಪ್ಪನ್ನೋರ (40) ಎಂದು ಗುರುತಿಸಲಾಗಿದೆ. ಇವರು ಕೂಲಿ ಕೆಲಸ ಮಾಡುತ್ತಿದ್ದರು ಎನ್ನಲಾಗಿದೆ. ಪೊಲೀಸ್ ಮಾಹಿತಿಯ ಪ್ರಕಾರ, ಮೇ 6ರಂದು ರಾತ್ರಿ 9 ಗಂಟೆಯಿಂದ ಮೇ 7ರಂದು ಬೆಳಿಗ್ಗೆ 7 ಗಂಟೆಯ ಮಧ್ಯೆ ಸಿಂದಗಿ–ಹೈದ್ರಾಬಾದ್ ರಸ್ತೆಯ ಗಣಪೂರ ಗೇಟ್ ಬಳಿ ಅಪರಿಚಿತ ವಾಹನವು ಅತಿವೇಗ ಹಾಗೂ ಅಲಕ್ಷತನದಿಂದ ಬಂದು ಕೃಷ್ಣ ಅವರಿಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

## ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ

**ಚಿಟಗುಪ್ಪ:** ಅಗ್ನಿ ಅವಘಡದಲ್ಲಿ ಮನೆ ಸುಟ್ಟು ಭಸ್ಮವಾಗಿದ್ದು, ಲಕ್ಷಾಂತರ ರೂಪಾಯಿ ಮೌಲ್ಯದ ಆಸ್ತಿ ನಷ್ಟವಾಗಿರುವ ಘಟನೆ ತಾಲ್ಲೂಕಿನ ಕೊಡಂಬಲ್ ಗ್ರಾಮದಲ್ಲಿ ಶುಕ್ರವಾರ ಮಧ್ಯಾಹ್ನ ನಡೆದಿದೆ. ಮಧ್ಯಾಹ್ನ 1:30 ಗಂಟೆ ಸುಮಾರಿಗೆ ಗ್ರಾಮದ ಜಗದೇವಿ ಗಂಡ ಫಾಳೆಪ್ಪ ಎಂಬವರ ಮನೆಯಲ್ಲಿ ಶಾರ್ಟ್ ಸರ್ಕ್ಯೂಟ್ ಸಂಭವಿಸಿ ಬೆಂಕಿ ಕಾಣಿಸಿಕೊಂಡಿದೆ. ಬೆಂಕಿ ತೀವ್ರವಾಗಿ ವ್ಯಾಪಿಸಿ ಮನೆಯಲ್ಲಿದ್ದ 1ಚೀಲ ತೊಗರಿ, 4ಚೀಲ ಜೋಳ, 50ಕೆಜಿ ಬಿಳೆ, ಬಟ್ಟೆಗಳು, ದಿನಸಿ ಸಾಮಗ್ರಿಗಳು ಸೇರಿದಂತೆ ಸುಮಾರು 3ತೊಲೆ ಬಂಗಾರ, 20ತೊಲೆ ಬೆಳ್ಳಿ ಮತ್ತು 3ಲಕ್ಷ ರೂ. ನಗದು ಸುಟ್ಟು ಕರಕಲಾಗಿದೆ ಎಂದು ತಿಳಿದು ಬಂದಿದೆ. ಅಗ್ನಿಶಾಮಕ ದಳದ ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿ ನಾರಂದ ಸಿಬ್ಬಂದಿಗಳಾದ ವಸಂತಕುಮಾರ್, ಗಜಾನಂದ, ಅರುಣಕುಮಾರ್, ಕರಣಕುಮಾರ, ವೀರಶೆಟ್ಟಿ ಸ್ಥಳಕ್ಕೆ ಆಗಮಿಸಿ ಬೆಂಕಿಯನ್ನು ನಂದಿಸಿದರು. ಯಾವುದೇ ಅಪಾಯ ಆಗಿಲ್ಲ ಎಂದು ತಿಳಿದು ಬಂದಿದೆ.

# ಬಂಗಾಲದಲ್ಲಿ ಬಿಜೆಪಿ ಶಕೆ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಕೋಲ್ಕತ್ತಾ



ಪಶ್ಚಿಮ ಬಂಗಾಲದಲ್ಲಿ ನಡೆದ ಚುನಾವಣೆಯಲ್ಲಿ ಬಹುಮತ ಪಡೆದು ಆಯ್ಕೆಯಾಗಿರುವ ಬಿಜೆಪಿ ಮೇ.9 ರಂದು ಪ್ರಥಮ ಬಾರಿಗೆ ಅಧಿಕಾರದ ಗದ್ದುಗೆ ಏರಲು ಸರ್ವ ರೀತಿಯಲ್ಲಿ ಸನ್ನದ್ಧವಾಗಿದ್ದು, ತಮಿಳುನಾಡಿನಲ್ಲಿ ನಡೆದ ಚುನಾವಣೆಯಲ್ಲಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದ್ದರೂ ಅಧಿಕಾರದ ಗದ್ದುಗೆ ಏರಲು ಅಗತ್ಯ ಮ್ಯಾಜಿಕ್ ನಂಬರ್ ಇಲ್ಲದೇ ಪರದಾಡುತ್ತಿದ್ದ ದಳಪತಿ ವಿಜಯ ಅವರ ಟಿವಿಕೆ ಪಕ್ಷಕ್ಕೆ ಕಾಂಗ್ರೆಸ್ ಸೇರಿದಂತೆ ಇತರ ಪಕ್ಷಗಳು ಬೆಂಬಲ ಸೂಚಿಸಿರುವುದರಿಂದ ಕಳೆದೆರಡು ದಿನಗಳಿಂದ ಇದ್ದ ಗೊಂದಲ ನಿವಾರಣೆಯಾಗಿದ್ದು, ಶೀಘ್ರ ಟಿವಿಕೆ ಪಕ್ಷದ ಅಧ್ಯಕ್ಷ ನಟ ವಿಜಯ ನೇತೃತ್ವದಲ್ಲಿ ಸರ್ಕಾರ ಅಸ್ತಿತ್ವಕ್ಕೆ ಬರುವುದಕ್ಕೆ ಹಾದಿ ಸುಗಮವಾಗಿದೆ.

ಇತ್ತೀಚೆಗೆ ನಡೆದ ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿರುವ ಬಿಜೆಪಿ ಶಾಸಕಾಂಗ ಪಕ್ಷದ ನಾಯಕರಾಗಿ ಹಿರಿಯ ನಾಯಕ ಸುವೇಂದು ಅಧಿಕಾರಿ ಅವರನ್ನು ಶುಕ್ರವಾರ ಆಯ್ಕೆ ಮಾಡಲಾಗಿದೆ. ಈ ಮೂಲಕ ರಾಜ್ಯದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಲು ಸುವೇಂದು ಅಧಿಕಾರಿ ಅವರು ಶನಿವಾರ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಇಂದು ಕೋಲ್ಕತ್ತಾದಲ್ಲಿ ನಡೆದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಸುವೇಂದು ಅಧಿಕಾರಿ ಅವರ ಹೆಸರನ್ನು ಪ್ರಸ್ತಾಪಿಸಲಾಯಿತು ಮತ್ತು ಹೊಸದಾಗಿ ಆಯ್ಕೆಯಾದ ಎಲ್ಲಾ ಬಿಜೆಪಿ ಶಾಸಕರು ಅದನ್ನು ಅನುಮೋದಿಸಿದರು. ನಂತರ ಪಕ್ಷದ ಹಿರಿಯ ನಾಯಕರ ಸಮ್ಮುಖದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅಧಿಕೃತವಾಗಿ ಸುವೇಂದು ಅಧಿಕಾರಿ ಅವರ ಹೆಸರನ್ನು ಘೋಷಿಸಿದರು ಎಂದು ಬಿಜೆಪಿ ಮೂಲಗಳು ತಿಳಿಸಿವೆ.

"ಪಶ್ಚಿಮ ಬಂಗಾಳ ಬಿಜೆಪಿ ಶಾಸಕಾಂಗ ಪಕ್ಷದ ನಾಯಕರಾಗಿ ಸುವೇಂದು ಅಧಿಕಾರಿ ಅವರು ಆಯ್ಕೆಯಾಗಿದ್ದಾರೆ" ಎಂದು ಪಶ್ಚಿಮ ಬಂಗಾಳದಲ್ಲಿ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗೆ ಕೇಂದ್ರ ವೀಕ್ಷಕರಾಗಿ ನೇಮಕಗೊಂಡ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಮೇ 9 ರಂದು ಕೋಲ್ಕತ್ತಾದ ಬ್ರಿಗೇಡ್ ಪರೇಡ್ ಮೈದಾನದಲ್ಲಿ ಬಿಜೆಪಿ ಸರ್ಕಾರದ ಪ್ರಮಾಣವಚನ ಸಮಾರಂಭ ನಡೆಯಲಿದ್ದು, ಸುವೇಂದು ಅಧಿಕಾರಿ ಅವರು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

# ತ.ನಾಡಿನಲ್ಲಿ ಶೀಘ್ರ ಟಿವಿಕೆ ಸರ್ಕಾರ

• ಮಲ್ಲಮ್ಮ ನುಡಿ ವಾರ್ತೆ ಚೆನ್ನೈ




ಇತ್ತೀಚೆಗೆ ನಡೆದ ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ 108 ಸ್ಥಾನಗಳನ್ನು ಪಡೆಯುವ ಮೂಲಕ ಏಕೈಕ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಸೂಪರ್‌ಸ್ಟಾರ್ ದಳಪತಿ ವಿಜಯ್ ನೇತೃತ್ವದ ತಮಿಳಗವೆಟ್ರಿಕಳಗಂ(ಟಿವಿಕೆ) ಪಕ್ಷವು ಸಣ್ಣ ಸಣ್ಣ ಪಕ್ಷಗಳ ಬೆಂಬಲದೊಂದಿಗೆ ಸಮ್ಮಿಶ್ರ ಸರ್ಕಾರ ರಚನೆಗೆ ಭರ್ಜರಿ ಸಿದ್ಧತೆ ನಡೆಸಿದೆ.

ಬಹುಮತದ ಕೊರತೆ ಎದುರಿಸುತ್ತಿದ್ದ ಟಿವಿಕೆ ಮುಖ್ಯಸ್ಥ ವಿಜಯ್ ಅವರಿಗೆ ಕೊನೆಗೂ ಮ್ಯಾಜಿಕ್ ನಂಬರ್ ಸಿಕ್ಕಿದ್ದು, ಕಾಂಗ್ರೆಸ್ ನಂತರ ಸಿಪಿಐ ಮತ್ತು ವಿಸಿಕೆ ಸಹ ಬೆಂಬಲ ಘೋಷಿಸಿವೆ. ಹೀಗಾಗಿ ದಳಪತಿ ವಿಜಯ್ ಅವರು ಶೀಘ್ರದಲ್ಲೇ ತಮಿಳುನಾಡಿನ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ವಿಜಯ್ ನೇತೃತ್ವದ ಸಂಪುಟದಲ್ಲಿ ಸಣ್ಣ ಮಿತ್ರಪಕ್ಷಗಳು ಸಹ ಪ್ರಾತಿನಿಧ್ಯವನ್ನು ಹೊಂದಿರುತ್ತವೆ. ವಿಸಿಕೆ ಒಂದು ಸಚಿವ ಸ್ಥಾನವನ್ನು ಪಡೆಯುತ್ತದೆ, ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ(ಸಿಪಿಐ) ಮತ್ತು ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ–ಮಾರ್ಕ್ಸಿಸ್ಟ್(ಸಿಪಿಎಂ)ಗೆ ಎರಡು ಸಚಿವ ಸ್ಥಾನ ನೀಡಲಾಗುವುದು ಎಂದು ಮೂಲಗಳು ತಿಳಿಸಿವೆ.

ವಿಸಿಕೆ ಮುಖ್ಯಸ್ಥ ಥೋಲ್ ತಿರುಮಾವಲವನ್ ಅವರೇ ವಿಜಯ್ ಸಂಪುಟ ಸೇರುವ ಸಾಧ್ಯತೆ ಇದೆ.

ಇನ್ನು ಡಿಎಂಕೆಯನ್ನು ತೊರೆದು ಟಿವಿಕೆಗೆ ಷರತ್ತುಬದ್ಧ ಬೆಂಬಲ ನೀಡಿದ ಕಾಂಗ್ರೆಸ್ ಸಹ ಎರಡು ಸಚಿವ ಸ್ಥಾನಗಳನ್ನು ನಿರೀಕ್ಷಿಸುತ್ತಿದೆ ಎಂದು ಮೂಲಗಳು ತಿಳಿಸಿವೆ. ತಲಾ ಇಬ್ಬರು ಶಾಸಕರನ್ನು ಹೊಂದಿರುವ ವಿಸಿಕೆ, ಸಿಪಿಐ ಮತ್ತು ಸಿಪಿಎಂಗಳು ಉನ್ನತ ಮಟ್ಟದ ಚರ್ಚೆ ನಡೆಸಿದ ನಂತರ ಇಂದು ಟಿವಿಕೆಗೆ ತಮ್ಮ ಬೆಂಬಲ ನೀಡುವುದಾಗಿ ಘೋಷಿಸಿವೆ.

# ಬಿಜೆಪಿಯನ್ನು ಬಲಪಡಿಸಿದ ನಾಯಕ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ



ದಕ್ಷಿಣ ಭಾರತದಲ್ಲಿ ಬಿಜೆಪಿಯನ್ನು ಸಂಘಟಿತವಾಗಿ ಬೆಳೆಸಿದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಬೈಸಿಕಲ್ ಹೋರಾಟ ಸೇರಿದಂತೆ ಅನೇಕ ಹೋರಾಟಗಳ ಮೂಲಕ ತಮ್ಮದೇ ಆದ ಛಾಪು ಮೂಡಿಸಿದ್ದಾರೆ ಎಂದು ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ಬಿಜೆಪಿ ಮುಖಂಡ ವೇಣುಗೋಪಾಲ್ ಹೇಳಿದರು.

ಚಿತ್ರದುರ್ಗದಲ್ಲಿ ಶನಿವಾರದಂದು ಯಡಿಯೂರಪ್ಪ ಅವರ ಸುದೀರ್ಘ 50 ವರ್ಷಗಳ ರಾಜಕೀಯ ಹಾಗೂ ಸಮಾಜ ಸೇವೆಯ ಹಿನ್ನೆಲೆಯಲ್ಲಿ ಆಯೋಜಿಸಿರುವ ಯಡಿಯೂರಪ್ಪ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ತೆರಳಲು ಚಿಂತಾಮಣಿಯಿಂದ ಸುಮಾರು ಇಪ್ಪತ್ತು ಬಸ್‌ಗಳನ್ನು ಕಳುಹಿಸುವ ಸಂದರ್ಭದಲ್ಲಿ, ಮಾರ್ಗ ಮಧ್ಯೆ ಜಿಲ್ಲಾ ಕೇಂದ್ರ ಚಿಕ್ಕಬಳ್ಳಾಪುರದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಯಡಿಯೂರಪ್ಪ ಅವರ ಆಡಳಿತ ಅವಧಿಯಲ್ಲಿ ಅನೇಕ ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದ್ದು, ರೈತಪರ ನಿಲುವುಗಳ ಮೂಲಕ ಅವರು ಧೀಮಂತ ನಾಯಕನಾಗಿ ಗುರುತಿಸಿಕೊಂಡಿದ್ದಾರೆ ಎಂದರು. ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ, ಹೆಣ್ಣುಮಕ್ಕಳಿಗೆ ಭಾಗ್ಯಲಕ್ಷ್ಮೀ ಬಾಂಡ್, ವೃದ್ಧಾಪ್ಯ ವೇತನ ಸೇರಿದಂತೆ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಸಾಮಾನ್ಯ ಜನರ ಜೀವನಮಟ್ಟ ಸುಧಾರಣೆಗೆ ಕಾರಣವಾಗಿದೆ ಎಂದು ಹೇಳಿದರು. ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಯಡಿಯೂರಪ್ಪ ಅವರ ಪಾತ್ರ ಅಪಾರವಾಗಿದ್ದು, ಅವರ ನಾಯಕತ್ವ ಮತ್ತು ಹೋರಾಟಗಳು ಹಲವಾರು ಕಾರ್ಯಕರ್ತರಿಗೆ ಪ್ರೇರಣೆಯಾಗಿವೆ. ಈ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಭಾರೀ ಪ್ರಮಾಣದಲ್ಲಿ ಜನಸಾಗರ ಸೇರುವ ನಿರೀಕ್ಷೆಯಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಹಿಂದೆ ಕರ್ನಾಟಕದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಯಡಿಯೂರಪ್ಪ ಅವರ ಶ್ರಮ ಮಹತ್ವದ್ದಾಗಿದೆ. ಈಗ ಮೂರು ರಾಜ್ಯಗಳಲ್ಲಿ ಬಿಜೆಪಿ ಸಾಧಿಸಿರುವ ಭರ್ಜರಿ ಗೆಲುವಿನಂತೆ, ಕರ್ನಾಟಕದಲ್ಲಿಯೂ 2028ರಲ್ಲಿ ಪಕ್ಷ ಅಧಿಕಾರಕ್ಕೆ ಬರಲಿದೆ ಎಂದು ಹೇಳಿದರು.

# ರಾಜ್ಯಾದ್ಯಂತ 5 ಕೋಟಿ ಸಸಿ ನೆಡಲಾಗುವುದು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಪರಿಸರ ಸಂರಕ್ಷಣೆಗಾಗಿ ರಾಜ್ಯಾದ್ಯಂತ 5 ಕೋಟಿ ಸಸಿಗಳನ್ನು ನೆಡಲಾಗುವುದು ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಶಶಿಧರ್ ಶೆಟ್ಟಿ ತಿಳಿಸಿದರು.

ಇಂದು ಕರ್ನಾಟಕ ಉಚ್ಚ ನ್ಯಾಯಾಲಯದ ಕಾರ್ಯನಿರ್ವಾಹಕ ಅಧ್ಯಕ್ಷರ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಧರೆ ಫೌಂಡೇಷನ್ ಅವರು ಸಂಯುಕ್ತವಾಗಿ ಪರಿಸರ ಸಂರಕ್ಷಣೆ ಮತ್ತು ಪರಿಸರ ಪುನರುಜೀವನಕ್ಕೆ ಸಂಬಂಧಿಸಿದಂತೆ ಮಾಡಿಕೊಂಡಿರುವ ಒಪ್ಪಂದದ ಕುರಿತು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಧರೆ ಫೌಂಡೇಶನ್ ಸಂಯುಕ್ತವಾಗಿ ರಾಜ್ಯದಲ್ಲಿ ಪರಿಸರ ಅಭಿಯಾನವನ್ನು ಆರಂಭಿಸುತ್ತಿದ್ದು, 5 ಕೋಟಿ ಸಸಿಗಳಲ್ಲಿ ಮೊದಲು 2 ಕೋಟಿ ಸಸಿಗಳನ್ನು ಬೆಂಗಳೂರು ಹಾಗೂ ಅದರ ಸುತ್ತಮುತ್ತ "ಗ್ರೀನ್ ರಿಂಗ್ ಬೆಂಗಳೂರು' ಯೋಜನೆಯಡಿ ನೆಡಲಾಗುತ್ತದೆ. ಈ ಯೋಜನೆಯನ್ನು ವಿಧಾನಸೌಧವನ್ನು ಕೇಂದ್ರಬಿಂದುಗೊಳಿಸಿ 50 ಕಿ.ಮೀ ವ್ಯಾಪ್ತಿಯಲ್ಲಿ ಜಾರಿಗೆ ಬರುತ್ತದೆ. ಉಳಿದ 3 ಕೋಟಿ ಸಸಿಗಳನ್ನು ಜಿಲ್ಲೆಗಳಲ್ಲಿ, ತಾಲ್ಲೂಕು ಮಟ್ಟದಲ್ಲಿ ಹಾಗೂ ಹೋಬಳಿ ಮಟ್ಟದಲ್ಲಿ ನೆಡಲಾಗುವುದು.

ಸಮಾಜಕ್ಕೆ ಉತ್ತಮ ಕೆಲಸ ಮಾಡುವ ಉದ್ದೇಶದಿಂದ ಹಾಗೂ ಮುಂದಿನ ಪೀಳಿಗೆಗೆ ಮಾದರಿಯಾಗಿ ಉತ್ತಮ ಸಮಾಜ, ಒಳ್ಳೆಯ ಪರಿಸರ ನಿರ್ಮಿಸಬೇಕಾಗಿರುವುದು ನಮ್ಮ ಜವಾಬ್ದಾರಿಯಾಗಿರುವುದರಿಂದ ಸಸಿ ನೆಡುವ ಕಾರ್ಯದೊಂದಿಗೆ ರಾಜ್ಯಾದ್ಯಂತ ಕೆರೆ ಸಂರಕ್ಷಣೆ ಮಾಡಬೇಕು ಎಂದರು.

ರಾಜ್ಯದಲ್ಲಿ 45 ಸಾವಿರಕ್ಕೂ ಹೆಚ್ಚು ಕೆರೆಗಳಿದ್ದು, ಅವುಗಳಲ್ಲಿ ಸುಮಾರು 3471 ಕೆರೆಯಲ್ಲಿ ನೀರು ಇಲ್ಲ. 11918 ಕೆರೆಗಳಲ್ಲಿ ಶೇ.30 ರಷ್ಟು ನೀರು ಕಡಿಮೆ ಇದೆ. ಈ ಕೆರೆಗಳಲ್ಲಿ ಹೂಳೆತ್ತಿ ದಶಕಗಳೆ ಕಳೆದಿದ್ದು, ಹೂಳೆತ್ತಲು ಸರ್ಕಾರದಿಂದಲೇ ಸಾಧ್ಯವಾಗುವುದಿಲ್ಲ. ಜನರ ಸಹಭಾಗಿತ್ವವು ಅವಶ್ಯಕವಾಗಿರುವುದರಿಂದ ಜನಸಾಮಾನ್ಯರಿಗೆ ಕೆರೆ ಸಂರಕ್ಷಣೆ ಕುರಿತು ಅರಿವು ಮೂಡಿಸಬೇಕು. ಕೆರೆ ರಕ್ಷಣೆ ಮಾಡಿದರೆ ನೀರಿನ ಮಟ್ಟ ಜಾಸ್ತಿ ಆಗುವುದರ ಜೊತೆಗೆ ಪರಿಸರ ಸಂರಕ್ಷಣೆ–ಯಾಗುತ್ತದೆ ಎಂದರು.

# ಆನೆ ಸಮಸ್ಯೆ ಪರಿಹಾರಕ್ಕೆ ಆನೆಧಾಮ ನಿರ್ಮಾಣ

• ಮಲ್ಲಮ್ಮ ನುಡಿ ವಾರ್ತೆ ಬೇಲೂರು



ಕೊಡಗು ಮತ್ತು ಚಿಕ್ಕಮಗಳೂರಿನಲ್ಲಿ ಕಾಡಾನೆ ಸಮಸ್ಯೆ ಇದ್ದು, ನೂರಾರು ಆನೆಗಳು ಕಾಡಿನಿಂದ ಹೊರಗೆ ಇವೆ. ಇಂತಹ ಆನೆಗಳಿಂದ ಆಗುವ ಬೆಳೆಹಾನಿ, ಜೀವ ಹಾನಿ ತಪ್ಪಿಸಲು ಈಗಾಗಲೇ ಹಲವು ಕ್ರಮ ಕೈಗೊಳ್ಳಲಾಗಿದ್ದು, ಆನೆ ಧಾಮ ಸ್ಥಾಪನೆಗೆ ಈಗಾಗಲೇ 2 ಸಾವಿರ ಎಕರೆ ಭೂಮಿ ಗುರುತಿಸಲಾಗಿದ್ದು, ಸಚಿವ ಸಂಪುಟದ ಅನುಮೋದನೆ ಪಡೆಯಲಾಗಿದೆ ಎಂದರು.

ಆನೆಗಳ ಸಂಚಾರದ ಬಗ್ಗೆ ನಿಗಾ ಇಟ್ಟು ಸ್ಥಳೀಯರಿಗೆ ಮಾಹಿತಿ ನೀಡಲು ಕಮಾಂಡ್ ಸೆಂಟರ್ ಸ್ಥಾಪಿಸಲಾಗಿದೆ. ಇಲಾಖೆ ಸಿಬ್ಬಂದಿ ಆನೆ ಸಂಚಾರದ ಬಗ್ಗೆ ಕಾಲ ಕಾಲಕ್ಕೆ ನೀಡುವ ಎಚ್ಚರಿಕೆ ಪಾಲಿಸಿದರೆ ಅಮೂಲ್ಯ ಜೀವಹಾನಿ ತಪ್ಪಿಸಬಹುದು ಎಂದರು.

ಮಾರುತಗಳನ್ನು ತಡೆದು ವ್ಯಾಪಕ ಮಳೆ ಸುರಿಸುವಂತೆ ಮಾಡುವ, ನೂರಾರು ನದಿಗಳಿಗೆ ಮೂಲವಾದ ಪಶ್ಚಿಮಘಟ್ಟ ಇರುವ ಹಚ್ಚಹಸಿರಿನ ಅರಣ್ಯವಿದ್ದು, ವನ್ಯಜೀವಿ ಸಂರಕ್ಷಣೆ ನಮ್ಮ ಹೊಣೆಯಾಗಿದೆ. ಹೀಗಾಗಿ ಕಾಡಿನಂಚಿನ ಜನರು ವನ್ಯಜೀವಿಗಳೊಂದಿಗೆ ಸಹಬಾಳ್ವೆ ನಡೆಸಬೇಕು ಎಂದು ಈಶ್ವರ ಖಂಡ್ರೆ ಹೇಳಿದರು.

# ಮೇ 19 ರಂದು ಪ್ರಗತಿ ಪರಿಶೀಲನಾ ಸಭೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟು ಆಯೋಗದ ಅಧ್ಯಕ್ಷರು ಇದೇ ಮೇ 19 ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಅಂದು ಬೆಳಗ್ಗೆ 11ಕ್ಕೆ ಅವರ ಅಧ್ಯಕ್ಷತೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿವಿಧ ಯೋಜನೆಗಳಡಿ ಇಲಾಖೆಗಳಿಗೆ ನೀಡಲಾಗಿರುವ ಅನುದಾನದ ಸಮರ್ಪಕ ವಿತರಣೆ, ವಿಳಂಬ ಹಾಗೂ ಕುಂದು ಕೊರತೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ. ಜಿಲ್ಲೆಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ವೈ. ಎ. ಕಾಳೆ ತಿಳಿಸಿದ್ದಾರೆ.

# ಆದರ್ಶ ಪಾಲಿಸಿದರೆ ಜಯಂತಿಗಳು ಅರ್ಥಪೂರ್ಣ

• ಮಲ್ಲಮ್ಮ ನುಡಿ ವಾರ್ತೆ ಬೇಲೂರು



ಮಹಾಪುರುಷರ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಜಯಂತಿ ಆಚರಣೆಗಳಿಗೆ ನಿಜವಾದ ಅರ್ಥ ಬರುತ್ತದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ಬೇಲೂರಿನಲ್ಲಿಂದು ಬಸವಜಯಂತಿ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಸೋದರತ್ವ, ಸಹಬಾಳ್ವೆಯಿರುವ, ಲಿಂಗ ತಾರತಮ್ಯ ರಹಿತ, ವರ್ಗರಹಿತ, ಶ್ರೇಣಿ ರಹಿತ ಸಮಸಮಾಜದ ನಿರ್ಮಾಣ ಬಸವಣ್ಣನವರ ಕನಸಾಗಿತ್ತು. ನಾವು ಇಂತಹ ಮಹಾನ್ ತತ್ವಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಬಸವಕಲ್ಯಾಣದ ಅನುಭವಮಂಟಪ ಬಸವಾದಿ ಪ್ರಮಥರು ಈ ಜಗತ್ತಿಗೆ ನೀಡಿದ ಕೊಡುಗೆ–ಯಾಗಿದೆ. ಅನುಭವಮಂಟಪದಲ್ಲಿ ಅಕ್ಕಮಹಾದೇವಿ, ಮುಕ್ತಾಯಕ್ಕ ಮೊದಲಾದ ಶರಣೆಯರೂ ತಮ್ಮ ಅಭಿಪ್ರಾಯ ಮಂಡಿಸುತ್ತಿದ್ದರು. ಇಲ್ಲಿ ಸಕಲ, ಜಾತಿ ಜನಾಂಗದವರಿಗೂ ಅವಕಾಶವಿತ್ತು. ಈಗ ಅಲ್ಲಿ 770 ಅಮರಗಣಂಗಳ ಸ್ತಂಭಗಳೊಂದಿಗೆ ಆಧುನಿಕ ಅನುಭವಮಂಟಪ ನಿರ್ಮಿಸಲಾಗುತ್ತಿದೆ ಎಂದರು.


ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂದು ನಾವಿಂದು ಪ್ರತಿಪಾದಿಸುವ ಅಂಶಗಳನ್ನು 12ನೇ ಶತಮಾನದಲ್ಲೇ ನಮ್ಮ ಶರಣರು ಜಾರಿಗೆ ತಂದಿದ್ದರು. ಎಲ್ಲ ಸಮಸ್ಯೆಗೂ ಪರಿಹಾರವಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷರೂ ಈಶ್ವರ ಖಂಡ್ರೆ ಹೇಳಿದರು.

ಬಸವಣ್ಣನವರು ಕಾಯಕವೇ ಕೈಲಾಸ ಎಂದು ಹೇಳಿದರು. ಕಷ್ಟಪಟ್ಟು ದುಡಿಯಬೇಕು. ಜೀವನಕ್ಕೆ ಎಷ್ಟು ಬೇಕೋ ಅಷ್ಟು ಬಳಸಿ, ಉಳಿದಿದ್ದನ್ನು ದಾಸೋಹದ ಮೂಲಕ ಸಮಾಜಕ್ಕೆ ನೀಡಬೇಕು ಎಂದು ತಿಳಿಸಿದರು. ದಯವೇ ಧರ್ಮದ ಮೂಲವಯ್ಯ ಎಂದರು. ಇದೆಲ್ಲವೂ ಸರ್ವಕಾಲಕ್ಕೂ ಪ್ರಸ್ತುತ ಎಂದರು. ಇಂದಿನ ಯುವಜನರು ಮುಂದಿನ ಸಮಾಜದ ಕಣ್ಣುಗಳು. ಅಣುಶಕ್ತಿಗಿಂತ ಮಿಗಿಲು. ಅವರು ಮುಖ್ಯವಾಹಿನಿಗೆ ಬರಬೇಕು. ಆದರೆ ಇಂದು ಶೇ.30ರಷ್ಟು ಯುವಜನರು ದುರ್ಗುಣಗಳ ದಾಸರಾಗುತ್ತಿದ್ದಾರೆ. ಮದ್ಯಪಾನ, ಧೂಮಪಾನ, ಮಾದಕದ್ರವ್ಯ ವ್ಯಸನದಿಂದ ತಮ್ಮ ಆರೋಗ್ಯವನ್ನೂ ನಾಶಮಾಡಿಕೊಳ್ಳುತ್ತಿದ್ದಾರೆ. ಸಮಾಜದ ಸ್ವಾಸ್ಥ್ಯವನ್ನೂ ನಾಶ ಮಾಡುತ್ತಿದ್ದಾರೆ ಎಂದರು.

ಹೈದ್ರಾಬಾದ್ ವಿಮೋಚನೆಗಾಗಿ, ಕರ್ನಾಟಕ ಏಕೀಕರಣಕ್ಕಾಗಿ ಹೋರಾಟ ಮಾಡಿದ, ಶಾಸಕರಾಗಿ ಜನ ಸೇವೆ ಮಾಡಿದ ಮತ್ತು ಮಹಾಸಭಾ ಬೆಳೆಸಲು ಅವಿರತವಾಗಿ ಶ್ರಮಿಸಿದ ತಮ್ಮ ತಂದೆ ಲಿಂಗೈಕ್ಯ ಭೀಮಣ್ಣ ಖಂಡ್ರೆ ತಮಗೆ ಆದರ್ಶ, ರೋಲ್ ಮಾಡಲ್ ಎಂದು ಈಶ್ವರ ಖಂಡ್ರೆ ಹೇಳಿದರು.

# ಮನೆಗಳ ಟಿವಿಗಳು ಸುಟ್ಟು ಹೋಗಿದ್ದಕ್ಕೆ ಯಾರು ಹೊಣೆ?

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್



ನಗರದ ಭವಾನಿ ಕಾಲೋನಿಯಲ್ಲಿ ಕಳೆದ ಒಂದು ವರ್ಷದಿಂದ ಟ್ರಾನ್ಸ್‌ಫಾರ್ಮರ್ (ಟಿ.ಸಿ) ಸಮಸ್ಯೆ ತೀವ್ರವಾಗಿದ್ದು, ವಿದ್ಯುತ್ ಇಲಾಖೆಯ ಅಧಿಕಾರಿಗಳ ಬೇಜವಾಬ್ದಾರಿತನದಿಂದ ಹಲವು ಮನೆಗಳಲ್ಲಿ ಟಿವಿ ಸೇರಿದಂತೆ ವಿದ್ಯುತ್ ಉಪಕರಣಗಳು ಸುಟ್ಟು ಹೋಗಿವೆ ಎಂಬ ಗಂಭೀರ ಆರೋಪಗಳು ಕೇಳಿಬರುತ್ತಿವೆ.

ಸ್ಥಳೀಯ ನಿವಾಸಿಗಳ ಪ್ರಕಾರ, ಪ್ರದೇಶದಲ್ಲಿ ನಿರಂತರವಾಗಿ ಹೈ ವೋಲ್ಟೇಜ್ ಸಮಸ್ಯೆ ಉಂಟಾಗುತ್ತಿದ್ದು, ಅನೇಕ ಬಾರಿ ದೂರು ನೀಡಿದರೂ ಅಧಿಕಾರಿಗಳು ಶಾಶ್ವತ ಪರಿಹಾರಕ್ಕೆ ಮುಂದಾಗಿಲ್ಲ. ಪರಿಣಾಮವಾಗಿ ಹಲವರ ಮನೆಗಳಲ್ಲಿ ಟಿವಿ, ಫ್ರಿಜ್, ಫ್ಯಾನ್ ಸೇರಿದಂತೆ ವಿವಿಧ ಎಲೆಕ್ಟ್ರಾನಿಕ್ ಉಪಕರಣಗಳು ಹಾನಿಗೊಳಗಾಗಿವೆ ಎಂದು ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

"ಪ್ರತಿ ತಿಂಗಳು ವಿದ್ಯುತ್ ಬಿಲ್ ಸರಿಯಾಗಿ ಪಾವತಿಸುತ್ತಿದ್ದೇವೆ. ಆದರೆ ಸುರಕ್ಷಿತ ವಿದ್ಯುತ್ ಪೂರೈಕೆ ನೀಡುವಲ್ಲಿ ಇಲಾಖೆ ಸಂಪೂರ್ಣ ವಿಫಲವಾಗಿದೆ" ಎಂದು ನಿವಾಸಿಗಳು ಅಸಮಾಧಾನ ಹೊರಹಾಕಿದ್ದಾರೆ. ಕೆಲವರು ತಮ್ಮ ಹಾನಿಯಾದ ಉಪಕರಣಗಳ ಫೋಟೋಗಳೊಂದಿಗೆ ಇಲಾಖೆಗೆ ಮನವಿ ಸಲ್ಲಿಸಿದ್ದರೂ ಯಾವುದೇ ಪರಿಹಾರ ಸಿಕ್ಕಿಲ್ಲ ಎಂದು ದೂರಿದ್ದಾರೆ.

ಸ್ಥಳೀಯರ ಆರೋಪದಂತೆ, ಸಮಸ್ಯೆ ಕುರಿತು ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ತಾತ್ಕಾಲಿಕ ದುರಸ್ತಿ ಕಾರ್ಯ ಮಾತ್ರ ನಡೆಸಲಾಗಿದ್ದು, ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಕೆ ಅಥವಾ ಶಾಶ್ವತ ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗಿಲ್ಲ. ಇದರಿಂದ ಸಾರ್ವಜನಿಕರಲ್ಲಿ ಇಲಾಖೆಯ ವಿರುದ್ಧ ಆಕ್ರೋಶ ಹೆಚ್ಚಾಗಿದೆ.

ರಾಜ್ಯದ ಇಂಧನ ಸಚಿವರಾದ ಎ. ಎ. ಉಜಅಡಿಂಜ ಅವರು ಈ ಗಂಭೀರ ಸಮಸ್ಯೆಗೆ ಉತ್ತರಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. "ಜನರ ಮನೆಗಳ ಉಪಕರಣಗಳು ಸುಟ್ಟು ಹೋದ ನಷ್ಟಕ್ಕೆ ಯಾರು ಹೊಣೆ? ಜನರಿಗೆ ಪರಿಹಾರ ಯಾವಾಗ?" ಎಂಬ ಪ್ರಶ್ನೆಗಳು ಈಗ ಭವಾನಿ ಕಾಲೋನಿಯಲ್ಲಿ ಕೇಳಿಬರುತ್ತಿವೆ.

ತಕ್ಷಣ ತಾಂತ್ರಿಕ ಪರಿಶೀಲನೆ ನಡೆಸಿ, ದೋಷಪೂರಿತ ಟ್ರಾನ್ಸ್‌ಫಾರ್ಮರ್ ಬದಲಾಯಿಸಿ, ಹಾನಿಗೊಳಗಾದ ಕುಟುಂಬಗಳಿಗೆ ಪರಿಹಾರ ಒದಗಿಸಬೇಕು ಎಂದು ನಿವಾಸಿಗಳು ಒತ್ತಾಯಿಸಿದ್ದಾರೆ.

## 25 ಕೋಟಿ ರೂ. ವೆಚ್ಚದಲ್ಲಿ ಸಾಲುಮರದ ತಿಮ್ಮಕ್ಕ ಸ್ಮಾರಕ: ಈಶ್ವರ ಖಂಡ್ರೆ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ

## ಅನಧಿಕೃತ ಕಲ್ಲು ಗಣಿ ಮತ್ತು ಮರಳು ಸಾಗಣೆ 16 ಪ್ರಕರಣ ದಾಖಲು



**ವಿಜಯನಗರ (ಹೊಸಪೇಟೆ):** ಜಿಲ್ಲೆಯಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ, ಮರಳು ಸಾಗಣಿ ಹಾಗೂ ಮಣ್ಣು ಸಾಗಣೆ ಸೇರಿದಂತೆ ವಿವಿಧ ರೀತಿಯ ಒಟ್ಟು 16 ಪ್ರಕರಣ ದಾಖಲಿಸಿ ರೂ.4.45 ಲಕ್ಷ ದಂಡ ವಿಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಮಾಹಿತಿ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯ ಉಪಖನಿಜ ಕಟ್ಟಡ ಕಲ್ಲು ಅನಧಿಕೃತ ಸಾಗಾಣಿಕೆಗೆ ಸಂಬಂಧಿಸಿದಂತೆ 9 ಪ್ರಕರಣ ದಾಖಲಾಗಿದ್ದು, ರೂ. 3.9 ಲಕ್ಷ ದಂಡ ವಿಧಿಸಲಾಗಿದೆ. ಅಕ್ರಮ ಮರಳು ಸಾಗಣೆಗೆ ಸಂಬಂಧಿಸಿದ 6 ಪ್ರಕರಣ ದಾಖಲಾಗಿದ್ದು, ರೂ 1.2 ಲಕ್ಷ ದಂಡ ಮತ್ತು ಅನಧಿಕೃತ ಮಣ್ಣು ಸಾಗಣೆಗೆ ಸಂಬಂಧಿಸಿದ 1 ಪ್ರಕರಣ ಸೇರಿ ಜಿಲ್ಲೆಯಲ್ಲಿ ಒಟ್ಟು 16 ಪ್ರಕರಣಕ್ಕೆ ಒಟ್ಟು 4.45 ಲಕ್ಷ ರೂಪಾಯಿ ದಂಡ ವಸೂಲಿ ಮಾಡಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ನಡೆಯುತ್ತಿರುವ ಅನಧಿಕೃತ ಗಣಿಗಾರಿಕೆ ಮತ್ತು ಅಕ್ರಮ ಮರಳು ಮಾರಾಟ ಜಾಲವನ್ನು ಬೇರುಸಹಿತ ಕಿತ್ತೆಸೆಯಲು ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಜಿಲ್ಲೆಯ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಗಣಿಗಾರಿಕೆ ಪ್ರದೇಶಗಳಿಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳು ನಿರಂತರವಾಗಿ ಭೇಟಿ ನೀಡಿ ಪರಿಶೀಲಿಸಬೇಕು. ನಿಗದಿಪಡಿಸಿದ ಮಿತಿಗಿಂತ ಹೆಚ್ಚಿನ ಗಣಿಗಾರಿಕೆ, ಮರಳು ಸಾಗಾಟ ನಡೆಸುತ್ತಿರುವುದು ಕಂಡುಬಂದಲ್ಲಿ ಅಂತಹ ಪರವಾನಗಿಗಳನ್ನು ತಕ್ಷಣವೇ ರದ್ದುಗೊಳಿಸುವುದರ ಜೊತೆಗೆ ಭಾರೀ ದಂಡ ವಿಧಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯ ನದಿ ಪಾತ್ರಗಳಲ್ಲಿ ಹಾಗೂ ಹಳ್ಳ-ಕೊಳ್ಳಗಳಲ್ಲಿ ರಾಜಾರೋಷವಾಗಿ ನಡೆಯುತ್ತಿರುವ ಮರಳು ದಂಧೆಯನ್ನು ತಡೆಯಲು ಪೊಲೀಸ್ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಕಾರ್ಯಾಚರಣೆ ನಡೆಸಬೇಕು. ಅಕ್ರಮವಾಗಿ ಮರಳು ಸಾಗಿಸುವ ವಾಹನಗಳನ್ನು ವಶಪಡಿಸಿಕೊಂಡು, ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು ಎಂದರು. ಸರ್ಕಾರದ ನೂತನ ಮರಳು ನೀತಿಯನ್ವಯ ಸಾರ್ವಜನಿಕರಿಗೆ ಮತ್ತು ಸರ್ಕಾರಿ ಕಾಮಗಾರಿಗಳಿಗೆ ಸಕಾಲದಲ್ಲಿ ಮರಳು ಲಭ್ಯವಾಗುವಂತೆ ನೋಡಿಕೊಳ್ಳಬೇಕು. ಮರಳು ವಿತರಣಾ ಕೇಂದ್ರಗಳಲ್ಲಿ ಪಾರದರ್ಶಕತೆ ಕಾಪಾಡಬೇಕು ಹಾಗೂ ಮಧ್ಯವರ್ತಿಗಳ ಹಾವಳಿಯನ್ನು ಸಂಪೂರ್ಣವಾಗಿ ನಿಯಂತ್ರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯ ಗಡಿಭಾಗದ ಚೆಕ್ ಪೋಸ್ಟ್‌ಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ, 24/7 ನಿಗಾ ಇರಿಸಬೇಕು. ರಾತ್ರಿ ವೇಳೆ ನಡೆಯುವ ಅಕ್ರಮ ಗಣಿ ಮತ್ತು ಮರಳು ಸಾಗಾಣಿ ತಡೆಯಲು ರಾತ್ರಿ ಗಸ್ತು ಪಡೆಯನ್ನು ಬಲಪಡಿಸಲು ಪೊಲೀಸ್ ಇಲಾಖೆಗೆ ಸೂಚನೆ ನೀಡಿದ ಅವರು, ಪರಿಸರ ಸಮತೋಲನ ಕಾಯ್ದುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ. ನೈಸರ್ಗಿಕ ಸಂಪನ್ಮೂಲಗಳ ಲೂಟಿಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಖಡಕ್ ಎಚ್ಚರಿಕೆ ನೀಡಿದರು.

## ಎಸ್.ಎಸ್.ಎಲ್.ಸಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ



**ಬೀದರ:** ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಬೃಹತ್ ಸನ್ಮಾನ ಕಾರ್ಯಕ್ರಮವನ್ನು ಪೂಜ್ಯ ಡಾ.ಚನ್ನಬಸವ ಪಟ್ಟದೇವರು ರಂಗಮಂದಿರ ಬೀದರನಲ್ಲಿ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಚಂದ್ರಕಾಂತ ಶಾಬಾದ್ಕರ್ ಡಿ.ಡಿ.ಪಿ.ಯು ಮಾತನಾಡಿ ವಿದ್ಯಾರ್ಥಿಗಳಿಗೆ ಉತ್ತಮ ಫಲಿತಾಂಶಕ್ಕಾಗಿ ಪ್ರಶಂಸಿಸಿದ್ದಾರೆ. ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸದ ಮಾರ್ಗಗಳನ್ನು ಆಯ್ಕೆ ಮಾಡುವಲ್ಲಿ ಮಾರ್ಗದರ್ಶನ ನೀಡಿದರು. ಈ ಸಂಸ್ಥೆಯು ಪಿ.ಯು.ಬೋರ್ಡನ ಎಲ್ಲಾ ನಿಯಮಗಳನ್ನು ಪಾಲಿಸುತ್ತದೆ ಮತ್ತು ಅತ್ಯುತ್ತಮ ಸಹಕಾರವನ್ನು ನೀಡುವ ಒಂದು ಕಾಲೇಜಾಗಿದೆ ಎಂದು ಪ್ರಶಂಸಿಸಿದ್ದಾರೆ. ಅಧ್ಯಕ್ಷರಿಗೆ ಉತ್ತಮ ಫಲಿತಾಂಶಕ್ಕಾಗಿ ಅಭಿನಂದಿಸಿದ್ದಾರೆ. ಕೇವಲ ವಿಸಡಮ್ ಸಂಸ್ಥೆಯ ಮಕ್ಕಳಿಗಲ್ಲದೆ ಇಡಿ ಬೀದರ ಜಿಲ್ಲೆಯ ಎಸ್.ಎಸ್.ಎಲ್.ಸಿ.ಸಾಧಕರಿಗೆ ಆಹ್ವಾನಿಸಿ ಸನ್ಮಾನಿಸುತ್ತಿರುವುದು ಪ್ರಶಂಸಾರ್ಹವಾಗಿದೆ ಎಂದು ಹೇಳಿದರು.

ರೇವಣಸಿದ್ದಪ್ಪ ಜಲಾದೆ ರಾಜ್ಯಾಧ್ಯಕ್ಷರು ಖಾಸಗಿ ಅನುದಾನ ರಹಿತ ಶಾಲಾ ಆಡಳಿತ ಮಂಡಳಿ ಬೆಂಗಳೂರು ಇವರು ಮಾತನಾಡಿ ಮುಹಮ್ಮದ ಆಸಿಫುದ್ದಿನ್ ಅವರು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಬೀದರ ಜಿಲ್ಲೆಯ ಸರ್ಕಾರಿ, ಅನುದಾನಿತ, ಅನುದಾನ ರಹಿತ ಕನ್ನಡ, ಉರ್ದು, ಇಂಗ್ಲೀಷ, ಮರಾಠಿ ಮಾಧ್ಯಮದ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮವಾಗಿದೆ ಎಂದು ಹೇಳುತ್ತ ಸಂಸ್ಥೆಯ ಅಧ್ಯಕ್ಷರಿಗೆ ಅಭಿನಂದಿಸಿದರು.

ವಿಸ್ಡಮ್ ಸಮೂಹ ಸಂಸ್ಥೆಯ ಅಧ್ಯಕ್ಷರಾದ ಮುಹಮ್ಮದ ಆಸಿಫುದ್ದಿನ್ ಅವರು ಮಾತನಾಡಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಶಿಕ್ಷಕರಿಗೆ, ಮುಖ್ಯೋಪಾದ್ಯಾಯರಿಗೆ ಹಾಗು ಶಾಲಾ ಆಡಳಿತ ಮಂಡಳಿಯವರಿಗೆ ಈ ಫಲಿತಾಂಶಕ್ಕಾಗಿ ಹೃತ್ಪೂರ್ವಕವಾಗಿ ಅಭಿನಂದಿಸಿದರು.

ಬೀದರ ಜಿಲ್ಲೆಯ 70ಕ್ಕಿಂತ ಹೆಚ್ಚು ಪ್ರೌಢ ಶಾಲೆಯ ವಿದ್ಯಾರ್ಥಿಗಳು, ಮುಖ್ಯೋಪಾಧ್ಯಾಯರು ಆಡಳಿತ ಮಂಡಳಿಯವರು ಭಾಗವಹಿಸಿದ್ದರು. ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ "ವಿಸಡಮ್ ಎಕ್ಸಲೇನ್ಸ ಅವಾರ್ಡ" ನೀಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮುಹಮ್ಮದ ಆಸಿಫುದ್ದಿನ್ ಅವರು ಒಂದು ದೊಡ್ಡ ಘೋಷಣೆಯನ್ನು ಮಾಡಿದರು. ಅದೇನೆಂದರೆ ಎಸ್.ಎಸ್.ಎಲ್.ಸಿ ಪಾಸಾದ ವಿದ್ಯಾರ್ಥಿಗಳ ಮುಂದಿನ ವ್ಯಾಸಂಗಕ್ಕಾಗಿ 95% ಪ್ರತಿಶತಕಿಂತ ಹೆಚ್ಚು ಅಂಕ ಪಡೆದ 150 ವಿದ್ಯಾರ್ಥಿಗಳಿಗೆ 100% ಬೋಧನಾ ಶುಲ್ಕದಲ್ಲಿ ರಿಯಾಯತಿ ನೀಡಲು ನಿರ್ಧರಿಸಿದ್ದೇವೆ. ಅದೇ ರೀತಿಯಾಗಿ 70%, 80%, ಮತ್ತು 90%ಕ್ಕಿಂತ ಹೆಚ್ಚು ಅಂಕ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ವಿಶೇಷ ವಿದ್ಯಾರ್ಥಿ ವೇತನವನ್ನು ನೀಡಲಾಗುವುದು ಎಂದು ಹೇಳಿದರು.

# ಅದ್ದೂರಿ ವಯೋನಿವೃತ್ತಿ ಅಭಿನಂದನಾ ಸಮಾರಂಭ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ನಗರದ ಎಸ್.ಆರ್.ಎಸ್. ಫಂಕ್ಷನ್ ಹಾಲ್‌ನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಂಗ್ಲ ವಿಭಾಗದ ಮುಖ್ಯಸ್ಥರು ಹಾಗೂ ಸಹ ಪ್ರಾಧ್ಯಾಪಕರಾದ ಡಾ. ಶೀಲಾ ಎಸ್. ಬಿರಾದಾರ ಅವರ ವಯೋನಿವೃತ್ತಿ ಅಭಿನಂದನಾ ಸಮಾರಂಭವನ್ನು ಅವರ ಪುತ್ರ ಅಮರ ಬಿರಾದಾರ ಹಾಗೂ ಕುಟುಂಬದವರು ಅರ್ಥಪೂರ್ಣವಾಗಿ ಆಯೋಜಿಸಿದ್ದರು.

ಕಾರ್ಯಕ್ರಮದಲ್ಲಿ ಹಿರಿಯ ಶಿಕ್ಷಣತಜ್ಞರು, ಸಮಾಜ ಸೇವಕರು, ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಿ ಡಾ. ಶೀಲಾ ಎಸ್. ಬಿರಾದಾರ ಅವರ ಶೈಕ್ಷಣಿಕ ಸೇವೆ, ಸಾಧನೆ ಮತ್ತು ವ್ಯಕ್ತಿತ್ವವನ್ನು ಕೊಂಡಾಡಿದರು.

ಅಕ್ಕಮಹಾದೇವಿ ಮಹಿಳಾ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಪ್ರೊ. ಲೀಲಾವತಿ ಚಕೋತೆ, ಸಮಾಜ ಸೇವಕರು, ದಾನಿಗಳು ಹಾಗೂ ಸಾಮಾಜಿಕ ಚಿಂತಕರಾದ ಡಾ. ಗುರಮ್ಮ ಸಿದ್ದಾರೆಡ್ಡಿ, ಅಕ್ಕಮಹಾದೇವಿ ಮಹಿಳಾ ಕಾಲೇಜಿನ ನಿವೃತ್ತ ಮನೋವಿಜ್ಞಾನ ವಿಭಾಗದ ಪ್ರಾಧ್ಯಾಪಕರಾದ ಡಾ. ವಜ್ರಾಪಾಟೀಲ್, ಸರ್ಕಾರಿ ಪದವಿ ಪೂರ್ವ ಕಾಲೇಜಿನ ನಿವೃತ್ತ ಪ್ರಾಂಶುಪಾಲರು ಹಾಗೂ ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಶ್ರೀ ವಿಠ್ಠಲದಾಸ ಪ್ಯಾಗೆ, ಭೌತಶಾಸ್ತ್ರ ಪ್ರಾಧ್ಯಾಪಕರು ಹಾಗೂ ವಿದ್ಯಾ ಎಜುಕೇಷನಲ್ ಮತ್ತು ಚಾರಿಟೇಬಲ್ ಟ್ರಸ್ಟ್ ಸಂಸ್ಥಾಪಕರಾದ ಪ್ರೊ. ವಿ.ಬಿ. ಚಂದ್ರಶೇಖರ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀ ಮಾಣಿಕ್ ರಾವ್ ಕಟಗಿ ಮಾತನಾಡಿದರು.

ಅವರು ಡಾ. ಶೀಲಾ ಎಸ್. ಬಿರಾದಾರ ಅವರ ಬದುಕಿನ ಹಾದಿ, ಜವಾಬ್ದಾರಿತನ, ಶೈಕ್ಷಣಿಕ ಸಾಧನೆಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿ, ಆತ್ಮವಿಶ್ವಾಸ, ಧೃಡ ಸಂಕಲ್ಪ ಹಾಗೂ ಮನೋಬಲದಿಂದ ಬದುಕಿನಲ್ಲಿ ಯಶಸ್ಸು ಸಾಧಿಸಬಹುದು ಎಂಬುದಕ್ಕೆ ಡಾ. ಶೀಲಾ ಬಿರಾದಾರ ಅವರೇ ಜೀವಂತ ಉದಾಹರಣೆ ಎಂದು ಅಭಿಪ್ರಾಯಪಟ್ಟರು. ಜೊತೆಗೆ ಅವರ ನಿವೃತ್ತ ಜೀವನ ಸುಖಮಯವಾಗಿರಲಿ ಎಂದು ಶುಭ ಹಾರೈಸಿದರು.

ಬಿ.ವಿ.ಬಿ ಕಾಲೇಜಿನ ಪ್ರಾಂಶುಪಾಲರಾದ ಡಾ. ದೀಪಾ ರಾಗಾ, ಡಾ. ಸ್ಮೃತಿ ಹಾಗೂ ಡಾ. ವೈಶಾಲಿ ಅವರು ಮಾತನಾಡಿ ಡಾ. ಶೀಲಾ ಅವರಿಗೆ ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಪುತ್ರ ಅಮರ ಬಿರಾದಾರ ಅವರು ತಮ್ಮ ತಾಯಿಯ ಜೀವನದ ವಿವಿಧ ಘಟ್ಟಗಳು, ಕುಟುಂಬದ ಮೌಲ್ಯಗಳು ಹಾಗೂ ಸುದೀರ್ಘ ಶೈಕ್ಷಣಿಕ ಪಯಣದ ಯಶೋಗಾಥೆಯನ್ನು ಕಿರುಚಿತ್ರದ ರೂಪದಲ್ಲಿ ಪ್ರಸ್ತುತಪಡಿಸಿದರು. ಈ ಕಿರುಚಿತ್ರ-ಕ್ಕೆ ತೇಜಸ್ವಿ ಚಾಂದಕವಠೆ ಧ್ವನಿ ಸಂಯೋಜನೆ ಮಾಡಿದ್ದು, ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಶೀಲಾ ಎಸ್. ಬಿರಾದಾರ ಅವರು ತಮ್ಮ ಸಾಧನೆಯಲ್ಲಿ ತಮ್ಮ ಪಾಲಕರು, ಅತ್ತೆ-ಮಾವ, ಬಂಧು-ಮಿತ್ರರು, ಹಿತೈಷಿಗಳು ಹಾಗೂ ಸಹೋದ್ಯೋಗಿಗಳ ಪಾತ್ರ ಅಪಾರವಾಗಿದೆ ಎಂದು ಕೃತಜ್ಞತಾಭಾವ ವ್ಯಕ್ತಪಡಿಸಿದರು.

## ಯೋಧರ ಗೌರವಧನ ಹೆಚ್ಚಿಸಲು ಮನವಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ರಾಜ್ಯ ಸರ್ಕಾರದಿಂದ ಸ್ವಾತಂತ್ರ್ಯ ಯೋಧರಿಗೆ ನೀಡಲಾಗುತ್ತಿರುವ ಮಾಸಿಕ ಗೌರವಧನವನ್ನು ರೂ.10,000ರಿಂದ ರೂ.20,000ಕ್ಕೆ ಹೆಚ್ಚಿಸಬೇಕೆಂದು ರಾಜ್ಯ ಹಿರಿಯ ನಾಗರಿಕರ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಉಪ್ಪಿನ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಈ ಕುರಿತು ರಾಜ್ಯದ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಲಾಗಿದ್ದು, ಬೀದರ ಜಿಲ್ಲಾ ಅಧಿಕಾರಿಗಳ ಮುಖಾಂತರ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರವನ್ನು ನೀಡಲಾಯಿತು.

2018ರಿಂದ ಸ್ವಾತಂತ್ರ್ಯ ಯೋಧರಿಗೆ ತಿಂಗಳಿಗೆ ರೂ.10,000 ಗೌರವಧನ ನೀಡಲಾಗುತ್ತಿದ್ದು, ಕಳೆದ ಎಂಟು ವರ್ಷಗಳಿಂದ ಇದರಲ್ಲಿ ಯಾವುದೇ ಪರಿಷ್ಕರಣೆ ಆಗಿಲ್ಲ. ಇದೇ ಅವಧಿಯಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ 6ನೇ ಹಾಗೂ 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಹೆಚ್ಚಳ ನೀಡಲಾಗಿದೆ. ಸಚಿವರು, ಸಂಸದರು, ಶಾಸಕರು ಹಾಗೂ ಇತರ ಚುನಾಯಿತ ಪ್ರತಿನಿಧಿಗಳ ಸಂಬಳ ಮತ್ತು ಭತ್ಯೆಗಳನ್ನು ಸಹ ಬೆಲೆ ಸೂಚ್ಯಂಕದ ಆಧಾರದ ಮೇಲೆ ಹೆಚ್ಚಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಆದರೆ, ದಿನೇದಿನೇ ಅಗತ್ಯ ವಸ್ತುಗಳ ಬೆಲೆ, ಆಸ್ಪತ್ರೆ ಹಾಗೂ ಔಷಧಿ ವೆಚ್ಚಗಳು ಹೆಚ್ಚುತ್ತಿರುವ ಹಿನ್ನೆಲೆ ಸ್ವಾತಂತ್ರ್ಯ ಯೋಧರ ಜೀವನ ನಿರ್ವಹಣೆ ಕಷ್ಟಕರವಾಗುತ್ತಿದೆ. ಹೀಗಾಗಿ ಪ್ರಸ್ತುತ ಪರಿಸ್ಥಿತಿಯನ್ನು ಪರಿಗಣಿಸಿ ಗೌರವಧನವನ್ನು ರೂ.20,000ಕ್ಕೆ ಹೆಚ್ಚಿಸುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ 95 ವರ್ಷದ ಹಿರಿಯ ಸ್ವಾತಂತ್ರ್ಯ ಯೋಧೆ ಸರಸ್ವತಿಬಾಯಿ ಉಪ್ಪಿನ ಹಾಗೂ ಶಿಕ್ಷಕರಾದ ರಾಜಶೇಖರ ಉಪ್ಪಿನ ಉಪಸ್ಥಿತರಿದ್ದರು.

## ಅಕ್ರಮ ಪಡಿತರ ಅಕ್ಕಿ ಸಾಗಣೆ ಪ್ರಕರಣ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ಅಕ್ರಮ ಪಡಿತರ ಅಕ್ಕಿ ಸಾಗಣೆ ಪ್ರಕರಣದಲ್ಲಿ, ಬಳ್ಳಾರಿ ಎಸ್‌ಪಿ ಸೂಮನ್ ಡಿ. ಪನ್ನೇಕರ್ ಅವರ ಗನ್‌ಮ್ಯಾನ್ ದೇವರಾಜು ಅವರನ್ನು ಪೊಲೀಸರು ಬಂಧಿಸಿರುವ ಘಟನೆ ಇಂದು ದೊಡ್ಡ ಚರ್ಚೆಗೆ ಕಾರಣವಾಗಿದೆ.

ಪ್ರಾಥಮಿಕ ಮಾಹಿತಿ ಪ್ರಕಾರ, ಆಂಧ್ರಪ್ರದೇಶದ ಕಡೆಗೆ ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಎರಡು ಲಾರಿಗಳನ್ನು ದೇವರಾಜು ಹಾಗೂ ಆತನ ಸಹಚರರು ಅಡ್ಡಗಟ್ಟಿದ್ದರು. ಅವರು "ಎಸ್‌ಪಿ ಸ್ಕ್ವಾಡ್" ಅಧಿಕಾರಿಗಳೆಂದು ಹೇಳಿಕೊಂಡು ಮೊದಲು ₹5 ಲಕ್ಷ ಬೇಡಿಕೆ ಇಟ್ಟು, ಬಳಿಕ ₹3 ಲಕ್ಷ ಹಣ ವಸೂಲಿ ಮಾಡಿದ್ದಾರೆ ಎನ್ನಲಾಗಿದೆ. ಹಣ ಕೊಡದಿದ್ದರೆ ಲಾರಿಗಳನ್ನು ಸೀಜ್ ಮಾಡಿ ಜೈಲಿಗೆ ಕಳುಹಿಸುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ದೂರು ದಾಖಲಾಗಿದೆ.

ಈ ಸಂಬಂಧ ಶರಭಯ್ಯ ಎಂಬ ಅಕ್ಕಿ ಸಾಗಣೆದಾರ ಮೋಕಾ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ತನಿಖೆಯ ವೇಳೆ ದೇವರಾಜು ನಿಜವಾಗಿಯೂ ಎಸ್‌ಪಿ ಸ್ಕ್ವಾಡ್ ಹೆಸರಿನಲ್ಲಿ ಹಣ ವಸೂಲಿ ಮಾಡಿರುವುದು ಬಹಿರಂಗವಾದ ಹಿನ್ನೆಲೆಯಲ್ಲಿ, ಖುದ್ದು ಎಸ್‌ಪಿ ಸುಮನ್ ಡಿ. ಪನ್ನೇಕರ್ ಕ್ರಮ ಕೈಗೊಂಡು ಬಂಧನಕ್ಕೆ ಸೂಚನೆ ನೀಡಿದ್ದಾರೆ ಎಂದು ವರದಿಯಾಗಿದೆ.

**ಪ್ರಕರಣದ ಪ್ರಮುಖ ಅಂಶಗಳು**

- ಅಕ್ರಮ ಪಡಿತರ ಅಕ್ಕಿ ಸಾಗಣೆ ಲಾರಿಗಳನ್ನು ತಡೆದು ಹಣ ಬೇಡಿಕೆ
- "ಎಸ್‌ಪಿ ಸ್ಕ್ವಾಡ್" ಹೆಸರಿನಲ್ಲಿ ದಬ್ಬಾಳಿಕೆ ಆರೋಪ
- ₹5 ಲಕ್ಷ ಬೇಡಿಕೆ, ₹3 ಲಕ್ಷ ವಸೂಲಿ ಆರೋಪ
- ಮೋಕಾ ಠಾಣೆಯಲ್ಲಿ ಪ್ರಕರಣ ದಾಖಲು
- ದೇವರಾಜು ಸೇರಿ ಸಹಚರರ ಬಂಧನ
- ಪೊಲೀಸರಿಂದ ವಿಚಾರಣೆ ಮುಂದುವರಿಕೆ

ಈ ಘಟನೆ ಬಳ್ಳಾರಿ ಪೊಲೀಸ್ ಇಲಾಖೆಗೆ ದೊಡ್ಡ ಮುಜುಗರ ತಂದಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆಯಾಗುತ್ತಿದೆ.

## ಹೊಸ ಕೈಗಾರಿಕಾ ವಸಾಹತು ಸ್ಥಾಪನೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**



ಕಲಬುರಗಿ ಜಿಲ್ಲೆಯ ನಂದೂರು ಕೆ. ಗ್ರಾಮದಲ್ಲಿ 6126.45 ಲಕ್ಷ ರೂ. ವೆಚ್ಚದಲ್ಲಿ ಹೊಸ ಕೈಗಾರಿಕಾ ವಸಾಹತು ಸ್ಥಾಪಿಸಲು ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ನಿಗಮ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಭಿದ್ಧಿ ಮಂಡಳಿ ಸಂಯುಕ್ತವಾಗಿ ಶೇ.50ರ ಅನುಪಾತದಲ್ಲಿ ಈ ವೆಚ್ಚವನ್ನು ಭರಿಸಲಿದೆ. ಈ ಪ್ರದೇಶವು ಹಿಂದುಳಿದ ಪ್ರದೇಶವಾಗಿದ್ದು, ಉದ್ದೇಶಿತ ಕೈಗಾರಿಕಾ ವಸಾಹತು ಸ್ಥಾಪನೆಯಿಂದ ಈ ಭಾಗದ ವಿದ್ಯಾವಂತ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಲಭಿಸಲಿದೆ, ಈ ಮೂಲಕ ಕೈಗಾರಕೀಕರಣ ಹಾಗೂ ಕೈಗಾರಿಕೆಯಲ್ಲಿ ಸಬಲೀಕರಣಗೊಳ್ಳಲು ಸಹಾಯಕವಾಗುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಆಶಯ ವ್ಯಕ್ತಪಡಿಸಿದ್ದಾರೆ.

## ಮಹಾಸಭಾದಿಂದ ವಿದ್ಯಾರ್ಥಿ ನಿಲಯ


• **ಮಲ್ಲಮ್ಮ ನುಡಿ ವಾರ್ತೆ ಬೇಲೂರು**



ವೀರಶೈವ ಲಿಂಗಾಯತರಲ್ಲೂ ಬಡವರಿದ್ದು, ಸಮಾಜದ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕೆ ಅನುವಾಗುವಂತೆ ತಾಲೂಕಿಗೊಂದು ವಿದ್ಯಾರ್ಥಿ ನಿಲಯ ನಿರ್ಮಾಣ ಮಹಾಸಭಾದ ಗು-ರಿಯಾಗಿದೆ ಎಂದು ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಬೇಲೂರಿನಲ್ಲಿಂದು ಬಸವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಮುದಾಯದ ಪ್ರತಿಭಾವಂತ ಮಕ್ಕಳು ಸ್ಪರ್ಧಾತ್ಮಕ ಪರೀಕ್ಷೆ ಗೆದ್ದುಕೊಳ್ಳಲು ಅನುವಾಗುವಂತೆ ತರಬೇತಿ ಕೇಂದ್ರ ಸ್ಥಾಪಿಸಲು ತೀರ್ಮಾನಿಸಲಾಗಿದೆ. ಈಗಾಗಲೇ ಹಲವು ಜಿಲ್ಲಾ ಕೇಂದ್ರಗಳಲ್ಲಿ ವಿದ್ಯಾರ್ಥಿನಿಯರಿಗಾಗಿ ವಸತಿ ನಿಲಯ ನಿರ್ಮಿಸಲಾಗಿದೆ. ಈ ವರ್ಷ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲು 1 ಕೋಟಿ ರೂ. ಮೀಸಲಿಡಲಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

# ನಡೆ-ನುಡಿ ಒಂದಾದರೆ ಜೀವನಕ್ಕೆ ಬೆಲೆ





• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ನಡೆ-ನುಡಿ ಒಂದಾದರೆ ಜೀವನಕ್ಕೊಂದು ಅರ್ಥ, ಬೆಲೆ ಬರುತ್ತದೆ ಎಂದು ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ ನುಡಿದರು.

ನಗರದ ಬಸವ ಮುಕ್ತಿ ಮಂದಿರದಲ್ಲಿ ಶುಕ್ರವಾರ ಆಯೋಜಿಸಿದ್ದ ಚಿಂತನ ಹಾಗೂ ಪ್ರಸಾದ ದಾಸೋಹ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಸಿದ್ಧೇಶ್ವರ ಸ್ವಾಮೀಜಿ ಅವರು ಬೀದರ್‌ನಲ್ಲಿ ಪ್ರವಚನ ನೀಡಿದ್ದ ಸಂದರ್ಭದಲ್ಲಿ ನಿಸರ್ಗದ ಮಡಿಲಲ್ಲಿ ಕೃಷಿ ಜತೆ ಆಧ್ಯಾತ್ಮಿಕ ಜೀವನ ನಡೆಸುವುದಾಗಿ ಹೇಳಿದ್ದೆ. ಅದರಂತೆ ನಡೆದುಕೊಂಡಿದ್ದೇನೆ ಎಂದು ಅವರು ತಿಳಿಸಿದರು.

ಸಂಕಲ್ಪ ಪೂರ್ಣಗೊಳಿಸಲು ನಗರ ತ್ಯಜಿಸಿ ಭಾತಂಬ್ರಾದಲ್ಲಿ ನೆಲೆಸಿದ್ದೇನೆ. ಅಲ್ಲಿಯ ಮಠ ಜೀರ್ಣೋದ್ಧಾರ ಮಾಡಿದ್ದೇನೆ. ಮಠದ ಅಧೀನದ 32 ಎಕರೆ ಜಮೀನಿನಲ್ಲಿ ಕೃಷಿ ಚಟುವಟಿಕೆ ಕೈಗೊಂಡಿದ್ದೇನೆ ಎಂದು ಹೇಳಿದರು.

ಆರಂಭದಲ್ಲಿ ಸಿದ್ಧೇಶ್ವರ ಸ್ವಾಮೀಜಿ ಅವರು ಮಠದ ಜಮೀನಿನಲ್ಲಿ 5 ಸಸಿ ನೆಟ್ಟಿದ್ದರು. ನಂತರ ನಾನು ಪ್ರತಿ ವರ್ಷ ಸಸಿಗಳನ್ನು ನೆಡುತ್ತಾ ಬಂದಿದ್ದೇನೆ. ಈಗ ಅಲ್ಲಿ ಮಾವು ಸೇರಿ 300 ಮರಗಳು ಇವೆ. ಕೃಷಿಯಲ್ಲಿ ಸ್ವಾವಲಂಬನೆ ಸಾಧಿಸಿದ್ದೇನೆ. ಶಾಂತಿ, ನೆಮ್ಮದಿ ಹಾಗೂ ಸಮಾಧಾನ ಕಂಡುಕೊಂಡಿದ್ದೇನೆ. 82ನೇ ವಯಸ್ಸಿನಲ್ಲೂ ಸಂತಸದಿಂದ ಇದ್ದೇನೆ ಎಂದು ತಿಳಿಸಿದರು. ಅನೇಕ ದಿನಗಳ ಅಪೇಕ್ಷೆಯಂತೆ ಇಂದು ಮಠದ ಜಮೀನಲ್ಲಿಯೇ ಬೆಳೆದ ಮಾವಿನ ಹಣ್ಣಿನ ರಸ, ಹೋಳಿಗೆ, ಭಜಿ, ಅನ್ನ, ಸಾಂಬಾರು ಪ್ರಸಾದ ಭಕ್ತರಿಗೆ ಉಣಬಡಿಸಿದ್ದೇನೆ ಎಂದರು.

ಬಸವಾದಿ ಶರಣರ ತತ್ವಗಳನ್ನು ಎಲ್ಲರೂ ಪಾಲಿಸಬೇಕು ಎಂದು ಹೇಳಿದರು. ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮಾತನಾಡಿ, ಶಿವಯೋಗೀಶ್ವರ ಸ್ವಾಮೀಜಿ ಅವರು ನುಡಿದಂತೆ ನಡೆದು ಎಲ್ಲರಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು. ಸಾಮಾಜಿಕ ಹಾಗೂ ಧಾರ್ಮಿಕ ಕ್ಷೇತ್ರಕ್ಕೆ ಶ್ರೀಗಳ ಕೊಡುಗೆ ಅಪಾರವಾಗಿದೆ ಎಂದು ಬಣ್ಣಿಸಿದರು. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಮಾತನಾಡಿ, ಅನೇಕ ಸ್ವಾಮೀಜಿಗಳು ಭಕ್ತರಿಂದ ಕಾಣಿಕೆ, ದೇಣಿಗೆ ಸ್ವೀಕರಿಸುತ್ತಾರೆ. ಆದರೆ, ಶಿವಯೋಗೀಶ್ವರ ಸ್ವಾಮೀಜಿ ಭಕ್ತರು ಹಾಗೂ ಸಮಾಜಕ್ಕೆ ಕೊಡುಗೆ ನೀಡುವವರಾಗಿದ್ದಾರೆ. ಬಸವ ಕೇಂದ್ರದ ಕಟ್ಟಡ-ಕ್ಕೆ ರೂ. 1 ಲಕ್ಷ ದೇಣಿಗೆ ನೀಡಿದ್ದರು ಎಂದು ಸ್ಮರಿಸಿದರು. ಶ್ರೀಗಳು ಬೀದರ್‌ನ ಬಸವ ಮುಕ್ತಿ ಮಂದಿರದಲ್ಲಿಯೂ ಬಸವ ತತ್ವ ಚಟುವಟಿಕೆಗಳನ್ನು ನಿರಂತರ ಹಮ್ಮಿಕೊಳ್ಳಬೇಕು ಎಂದು ಮನವಿ ಮಾಡಿದರು.

ಬಸವ ಮುಕ್ತಿ ಮಂದಿರದ ಉತ್ತರಾಧಿಕಾರಿ ಬಸವಲಿಂಗ ಸ್ವಾಮೀಜಿ ಮಾತನಾಡಿ, ಶಿವಯೋಗೇಶ್ವರ ಸ್ವಾಮೀಜಿ ಅವರ ಮಾರ್ಗದರ್ಶನದಂತೆ ಸಾಮಾಜಿಕ, ಧಾರ್ಮಿಕ ಹಾಗೂ ದೇಶ ಸೇವೆ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದೇನೆ ಎಂದು ಹೇಳಿದರು.


ಬಸವಾದಿ ಶರಣರ ವಚನಗಳನ್ನು ಮನೆ, ಮನೆ ತಲುಪಿಸುವ ಕಾರ್ಯ ಮಾಡುವೆ ಎಂದು ತಿಳಿಸಿದರು. ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ, ಪ್ರಮುಖರಾದ ಎಂ.ಜಿ. ದೇಶಪಾಂಡೆ, ರೇವಣಸಿದ್ದಪ್ಪ ಜಲಾದೆ, ಕುಶಾಲ್ ಯಾಬಾ, ರಾಜಶೇಖರ ತಾಂಡೂರೆ, ಬಸವಣಪ್ಪ ನೇಳಗೆ, ಶಿವಮೂರ್ತಿ ಬಟನಾಪುರೆ, ವಿಶ್ವನಾಥ ಮಠಪತಿ, ವಿಜಯಕುಮಾರ ಬಾಬಣೆ, ನಾಗರಾಜ ಸ್ವಾಮಿ, ಕಾಶೀನಾಥ ಸೂರ್ಯವಂಶಿ, ಅರವಿಂದ ಕಾರಬಾರಿ, ವೀರಶೆಟ್ಟಿ ಪಾಟೀಲ, ಡಾ. ಸಿ.ಎಸ್. ಮಾಲಿಪಾಟೀಲ, ಸಿದ್ಧಾರೂಢ ಭಾಲ್ಕೆ, ಅಶೋಕ ದಿಡಗೆ, ವೀರಶೆಟ್ಟಿ ಚನ್ನಶೆಟ್ಟಿ, ವೀರಭದ್ರಪ್ಪ ಬುಯ್ಯಾ, ಮಲ್ಲಿಕಾರ್ಜುನ ಪಂಚಾಕ್ಷರಿ, ಸಂಗು ಸಾಹುಕಾರ, ರಾಕಿ ಚೌಧರಿ, ಸೋಮನಾಥ ಗಂಗಶೆಟ್ಟಿ, ನಾಗಶೆಟ್ಟೆಪ್ಪ ದಾಡಗಿ, ಭಗವಂತ ಔದತ್ತಪುರ, ಬಸವರಾಜ ಲಾಧಾ, ಕಲ್ಲಪ್ಪ ಮುಗಟೆ, ಪ್ರತಿಭಾ ಚಾಮಾ, ಗುರುನಾಥ ಬಿರಾದಾರ ಮತ್ತಿತರರು ಇದ್ದರು.

# ಪಾಲಕರೇ... ನಿಮ್ಮ ಮಕ್ಕಳಿಗೆ ಹತ್ತಿರದ ಸರ್ಕಾರಿ ಶಾಲೆಗೆ ಸೇರಿಸಿ

# ಹತ್ತಿರದ ಸರ್ಕಾರಿ ಶಾಲೆ – ನಿಮ್ಮ ಮಗುವಿನ ಉಜ್ವಲ ಭವಿಷ್ಯದ ಮೊದಲ ಹೆಜ್ಜೆ

ಮಕ್ಕಳು ನಮ್ಮ ಭವಿಷ್ಯದ ಬೆಳಕು. ಅವರ ಶಿಕ್ಷಣವೇ ಉತ್ತಮ ಸಮಾಜ ನಿರ್ಮಾಣದ ಅಡಿಪಾಯ. ಇಂದಿನ ಕಾಲದಲ್ಲಿ ಪ್ರತಿಯೊಬ್ಬ ಪಾಲಕರಿಗೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಬೇಕೆಂಬ ಆಸೆ ಸಹಜ. ಆದರೆ "ಉತ್ತಮ ಶಿಕ್ಷಣ" ಎಂದರೆ ಕೇವಲ ದುಬಾರಿ ಖಾಸಗಿ ಶಾಲೆಯಲ್ಲ ಎಂಬ ಸತ್ಯವನ್ನು ನಾವು ಅರಿತುಕೊಳ್ಳಬೇಕು. ನಮ್ಮ ಸುತ್ತಮುತ್ತಲಿರುವ ಸರ್ಕಾರಿ ಶಾಲೆಗಳು ಇಂದು ದ್ವಿಭಾಷಾ ಮಾಧ್ಯಮ ಬೋಧನೆ, ಗುಣಮಟ್ಟದ ಶಿಕ್ಷಣ, ಅನುಭವಸಂಪನ್ನ ಶಿಕ್ಷಕರು, ಉಚಿತ ಸೌಲಭ್ಯಗಳು ಮತ್ತು ಮೌಲ್ಯಾಧಾರಿತ ಬೋಧನೆಯ ಮೂಲಕ ಸಾವಿರಾರು ಮಕ್ಕಳ ಭವಿಷ್ಯವನ್ನು ರೂಪಿಸುತ್ತಿವೆ. ಆದ್ದರಿಂದ ಪಾಲಕರು ತಮ್ಮ ಮಕ್ಕಳನ್ನು ಹತ್ತಿರದ ಸರ್ಕಾರಿ ಶಾಲೆಗೆ ಸೇರಿಸುವ ಕುರಿತು ಗಂಭೀರವಾಗಿ ಚಿಂತಿಸಬೇಕಾದ ಅಗತ್ಯ ಇದೆ. ಸರ್ಕಾರಿ ಶಾಲೆಗಳು ಕೇವಲ ಓದು ಕಲಿಸುವ ಕೇಂದ್ರಗಳಲ್ಲ; ಅವು ಸಮಾಜದಲ್ಲಿ ಸಮಾನತೆ, ಶಿಸ್ತು ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ಪವಿತ್ರ ಸ್ಥಳಗಳು. ಇಲ್ಲಿ ಬಡ–ಶ್ರೀಮಂತ ಎಂಬ ಭೇದವಿಲ್ಲ. ಎಲ್ಲ ಮಕ್ಕಳೂ ಒಂದೇ ತರಗತಿಯಲ್ಲಿ ಕೂತು ಕಲಿಯುತ್ತಾರೆ. ಇದ–ರಿಂದ ಮಕ್ಕಳಲ್ಲಿ ಸಹಾನುಭೂತಿ, ಸ್ನೇಹಭಾವ ಮತ್ತು ಸಮಾಜದ ಬಗ್ಗೆ ಜವಾಬ್ದಾರಿಯ ಮನೋಭಾವ ಬೆಳೆಯುತ್ತದೆ. ಖಾಸಗಿ ಶಾಲೆಗಳಲ್ಲಿರುವ ಸ್ಪರ್ಧಾತ್ಮಕ ಒತ್ತಡಕ್ಕಿಂತ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸ್ವಭಾವಿಕ ಪ್ರತಿಭೆಗೆ ಹೆಚ್ಚಿನ ಅವಕಾಶ ದೊರೆಯುತ್ತದೆ.

ಇತ್ತೀಚಿನ ವರ್ಷಗಳಲ್ಲಿ ಸರ್ಕಾರ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿದೆ. ಉಚಿತ ಪಠ್ಯಪುಸ್ತಕಗಳು, ಸಮವಸ್ತ್ರ, ಮಧ್ಯಾಹ್ನದ ಊಟ, ಶೂಸಾಕ್ಸ್ ವಿತರಣೆ, ವಿದ್ಯಾರ್ಥಿವೇತನ, ಡಿಜಿಟಲ್ ತರಗತಿಗಳು, ವಿಜ್ಞಾನ ಪ್ರಯೋಗಾಲಯಗಳು, ಕಂಪ್ಯೂಟರ್ ಶಿಕ್ಷಣ, ಗ್ರಂಥಾಲಯ ಮುಂತಾದ ಸೌಲಭ್ಯಗಳು ಮಕ್ಕಳ ಶಿಕ್ಷಣವನ್ನು ಸುಲಭ ಮತ್ತು ಆಕರ್ಷಕವಾಗಿಸುತ್ತಿವೆ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರಿ ಶಾಲೆಗಳು ಸಾವಿರಾರು ಕುಟುಂಬಗಳ ಆಶಾಕಿರಣಗಳಾಗಿವೆ.




ಸರ್ಕಾರಿ ಶಾಲೆಗಳ ಶಿಕ್ಷಕರು ಉತ್ತಮ ತರಬೇತಿ ಪಡೆದವರು. ಅವರು ಕೇವಲ ಪಾಠ ಹೇಳುವವರಲ್ಲ; ಮಕ್ಕಳ ವ್ಯಕ್ತಿತ್ವ ರೂಪಿಸುವ ಮಾರ್ಗದರ್ಶಕರು. ಮಕ್ಕಳ ಮನೆಯ ಪರಿಸ್ಥಿತಿ, ಅವರ ಸಾಮರ್ಥ್ಯ ಮತ್ತು ಆಸಕ್ತಿಯನ್ನು ಗಮನಿಸಿ ಪ್ರೋತ್ಸಾಹಿಸುವ ಗುಣ ಶಿಕ್ಷಕರಲ್ಲಿ ಕಾಣಸಿಗುತ್ತದೆ. ಅನೇಕ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಇಂದು ಐಎಎಸ್ ಅಧಿಕಾರಿಗಳು, ವಿಜ್ಞಾನಿಗಳು, ವೈದ್ಯರು, ಇಂಜಿನಿಯರ್‌ಗಳು ಮತ್ತು ಸಮಾಜದ ನಾಯಕರು ಆಗಿದ್ದಾರೆ. ಇದು ಸರ್ಕಾರಿ ಶಾಲೆಗಳಸಾವ ರ್ಥ್ಯಕ್ಕೆಸಾಕ್ಷಿ ಯಾಗಿದೆ.

ಮಕ್ಕಳನ್ನು ಹತ್ತಿರದ ಸರ್ಕಾರಿ ಶಾಲೆಗೆ ಸೇರಿಸುವುದರಿಂದ ಇನ್ನೊಂದು ದೊಡ್ಡ ಪ್ರಯೋಜನವೆಂದರೆ ಸಮಯ ಮತ್ತು ಹಣದ ಉಳಿತಾಯ. ದೂರದ ಖಾಸಗಿ ಶಾಲೆಗಳಿಗೆ ಮಕ್ಕಳನ್ನು ಕಳುಹಿಸುವುದರಿಂದ ಪ್ರತಿದಿನ ಪ್ರಯಾಣದ ದಣಿವು, ವಾಹನ ವೆಚ್ಚ ಮತ್ತು ಮಾನಸಿಕ ಒತ್ತಡ ಹೆಚ್ಚಾಗುತ್ತದೆ. ಆದರೆ ಹತ್ತಿರದ ಶಾಲೆಯಲ್ಲಿ ಓದಿದರೆ ಮಕ್ಕಳು ಸಮಯಕ್ಕೆ ಸರಿಯಾಗಿ ಶಾಲೆಗೆ ಹೋಗಬಹುದು, ಕುಟುಂಬದ ಜೊತೆ ಹೆಚ್ಚು ಸಮಯ ಕಳೆಯಬಹುದು ಮತ್ತು ಆರೋಗ್ಯಕರ ಜೀವನ ನಡೆಸಬಹುದು. ಬಾಲ್ಯದಲ್ಲಿ ಮಕ್ಕಳಿಗೆ ಮಾನಸಿಕ ಶಾಂತಿ ಮತ್ತು ಸಂತೋಷ ಅತ್ಯಂತ ಮುಖ್ಯ.

ಇಂದು ಹಲವರು "ಇಂಗ್ಲಿಷ್ ಮೀಡಿಯಂ" ಎಂಬ ಆಕರ್ಷಣೆಗೆ ಒಳಗಾಗಿ ಸರ್ಕಾರಿ ಶಾಲೆಗಳನ್ನು ಕಡೆಗಣಿಸುತ್ತಾರೆ. ಆದರೆ ಭಾಷೆಯಿಗಿಂತ ಜ್ಞಾನ ಮುಖ್ಯ. ಮಕ್ಕಳು ತಮ್ಮ ತಾಯಿಭಾಷೆಯಲ್ಲಿ ಕಲಿತಾಗ ವಿಷಯವನ್ನು ಆಳವಾಗಿ ಅರ್ಥಮಾಡಿಕೊಳ್ಳುತ್ತಾರೆ. ಅನೇಕ ಸರ್ಕಾರಿ ಶಾಲೆಗಳು ಈಗ ಇಂಗ್ಲಿಷ್ ಮಾಧ್ಯಮ ತರಗತಿಗಳನ್ನೂ ಆರಂಭಿಸಿವೆ. ಹೀಗಾಗಿ ಸರ್ಕಾರಿ ಶಾಲೆಗಳು ಕಾಲದ ಅವಶ್ಯಕತೆಗೆ ತಕ್ಕಂತೆ ಬದಲಾಗುತ್ತಿವೆ. ಸರ್ಕಾರಿ ಶಾಲೆಗಳಲ್ಲಿ ಕ್ರೀಡೆ, ಸಂಗೀತ, ನಾಟಕ, ಸಾಹಿತ್ಯ, ಯೋಗ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ವಿಶೇಷ ಆದ್ಯತೆ ನೀಡಲಾಗುತ್ತದೆ. ಇದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವ ಗುಣ ಮತ್ತು ಸೃಜನಶೀಲತೆ ಬೆಳೆಯುತ್ತದೆ. ಶಿಕ್ಷಣ ಎಂದರೆ ಕೇವಲ ಅಂಕ ಗಳಿಸುವುದಲ್ಲ; ಉತ್ತಮ ವ್ಯಕ್ತಿಯಾಗಿ ರೂಪುಗೊಳ್ಳುವುದೂ ಆಗಿದೆ. ಈ ದಿಕ್ಕಿನಲ್ಲಿ ಸರ್ಕಾರಿ ಶಾಲೆಗಳ ಕೊಡುಗೆ ಅಮೂಲ್ಯ.

ಪಾಲಕರು ಒಂದು ವಿಷಯವನ್ನು ನೆನಪಿಡಬೇಕು ಶಾಲೆಯ ಗುಣಮಟ್ಟ ಕಟ್ಟಡದ ಭವ್ಯತೆಯಿಂದ ನಿರ್ಧಾರವಾಗುವುದಿಲ್ಲ; ಅಲ್ಲಿನ ಶಿಕ್ಷಕರ ಸಮರ್ಪಣೆ ಮತ್ತು ಮಕ್ಕಳ ಕಲಿಕೆಯ ವಾತಾವರಣದಿಂದ ನಿರ್ಧಾರವಾಗುತ್ತದೆ. ಅನೇಕ ಸರ್ಕಾರಿ ಶಾಲೆಗಳಲ್ಲಿ ಇಂದು ಉತ್ತಮ ಫಲಿತಾಂಶಗಳು ಬರುತ್ತಿವೆ. ಮಕ್ಕಳಿಗೆ ಪ್ರೀತಿ, ಪ್ರೋತ್ಸಾಹ ಮತ್ತು ಸರಿಯಾದ ಮಾರ್ಗದರ್ಶನ ಸಿಕ್ಕರೆ ಅವರು ಎಲ್ಲಿಯೇ ಓದಿದರೂ ಯಶಸ್ಸು ಸಾಧಿಸಬಲ್ಲರು. ಸರ್ಕಾರಿ ಶಾಲೆಗಳನ್ನು ಬೆಂಬಲಿಸುವುದು ಅಂದರೆ ದೇಶದ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವುದು. ಸಮಾಜದ ಎಲ್ಲಾ ವರ್ಗದ ಜನರು ಸರ್ಕಾರಿ ಶಾಲೆಗಳಿಗೆ ತಮ್ಮ ಮಕ್ಕಳನ್ನು ಸೇರಿಸಿದಾಗ ಶಾಲೆಗಳ ಗುಣಮಟ್ಟ ಇನ್ನಷ್ಟು ಹೆಚ್ಚುತ್ತದೆ. ಉತ್ತಮ ಸಮಾಜ ನಿರ್ಮಾಣಕ್ಕೆ ಸರ್ಕಾರಿ ಶಾಲೆಗಳ ಬಲವರ್ಧನೆ ಅತ್ಯಗತ್ಯ. ಪ್ರತಿಯೊಬ್ಬ ಪಾಲಕರೂ ಈ ಜವಾಬ್ದಾರಿಯನ್ನು ಅರಿತು ನಡೆದುಕೊಳ್ಳಬೇಕು.

ಮಕ್ಕಳ ಶಿಕ್ಷಣವು ವ್ಯಾಪಾರವಾಗಬಾರದು; ಅದು ಸಮಾಜ ಸೇವೆಯಾಗಬೇಕು. ಸರ್ಕಾರಿ ಶಾಲೆಗಳು ಈ ಮೌಲ್ಯವನ್ನು ಉಳಿಸಿಕೊಂಡಿವೆ. ಅಲ್ಲಿ ಮಕ್ಕಳು ಹಣದ ಮೌಲ್ಯಕ್ಕಿಂತ ಮಾನವೀಯ ಮೌಲ್ಯಗಳನ್ನು ಕಲಿಯುತ್ತಾರೆ. ಸರಳ ಜೀವನ, ಶಿಸ್ತು, ಸಹಕಾರ ಮತ್ತು ದೇಶಭಕ್ತಿ ಎಂಬ ಗುಣಗಳು ಮಕ್ಕಳ ವ್ಯಕ್ತಿತ್ವವನ್ನು ಸಮೃದ್ಧಗೊಳಿಸುತ್ತವೆ.

ಕೊನೆಗೆ, ಪ್ರಿಯ ಪಾಲಕರೇ, ನಿಮ್ಮ ಮಕ್ಕಳ ಭವಿಷ್ಯಕ್ಕಾಗಿ ಒಳ್ಳೆಯ ನಿರ್ಧಾರ ತೆಗೆದುಕೊಳ್ಳಿ. ನಿಮ್ಮ ಮನೆಯ ಹತ್ತಿರದ ಸರ್ಕಾರಿ ಶಾಲೆಯನ್ನು ಭೇಟಿ ಮಾಡಿ. ಅಲ್ಲಿನ ಶಿಕ್ಷಕರನ್ನು ಭೇಟಿ ಮಾಡಿ, ಸೌಲಭ್ಯಗಳನ್ನು ಪರಿಶೀಲಿಸಿ, ಮಕ್ಕಳ ಕಲಿಕೆಯ ವಾತಾವರಣವನ್ನು ನೋಡಿ. ನೀವು ಖಂಡಿತವಾಗಿಯೂ ಸರ್ಕಾರಿ ಶಾಲೆಗಳ ಬದಲಾವಣೆಯನ್ನು ಕಂಡು ಸಂತೋಷಪಡುತ್ತೀರಿ. ನಿಮ್ಮ ಮಕ್ಕಳು ಉತ್ತಮ ನಾಗರಿಕರಾಗಲು, ಆತ್ಮವಿಶ್ವಾಸದಿಂದ ಬೆಳೆಯಲು ಮತ್ತು ಸಮಾಜಕ್ಕೆ ಮಾದರಿಯಾಗಲು ಸರ್ಕಾರಿ ಶಾಲೆಗಳು ಉತ್ತಮ ವೇದಿಕೆಗಳಾಗಿವೆ.



ಬರಹ:
ಶ್ರೀಚಾಂದಸಾಬ ಎಂ ಚೌಕಿ

## ಮಹಾನ್ ವ್ಯಕ್ತಿಗಳ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಕರೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ.8:ಅಸುಂಡಿ ಗ್ರಾಮದಲ್ಲಿ ಎಐಡಿಎಸ್‌ಓ ಮತ್ತು ಸಾರ್ವನಿಕರ ಶಿಕ್ಷಣ ಉಳಿಸಿ ಸಮಿತಿಯ ವತಿಯಿಂದ ಮಕ್ಕಳ ಶಿಬಿರವನ್ನು ಆಯೋಜಿಸಲಾಗಿತ್ತು

ಈ ಸಂಧರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಗುರಳ್ಳಿ ರಾಜ ಮಾತನಾಡುತ್ತಾ ಇಂದು ಸಾಮಾಜಿಕವಾಗಿ , ಸಾಂಸ್ಕೃತಿಕವಾಗಿ ಮೌಲ್ಯಗಳ ಅಧಃಪತನವಾಗುತ್ತಿದೆ, ಇಂತಹ ಸಂಧರ್ಭದಲ್ಲಿ ಸಮಾಜದಲ್ಲಿ ಉನ್ನತಿ ನೀತಿ ಮತ್ತು ಸಂಸ್ಕೃತಿ ಬೆಳಸಲು ಮಹಾನ್ ವ್ಯಕ್ತಿಗಳ ಜೀವನ ಮತ್ತು ಹೋರಾಟಗಳನ್ನು ಮಕ್ಕಳ ನಡುವೆ ಹರಡಬೇಕಿದೆ ಮತ್ತು ಅವರೊಂದಿಗೆ ಬೆರೆತು, ಮೌಲ್ಯಗಳ ತುಂಬಲು ಪ್ರಯತ್ನಿಸಬೇಕು, ಮೊಬೈಲ್ ಗೀಳಿನಿಂದ ಹೊರತರಲು ಸಾಮಾಜಿಕ ವಾತಾವರಣ ಸಹ ಮುಕ್ಯ, ಹಾಗಾಗಿ ಪೋಷಕರು ಸಹ ಇದರ ಬಗ್ಗೆ ಗಮನ ಹಾಕಬೇಕು ಮತ್ತು ಮಕ್ಕಳನ್ನು ಮೌಲ್ಯಯುತ ವರನ್ನಾಗಿ ಬೆಳೆಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲು ಮಹಾನ್ ಜ್ಯೋತಿ ಬಾ ಫುಲೆ ವ್ಯಕ್ತಿತ್ವ ಮತ್ತು ಹೋರಾಟ ಕುರಿತಂತೆ ಮಕ್ಕಳ ಮದ್ದೆ ಚರ್ಚಿಸಲಾಯಿತು

ಈ ಸಂದರ್ಭದಲ್ಲಿ ಮಹಿಳಾ ಸಂಘದ ನಾಯಕಿ ವಿದ್ಯಾ, ಶಿಕ್ಷಕರಾದ ಶೇಕರ್ ಸೇರಿ ಮಕ್ಕಳಿಗೆ ಹಲವು ರೀತಿಯ ಆಟ, ಮೌಲ್ಯಯುತ ಕಥೆ, ಹಾಡುಗಳನ್ನು ಹೇಳಿಕೊಡಲಾಯಿತು .

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಾದ ಶಿವು, ಬಸವ, ದಾವೂದ್, ಚರಣ್, ಶಂಕರ್ ಸೇರಿದಂತೆ ಹಲವಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು

## ಮೇ 24 ರಾಯಚೂರಿನಲ್ಲಿ ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಚಿಂತನೆಯ ಸಮಾವೇಶ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ.8: ಕೇಂದ್ರ ಸರ್ಕಾರದಿಂದ ಕಲ್ಯಾಣ ಕರ್ನಾಟಕದಲ್ಲಿ 371(ಜೆ)ಜಾರಿಯಾಗಿ 14 ವರ್ಷಗಳೂ ಕಳೆದರೂ ಸಹ ಈ ಭಾಗದಲ್ಲಿ ಆರೋಗ್ಯ,ಶಿಕ್ಷಣ,ನಿರುದ್ಯೋಗ ',ಸಾಮಾಜಿಕ ಮಾನವ ಸಂಪನ್ಮೂಲದಲ್ಲಿ ಯಾವುದೇ ಪ್ರಗತಿಯಾಗದೆ ಈ ಜಿಲ್ಲೆಗಳು ಹಿಂದುಳಿದಿವೆ ಎಂದು ಕಲ್ಯಾಣ ಕರ್ನಾಟಕ ಭಾಗದ ಹೋರಾಟಗಾರರಾದ ಎಸ್. ಪನ್ನಾರಾಜ್. ಆರ್. ಮಾಧವರೆಡ್ಡಿ, ಚಾಗನೂರು ಮಲ್ಲಿಕಾರ್ಜುನ ರೆಡ್ಡಿ, ರಾಘವೇಂದ್ರ ಕುಷ್ಟಗಿ ಹೇಳಿದ್ದಾರೆ.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ.

ಆರೋಗ್ಯ,ಶಿಕ್ಷಣ,ಉದ್ಯೋಗ,ವಸತಿ,ಸಾಮಾಜಿಕ ಸೇರಿದಂತೆ ಮಾನವ ಸಂಪನ್ಮೂಲಗಳ ಪ್ರಗತಿಯಲ್ಲಿ ಇಡೀ ರಾಜ್ಯದಲ್ಲಿ ಕಲ್ಯಾಣ ಕರ್ನಾಟಕ ಭಾಗವು ಹಿಂದುಳಿದಿದ್ದುದರಿಂದ ಈ ಜಿಲ್ಲೆಗಳಲ್ಲಿನ ಯುವಸಮುದಾಯಕ್ಕೆ ಉದ್ಯೋಗ,ಶಿಕ್ಷಣ ವಲಯಗಳಿಗೆ ವಿಶೇಷ ಪ್ರಾತಿನಿಧ್ಯವನ್ನು ನೀಡುವಂತೆ ಹೋರಾಟ ಮಾಡುವ ಮೂಲಕ 371(ಜೆ) ನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿತ್ತು. ಹೆಸರಿಗೆ ಕಲ್ಯಾಣ ಕರ್ನಾಟಕ ಆದರೆ ಇಲ್ಲಿ ಕಲ್ಯಾಣವೇ ಆಗಿಲ್ಲ ಎಂದು ಆರೋಪಿಸಿದರು.




ಕಲ್ಯಾಣ ಕರ್ನಾಟಕ ಭಾಗಕ್ಕೆ 371(ಎ) ಸೇರಿದಂತೆ ಹಲವು ವಿಷಯಗಳ ಕುರಿತು ಹೈದ್ರಬಾದ್ ಕರ್ನಾಟಕ ಜನಾಂದೋಲನ ಕೇಂದ್ರದಿಂದ ರಾಯಚೂರಿನ ಕೊಠಾರಿ ಫಂಕ್ಷನ್ ಹಾಲ್ನಲ್ಲಿ ಮೇ.24 ರಂದು ಸಮಾವೇಶ, ದುಂಡುಮೇಜಿನ ಸಭೆ ಹಮ್ಮಿಕೊಂಡಿದೆಂದು ತಿಳಿಸಿದರು.

ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಅಸ್ತಿತ್ವಕ್ಕೆ ಬಂದಿದ್ದ ಸಂಜುಡಪ್ಪ ಕಮಿಟಿಯ ವರದಿಯ ಆಧಾರದಲ್ಲಿ ಮಂಜೂರಾದ ಸಾವಿರಾರು ಕೋಟಿ ಹಣ ಭ್ರಷ್ಟರ ಪಾಲಾಗಿ ಹೋಗಿದೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಭ್ರಷ್ಟ ಅಧಿಕಾರಿಗಳ ಮತ್ತು ದುಷ್ಟ ಗುತ್ತಿಗೆದಾರರ ಎ ಟಿ ಎಂ ಆಗಿ ಕೆಲಸಮಾಡಿದೆ.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಸ್ತಿತ್ವಕ್ಕೆ ಬಂದು 12ವರ್ಷಗಳು ಗತಿಸಿವೆ. ಸುಮಾರು 16ಸಾವಿರ ಕೋಟಿ ಹಣ ಮಂಜೂರುಮಾಡಿರುವುದಾಗಿ ಸರ್ಕಾರ ಹೇಳುತ್ತಿದೆ. ಆದರೆ 2022ರಲ್ಲಿ ಬಂದ ಸಿಎಜಿ( ಮಹಾಲೆಕ್ಕ ಪರಿಶೋಧಕರ) ವರದಿ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ 7ಸಾವಿರಕ್ಕೂ ಹೆಚ್ಚು ಕೋಟಿಹಣ ದುರುಪಯೋಗಾವಾಗಿದೆ ಎಂದು ದಾಖಲಿಸಿದೆ. ಕಳೆದ ಅರ್ಥಿಕ ವರ್ಷದಲ್ಲಿ ಕರ್ನಾಟಕ ರಾಜ್ಯ ಸರ್ಕಾರ 5 ಸಾವಿರ ಕೋಟಿಗಳ ಪೈಕಿ ಕೇವಲ 8 ನೂರು ಕೋಟೆಗಳಿಗೆ ಮಾತ್ರ ಕ್ರಿಯಾಯೋಜನೆಯನ್ನು ಸಲ್ಲಿಸಲಾಗಿದೆ.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕಾಮಗಾರಿಗಳನ್ನು ಡಬ್ಲ್ಯೂಎಪಿಸಿಒಎಸ್ ಎಂಬ ಕೇಂದ್ರ ಸರ್ಕಾರದ ಮೂಲಕ ಇನ್ಸ್ಪೆಕ್ಷನ್ ಮಾಡಿಸಬೇಕೆಂದು ಸರ್ಕಾರದ ಆದೇಶವಿದ್ದರೂ ಕೂಡ ಕೆ ಕೆ ಆರ್ ಡಿ ಬಿ ಕಾರ್ಯದರ್ಶಿ ಈ ಆದೇಶವನ್ನು ಪಾಲನೆ ಮಾಡಿಲ್ಲ. ಇಂತಹ ಹಲವು ಕಾರಂಗಳಿಂದ ಈ ಪ್ರದೇಶದ ಅಭಿವೃದ್ಧಿ ಕುಂಠಿತವಾಗಿದೆಂದರು. ಶಿಕ್ಷರಿಲ್ಲದ ಶಾಲೆಗಳು, ವೈದ್ಯರಿಲ್ಲದ ಆಸ್ಪತ್ರೆಗಳು, ಉದ್ಯೋಗ ದೊರೆಯದೆ ಹತಾಶರಾದ ವಿದ್ಯಾವಂತ ನಿರುದ್ಯೋಗಿಗಳು, ಗುಳೆ ಹೋಗಿ ಬದುಕು ಸಾಗಿಸುತ್ತಿರುವ ಗ್ರಾಮೀಣ ಜನರ ದುಸ್ಥಿತಿ ಇಲ್ಲಿದೆಂದರು.

ಅದಕ್ಕಾಗಿ ಸಾಮಾಜಿಕ ಕಳಕಳಿಯ ಪ್ರಜ್ಞಾವಂತ ನಾಗರಿಕರು ಮೂಕ ಪ್ರೇಕ್ಷಕರಾಗಿ ಕುಳಿತುಕೊಳ್ಳಲು ಸಾಧ್ಯವಿಲ್ಲ. ಈ ಪ್ರದೇಶದ ಅಭಿವೃದ್ಧಿಗಾಗಿ ಅನ್ಯಾಯಗಳ ವಿರುದ್ಧ ಅಸಮಾನತೆ ನಿವಾರಣೆಗಾಗಿ ಮತ್ತೊಂದು ದೊಡ್ಡ ಚಳುವಳಿಯ ಅಗತ್ಯವಿದೆ. ಈ ಹಿನ್ನಲೆಯಲ್ಲಿ ಸಮಾವೇಶ ನಡೆಸಲಿದೆಂದು ಹೇಳಿದರು.

## ಚರಕುಂಟೆ ದೇವಸ್ಥಾನದ ಅಭಿವೃದ್ಧಿಗೆ ಒಂದು ಲಕ್ಷ ರೂಪಾಯಿ ಧನಸಹಾಯ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ.8: ತಾಲೂಕಿನ ಚರಕುಂಟೆ ಗ್ರಾಮದಲ್ಲಿ ನೂತನವಾಗಿ ನಿರ್ಮಾಣ ಮಾಡಲಾಗುತ್ತಿರುವ ಶ್ರೀ ಎರಿತಾತ ದೇವಸ್ಥಾನದ ಅಭಿವೃದ್ಧಿ ಮತ್ತು ಜೀರ್ಣೋದ್ಧಾರಕ್ಕೆ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆ ಯವರು ಒಂದು ಲಕ್ಷ ರೂಪಾಯಿ ಹಣವನ್ನು ಸಹಾಯಧನವನ್ನಾಗಿ ನೀಡಿದ್ದಾರೆ. ಸಂಸ್ಥೆಯಿಂದ ನೀಡಲಾದ ಈ ಡಿ. ಡಿ ಯನ್ನು ಬಳ್ಳಾರಿ ತಾಲೂಕಿನ ನಂಬರ್ 2 ಕಚೇರಿಯ ಯೋಜನಾಧಿಕಾರಿ ಸತೀಶ್ ಜಿ ಅವರು ಶ್ರೀ ಎರಿತಾತ ಸೇವಾ ಟ್ರಸ್ಟ್ ನ ಅಧ್ಯಕ್ಷ ಪ್ರಕಾಶ್ ಮತ್ತು ಕಾರ್ಯದರ್ಶಿ ಕೃಷ್ಣ ಅವರಿಗೆ ಊರಿನ ಗಣ್ಯರ ಮತ್ತು ಹಲವು ಜನ ಭಕ್ತರ ಸಮ್ಮುಖದಲ್ಲಿ ವಿತರಿಸಿದರು

## ಬ್ರಿಮ್ಸ್ ಅವ್ಯವಸ್ಥೆ ಸರಿಪಡಿಸದಿದ್ದರೆ ಹೋರಾಟ: ಸ್ವಾಮಿದಾಸ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಮೇ 08:ರೋಗಿಗಳ ಚಿಕಿತ್ಸೆಗಾಗಿ ಸರ್ಕಾರ ಕೋಟಿ ಕೋಟಿ ಹಣ ಖರ್ಚು ಮಾಡಿ ಬ್ರಿಮ್ಸ್ ನಲ್ಲಿ ವಿವಿಧ ಉಪಕರಣಗಳನ್ನು ನೀಡಿದೆ. ಆದರೆ ಅವುಗಳ ಸದುಪಯೋಗ ಆಗದಿರುವುದು ದುರಂತ. ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಬಹುಜನ ಸೇವಾ ಸಮಿತಿ ರಾಜ್ಯ ಸಂಚಾಲಕ ಸ್ವಾಮಿದಾಸ ಕೆಂಪೆನೋರ್ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಜಿಲ್ಲಾ ಉಸ್ತುವಾರಿ ಸಚಿವರು ಕ್ಯಾಥ್‌ಲ್ಯಾಬ್ ಉದ್ಘಾಟಿಸಿ ಒಂದು ವರ್ಷ ಕಳೆದರೂ ಜನತೆಗೆ ಅದರ ಉಪಯೋಗ ಆಗುತ್ತಿಲ್ಲ. ಡಯಾಲಿಸಿಸ್ ವಿಭಾಗ ಸರಿಯಾಗಿ ನಡೆಯುತ್ತಿಲ್ಲ. ಈ ನಡುವೆ ಲಕ್ಷಾಂತರ ಮೌಲ್ಯದ ಎಸಿ ಮತ್ತು ಕಾಪರ್ ತಂತಿ ಕಳವು ಆಗಿದೆ. ಇದನ್ನೆಲ್ಲ ಗಮನಿಸಿದರೆ ಬ್ರಿಮ್ಸ್ ಆಸ್ಪತ್ರೆಯ ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ ಎಂದರು. ದೂರದ ಹೈದರಾಬಾದ, ಸೋಲಾಪುರ ಕಡೆಗೆ ರೋಗಿಗಳು ಹೋಗಬಾರದು. ರೋಗಿಗಳ ಸಮಯ ಮತ್ತು ಹಣದ ಉಳಿತಾಯ ಮಾಡುವ ಸಲುವಾಗಿ ಇಲ್ಲಿಯೇ ಬ್ರಿಮ್ಸನಲ್ಲಿ ಕ್ಯಾಥ್‌ಲ್ಯಾಬ್ ಮತ್ತು ಡಯಾಲಿಸಿಸ್ ಮತ್ತು ಇನ್ನಿತರ ಚಿಕಿತ್ಸೆಯ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳುವ ಜನಪ್ರತಿನಿಧಿಗಳ ಮಾತು ಭಾಷಣಕ್ಕೆ ಮಾತ್ರ ಸೀಮಿತವಾಯಿತೇ? ಎಂದು ಸ್ವಾಮಿದಾಸ್ ಪ್ರಶ್ನಿಸಿದರು.

ಈಗಿರುವ ಬ್ರಿಮ್ಸ್ ನಿರ್ದೇಶಕಿ ಡಾ. ಶಾಂತಲಾ ಕೌಜಲಗಿಗೆ ಕೈಬಿಟ್ಟು ನುರಿತ ಅನುಭವಿ ನಿರ್ದೇಶಕರನ್ನು ನೇಮಕ ಮಾಡಬೇಕು. ತುರ್ತಾಗಿ ಕ್ಯಾಥ್‌ಲ್ಯಾಬ್ ಆರಂಭಿಸಬೇಕು. ವೈದ್ಯರು ಆಸ್ಪತ್ರೆಯಲ್ಲಿ ಠಿಕಾಣಿ ಹೂಡುವಂತೆ ಮಾಡಬೇಕು. ಅನಧಿಕೃತವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಜೈಸಿಂಗ್ ಅವರನ್ನು ವಜಾ ಮಾಡಬೇಕು. ಎಸಿ ಮತ್ತು ಕಾಪರ್ ತಂತಿ ಕಳವು ಪ್ರಕರಣ ತನಿಖೆ ಮಾಡಬೇಕು. ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಹಲವು ವರ್ಷಗಳಿಂದ ಒಂದೇ ಕಡೆ ಠಿಕಾಣಿ ಹೂಡಿರುವ ಪ್ರಕಾಶ ಮಡಿವಾಳ ಅವರ ವರ್ಗಾವಣೆ ಮಾಡಬೇಕು. ಬ್ರಿಮ್ಸನಲ್ಲಿರುವ ಎಲ್ಲಾ ಸಿಸಿ ಕ್ಯಾಮರಾಗಳು ಚಾಲೂ ಇರಬೇಕು ಎಂಬ ಇತ್ಯಾದಿ ಹಕ್ಕೊತ್ತಾಯ ಮಾಡಿದರು. 15 ದಿನಗಳ ಒಳಗಾಗಿ ಈ ಬೇಡಿಕೆ ಈಡೇರಿಸದಿದ್ದರೆ ಬ್ರಿಮ್ಸ್ ಆಸ್ಪತ್ರೆ ಮುಂದೆ ಹೋರಾಟ ಮಾಡಲಾಗುವುದು ಎಂದು ಸ್ವಾಮಿದಾಸ ತಿಳಿಸಿದರು.

ಬಹುಜನ ಸೇವಾ ಸಮಿತಿ ಜಿಲ್ಲಾ ಉಪಾಧ್ಯಕ್ಷ ಶ್ರೀನಾಥ ದರ್ಗಾ ಮಾತನಾಡಿ ಕಡಿಮೆ ಗುಣಮಟ್ಟದ ಸಲೈನ್ ಬಳಸಿದ್ದಕ್ಕಾಗಿ ಇತ್ತೀಚೆಗೆ 7 ಜನ ಮಕ್ಕಳಿಗೆ ರಿಯಾಕ್ಷನ್ ಆಗಿ ಅಸ್ವಸ್ಥಗೊಂಡಿದ್ದರು. ಆದ್ದರಿಂದ ಉತ್ತಮ ಗುಣಮಟ್ಟದ ಸಲೈನ್ ಮತ್ತು ಔಷಧಿಗಳನ್ನು ವೈದ್ಯರು ಬಳಸಬೇಕೆಂದು ತಿಳಿಸಿದರು.

ಇದೇ ವೇಳೆ ಸಮಿತಿಯ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಕಮಲಹಾಸನ್, ಕ.ಕ.ನಿರ್ಮಾಣ ಸೇನೆ ಜಿಲ್ಲಾಧ್ಯಕ್ಷ ಡಾ. ಜಾನಿಶ್ ಇಸ್ಲಾಂಪುರ, ಸೇನೆಯ ಜಿಲ್ಲಾ ಉಪಾಧ್ಯಕ್ಷ ಡಾನಿಯಲ್ ಮಂಗಲಪೇಟ್, ಪ್ರಮುಖರಾದ ನಾಗನಾಥ ಭೂರೆ, ನಾಗಣ್ಣ ಕೌಠಾ, ಅಮಿತ್ ಸ್ವಾಲಿನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಚಿಮ್ಮಕೋಡ್‌ದಲ್ಲಿ ಅಖಂಡ ಹರಿನಾಮ ಸಪ್ತಾಹ ಆರಂಭ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಮೇ 08: ಬೀದರ್ ತಾಲೂಕಿನ ಚಿಮ್ಮಕೋಡ್ ಗ್ರಾಮದಲ್ಲಿ ಶ್ರೀ ಪಾಂಡುರಂಗ ದೇವಸ್ಥಾನದಲ್ಲಿ 13ನೇ ವರ್ಷದ ಅಖಂಡ ಹರಿನಾಮ ಸಪ್ತಾಹ ಹಾಗೂ ಶ್ರೀ ಗ್ರಂಥರಾಜ ಜ್ಞಾನೇಶ್ವರಿ ಪಾರಾಯಣ ಸೋಹಳಾ ಕಾರ್ಯಕ್ರಮ ಅದ್ದೂರಿಯಾಗಿ ಶುಕ್ರವಾರ ಆರಂಭವಾಯಿತು.

ಮೇ.8ರಿಂದ ಸಪ್ತಾಹ ಆರಂಭವಾಗಿದ್ದು, ಮೇ.15ರಂದು ಸಮಾರೋಪಗೊಳ್ಳಲಿದೆ. ಸಪ್ತಾಹ ನಿಮಿತ್ತ ಅಂದು ಖಾಂಡ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಆಯೋಜಿಸಲಾಗಿದೆ.

ಸತತ ವಾರದ ಕಾಲ ಭಜನೆ, ಕೀರ್ತನೆ ಜರುಗಲಿದ್ದು, ನೆರೆಯ ತೆಲಂಗಾಣ, ಮಹಾರಾಷ್ಟ್ರದಿಂದ ಖ್ಯಾತ ಕೀರ್ತನಕಾರರು, ಪ್ರವಚನಕಾರರು ಆಗಮಿಸಲಿದ್ದಾರೆ ಎಂದು ದೇವಸ್ಥಾನ ಪ್ರಮುಖರಾದ ಸಂಜುಕುಮಾರ್ ಟೊಳ್ಳೆ, ಮಾರುತಿ ಶಿವಬಾರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಪ್ರಮುಖರಾದ ಅಂಬಾದಾಸ್ ಮಹಾರಾಜ, ಸುರೇಶ್ ಪಾಟೀಲ್, ಸೋಮನಾಥ್ ಕಂದಗೂಳೆ, ಕಂಟೆಪ್ಪಾ ಬೊಮ್ಮಗೊಂಡೆ, ಶಿವಕುಮಾರ್ ಟೊಳ್ಳೆ, ಪ್ರಸಾದ್ ಪಾಟೀಲ್, ಗುರುನಾಥ್ ಬೊಮ್ಮಗೊಂಡೆ, ಬಿಚ್ಚಪ್ಪಾ ಏಖ್ಖೆಳ್ಳಿಕರ್, ಮಲ್ಲಶೆಟ್ಟಿ ಡೆಂಪೆ, ಶ್ರೀಕಾಂತ್ ಬಿರಾದಾರ್, ಸಿದ್ದಪ್ಪಾ ಟೊಳ್ಳೆ, ಲಕ್ಷ್ಮಣ ಟೊಳ್ಳೆ, ನರಸಪ್ಪಾ ಮೇತ್ರೆ ಮುಂತಾದವರು ಇದ್ದರು.

## ಪ್ರೊ. ಸಂಪತ್ ಲಮಾಣಿಗೆ ಪಿಎಚ್ ಡಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

8–ಬಾಗಲಕೋಟೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಸಂಪತ್ತ ಲಮಾಣಿ ಅವರಿಗೆ ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ಡಾಕ್ಟರೇಟ್ ಪದವಿ ನೀಡಿದೆ.

ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಪ್ರೊ. ಕಮಲಾಕ್ಷಿ ತಡಸದ ಅವರ ಮಾರ್ಗದರ್ಶನದಲ್ಲಿ ಪ್ರೊ.ಲಮಾಣಿ 'ಪ್ರಾದೇಶಿಕ ಅಸಮತೋಲನ ಮತ್ತು ರಾಜಕೀಯ ಸಜ್ಜುಗೊಳಿಸುವಿಕೆ: ಉತ್ತರ ಕರ್ನಾಟಕದ ವಿಶ್ಲೇಷಣಾತ್ಮಕ ಅಧ್ಯಯನ' ಎಂಬ ಸಂಶೋಧನಾ ಮಹಾಪ್ರಬಂಧ ಮಂಡಿಸಿದ್ದರು.



ಪಿಎಚ್ ಡಿ ಪಡೆದಿರುವ ಪ್ರೊ.ಸಂಪತ್ತ ಲಮಾಣಿ ಅವರನ್ನು ಕಾಲೇಜು ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಹಾಗೂ ಪ್ರಾಧ್ಯಾಪಕ ಬಳಗದವರು, ಅತಿಥಿ ಉಪನ್ಯಾಸಕರು, ಬೋಧ–ಕೇತರ ಸಿಬ್ಬಂದಿ ವರ್ಗ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಅಭಿನಂಡಿಸಿದ್ದಾರೆ.

## ಬಳ್ಳಾರಿ ನಗರದಲ್ಲಿ ಮುಂದುವರೆದ ಸರ್ಕಾರಿ ನಿವೇಶನದ ಒತ್ತುವರಿ ತೆರವು



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದಲ್ಲಿನ ಸರ್ಕಾರಿ ನಿವೇಶನ, ಜಮೀನನ್ನು ಒತ್ತುವರಿ ಮಾಡಿರುವುದನ್ನು ತೆರವುಗೊಳಿಸುವ ಕಾರ್ಯ ಮುಂದುವರೆದಿದೆ. ಇಂದು ನಗರದ ಕೋಟೆ ಪ್ರದೇಶದ ವಾರ್ಡ್ ನಂ 21. ಟಿ.ಎಸ್ಓ.ನಂಬರ್ 94 ರ ಡೋರ್ ನಂಬರ 5 ರ. 40 ಸೇಂಟ್ಸ್ ನಿವೇಶನವನ್ನು ಕಬ್ಜಾ ಮಾಡಿಕೊಳ್ಳಲಾಗಿತ್ತು. ಅದನ್ನು ತೆರವುಗಳಿಸಲಾಗಿದೆ. ಇನ್ನು ನಲ್ಲ ಚರವು ಪ್ರದೇಶದ ಶಾದಿ ಮಹಲ್ ಹಿಂಭಾಗದಲ್ಲಿನ ವಾರ್ಡ್ ನಂಬರ್ 20. ಟಿ.ಎಸ್.ನಂಬರ್ 941, 943, 945 ಕ್ಕೆ ಸೇರಿದ 4.83 ಎಕರೆಯನ್ನು ಸಹ ತೆರವು ಮಾಡಿದೆ. ಈ ಕಾರ್ಯ ಎಡಿಸಿ ಮಹಮ್ಮದ್ ಝುಬೇರ್ ಅವರ ನೇತೃತ್ವದಲ್ಲಿ ನಡೆಯಿತು.

# ಸಿದ್ಧಾರ್ಥ್ ಕೋಚಿಂಗ್ ಸೆಂಟರ್ ನಲ್ಲಿ ಡಾ. ನಾ ಸು ಹರ್ಡೇಕರ ಜನ್ಮದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಮೇ.8:ತಾಲೂಕಿನ ಯರಗೋಳ ಗ್ರಾಮದಲ್ಲಿ ಭೀಮ ಜ್ಯೋತಿ ಗ್ರಾಮೀಣ ಅಭಿವೃದ್ಧಿ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ನಡೆಸಲಾಗುತ್ತಿರುವ ಸಿದ್ಧಾರ್ಥ ಕೋಚಿಂಗ್ ಸೆಂಟರ್ ನಲ್ಲಿ ಸ್ವಾತಂತ್ರ್ಯ ಸೇನಾನಿ ಹಾಗೂ ಭಾರತ್ ಸೇವಾ ದಳದ ಸಂಸ್ಥಾಪಕರಾದ ಡಾ.ನಾ ಸು ಹರಡೇಕರ್ ಅವರ 137 ನೇ ಜನ್ಮದಿನಾಚರಣೆಯನ್ನು ಆಚರಿಸಲಾಯಿತು ಈ ಸಂದರ್ಭದಲ್ಲಿ ಭಾರತ ಸೇವಾದಳದ ಜಿಲ್ಲಾ ಸಂಯೋಜಕರಾದ ಶ್ರೀ ಸೈಯದ್ ಕಮರುದ್ದೀನ್ ಅವರು ಮಾತನಾಡಿ ಹರಡೇಕರ್ ಅವರ ಜೀವನ ಚರಿತ್ರೆ ಕುರಿತು ಸಹ ವಿಸ್ತಾರವಾಗಿ ಮಾತನಾಡಿದರು ಮತ್ತು ಹರಡೇಕರ್ ಅವರು ಮಕ್ಕಳ ಮೇಲೆ ತುಂಬಾ ಪ್ರೀತಿ ಹೊಂದಿದ್ದರು ಅದಕ್ಕಾಗಿ ನಾವು ಇಂದು ಮಕ್ಕಳ ಮಧ್ಯದಲ್ಲಿ ಅವರ ಜನ್ಮ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ ಎಂದು ಹೇಳಿದರು ಈ ಸಂದರ್ಭದಲ್ಲಿ ಮುಖ್ಯ ಅತಿಥಿಯಾಗಿ ಯರಗೋಳ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ಸ್‌ಡಿಎಂಸಿ ಅಧ್ಯಕ್ಷರಾದ ಶ್ರೀಮತಿ ಜಯಶ್ರೀ ದೇವಣ್ಣ ಅತಿಥಿಗಳಾಗಿ ಶ್ರೀ ಲಕ್ಷ್ಮಣ್ ರೆಡ್ಡಿ ಸರ್ವೋದಯ ಶಿಕ್ಷಣ ಸಂಸ್ಥೆ ಸದಸ್ಯರಾದ ಮೊಹಿಮೂದ್ ಸಿದ್ಧಾರ್ಥ್ ಕೋಚಿಂಗ್ ಸೆಂಟರ್ ನ ಮುಖ್ಯ ಗುರುಗಳಾದ ಶ್ರೀಮತಿ ಮಾಲಾಶ್ರೀ ಬಿ ಯರಗೋಳ ಶಿಕ್ಷಕಿಯಾದ ಕು.ಗಂಗಾ ಸಿದ್ಧಾರ್ಥ್ ಕೋಚಿಂಗ್ ಸೆಂಟರ್ ನಿರ್ದೇಶಕರಾದ ಶ್ರೀ ಭೀಮಾಶಂಕರ ಎಂ ಯರಗೋಳ ಉಪಸ್ಥಿತರಿದ್ದರು ಕು. ಗಂಗಾ ಪ್ರಾರ್ಥನೆ ಗೀತೆ ಹಾಡಿದಳು ಕು.ಭವಾನಿ ನಿರೂಪಿಸಿದಳು ಭೀಮಾಶಂಕರ ವಂದನಾರ್ಪಣೆ ಮಾಡಿದರು ಸಿದ್ಧಾರ್ಥ್ ಕೋಚಿಂಗ್ ಸೆಂಟರ್ ಎಲ್ಲಾ ವಿದ್ಯಾರ್ಥಿ ವಿದ್ಯಾರ್ಥಿನಿಯರು ಬಾಗವಹಿಸಿದ್ದರು.

# ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಿರಲಿ ಜಿ.ಪಂ.ಸಿಇಓ ಕಟ್ಟುನಿಟ್ಟಿನ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಮೇ.08: ಜಿಲ್ಲೆಯ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ಸಾರ್ವಜನಿಕರಿಗೆ ನಿರಂತರ ನೀರು ಪೂರೈಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ ತಿಳಿಸಿದರು.

ಹರಪನಹಳ್ಳಿ ತಾಲೂಕಿನ ವಿವಿಧ ಬಾಧಿತ ಗ್ರಾಮಗಳಿಗೆ ಜಿಲ್ಲಾ ಪಂಚಾಯತ್ ಸಿಇಓ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಅಧಿಕಾರಿಗಳೊಂದಿಗೆ ಅವರು ಮಾತನಾಡಿದರು.

ಜಿಲ್ಲೆಯ 740 ಗ್ರಾಮಗಳ ಪೈಕಿ 153 ಗ್ರಾಮಗಳಲ್ಲಿ ನೀರಿನ ಅಭಾವ ಉಂಟಾಗಬಹುದೆಂದು ಗುರುತಿಸಲಾಗಿದೆ. ಅದರಂತೆ ಈಗಾಗಲೇ ಜಿಲ್ಲೆಯ ಹರಪನಹಳ್ಳಿ ತಾಲೂಕಿನ 24 ಗ್ರಾಮ, ಹಗರಿಬೊಮ್ಮನಹಳ್ಳಿಯ 5 ಮತ್ತು ಹಡಗಲಿ ತಾಲೂಕಿನ 3 ಗ್ರಾಮಗಳು ಸೇರಿದಂತೆ ಒಟ್ಟು 32 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉದ್ಭವಿಸಿದೆ. ಈ ನೀರಿನ ಸಮಸ್ಯೆ ಉಂಟಾದ ಗ್ರಾಮಗಳಿಗೆ 41 ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆಗೆ ಪಡೆದು ನೀರು ಸರಬರಾಜು ಮಾಡುತ್ತಿದೆ. ಅಲ್ಲದೆ, ಅಗತ್ಯವಿದ್ದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ 4 ನೀರಿನ ಟ್ಯಾಂಕರ್‌ಗಳನ್ನು ಬಳಸಿಕೊಳ್ಳಲು ತಿಳಿಸಿದ ಅವರು,

ಪ್ರತಿಯೊಂದು ಗ್ರಾಮದಲ್ಲಿರುವ ನೀರಿನ ಮೂಲಗಳನ್ನು ಸ್ವಚ್ಛಗೊಳಿಸಬೇಕು. ನೀರು ಕುಡಿಯಲು ಯೋಗ್ಯವಾಗಿದೆಯೇ ಎಂಬುದನ್ನು ಖಾತ್ರಿಪಡಿಸಿಕೊಂಡೇ ನಂತರ ನೀರು ಸರಬರಾಜು ಮಾಡಬೇಕು. ರಸ್ತೆ ಮತ್ತು ಚರಂಡಿ ಪಕ್ಕದಲ್ಲಿರುವ ಪೈಪ್‌ಲೈನ್‌ಗಳಲ್ಲಿ ನೀರು ಪೋಲಾಗದಂತೆ ಎಚ್ಚರವಹಿಸಬೇಕು. ಒಂದು ವೇಳೆ ಪೈಪ್ ಹೊಡೆದು ನೀರು ಕಲುಷಿತಗೊಂಡರೆ ಅದಕ್ಕೆ ಸಂಬಂಧಪಟ್ಟ ಪಿಡಿಓ ಹಾಗೂ ಇಂಜಿನಿಯರ್‌ಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಿದರು.

ಶುದ್ಧ ನೀರಿನ ಘಟಕಗಳ ದುರಸ್ತಿಗೊಳಿಸಿ: ಜಿಲ್ಲೆಯ 666 ಶುದ್ಧ ಕುಡಿಯುವ ನೀರಿನ ಘಟಕಗಳು ಸದಾ ಸುಸ್ಥಿತಿಯಲ್ಲಿರಬೇಕು. ತಾಂತ್ರಿಕ ದೋಷ ಕಂಡುಬಂದ ತಕ್ಷಣವೇ ದುರಸ್ತಿ ಕೈಗೊಳ್ಳಬೇಕು. ನೀರಿನ ಸಮಸ್ಯೆಗಳ ಕುರಿತು ದೂರು ನೀಡಲು ಮತ್ತು ತಕ್ಷಣದ ಪರಿಹಾರಕ್ಕಾಗಿ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ 24*7 ಕಂಟ್ರೋಲ್ ರೂಮ್ ಸಹಾಯವಾಣಿ ತೆರೆಯಲಾಗಿದೆ. ಕುಡಿಯುವ ನೀರಿಗೆ ಸಂಬಂಧಿಸಿದಂತೆ ಸಹಾಯವಾಣಿ ಸಂಖ್ಯೆ 9480837823 ಗೆ ಕರೆ ಮಾಡಿ ದೂರು ನೀಡಬಹುದು ಎಂದು ತಿಳಿಸಿದರು.

ಈ ವೇಳೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಕಾಧಿಕಾರಿಗಳು, ಗ್ರಾಮ ಪಂಚಾಯತ್ ಪಿಡಿಓಗಳು ಇದ್ದರು.

# ಡಿ.ಡಿ.ಯು ಶಾಲೆಯಲ್ಲಿ ಅಕ್ಷರಾಭ್ಯಾಸ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ.8: ನಗರದ ಡಿ ದೇವರಾಜ ಅರಸ್ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಯಾದಗಿರಿಯಲ್ಲಿಂದು ಮೊಟ್ಟಮೊದಲ ಬಾರಿಗೆ ಉಚಿತ ಅಕ್ಷರಾಭ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಉಚಿತ ಅಕ್ಷರಾಭ್ಯಾಸ ಕಾರ್ಯಕ್ರಮಕ್ಕೆ ಪಾಲಕ ಪೋಷಕರು ಮತ್ತು ಮಕ್ಕಳು ಭಾಗವಹಿಸಿದ್ದರು. ಈ ಉಚಿತ ಅಕ್ಷರಾಭ್ಯಾಸ ಕಾರ್ಯಕ್ರಮ ಸಂಸ್ಕೃತಿ ಮತ್ತು ಸಂಸ್ಕಾರಯುತವಾದದ್ದು, ಮತ್ತು ಜಿಲ್ಲೆಗೆ ಮಾದರಿ ಎಂದು ನಾಗಮ್ಮ ಹಿರೇಮಠ ಬಣ್ಣಿಸಿದರು. ಈ ಉಚಿತ ಅಕ್ಷರಭ್ಯಾಸ ಕಾರ್ಯಕ್ರಮಕ್ಕೆ ದಿವ್ಯ ಸಾನಿಧ್ಯ ಸೂರ್ಯದೇವ ಗುರೂಜಿ ವಹಿಸಿದರು. ಉದ್ಘಾಟಕರಾಗಿ ನಾಗಮ್ಮ ಹಿರೇಮಠ ಮೇಲ್ವಿಚಾರಕರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಯಾದಗಿರಿ ವಹಿಸಿದರು. ಮುಖ್ಯಅತಿಥಿಗಳಾಗಿ ಡಿಡಿಯು ಸಮೂಹ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿಗಳು ಮಲ್ಲಿಕಾರ್ಜುನ ಮೇಟಿ ವಹಿಸಿ, ಪ್ರಾಸ್ತವಿಕವಾಗಿ ಮಾತನಾಡಿದರು. ಅತಿಥಿಗಳಾಗಿ ಈ ಸಂದರ್ಭದಲ್ಲಿ ಸಿಬಿಎಸ್‌ಇ ವಿಭಾಗದ ಮುಖ್ಯಸ್ಥರಾದ ಬಬಿನ್ ರಾಜ್, ಕಾಲೇಜಿನ ಪ್ರಾಂಶುಪಾಲರಾದ ಗೋಪಾಲಕೃಷ್ಣ, ವಸತಿ ನಿಲಯದ ಮೇಲ್ವಿಚಾರಕರಾದ ನಿಂಗಣ್ಣ ಹೊಸಮನಿ, ಕನ್ನಡ ಮಾಧ್ಯಮ ಶಾಲೆಯ ಮುಖ್ಯಸ್ಥರಾದ ವೆಂಕಟೇಶ ಪೂಜಾರಿ, ಪೂಜಾ ಮೇಟಿ, ಬಂಗಾರೆಮ್ಮ, ರಾಜಶೇಖರ ಹಾದಿಮನಿ, ರವಿ ಪವಾರ್, ರವಿ ಚವ್ಹಾಣ್, ಶಿಕ್ಷಕರು, ಉಪನ್ಯಾಸಕರು, ಸಿಬ್ಬಂದಿ ವರ್ಗ ಸೇರಿದಂತೆ ಇತರರಿದ್ದರು. ಲತಾ ಸ್ವಾಗತಿಸಿ, ನಿರೂಪಿಸಿದರು, ಮತ್ತು ವೆಂಕಟೇಶ ಪೂಜಾರಿ ವಂದಿಸಿದರು.

# ಜೂನ್ 1 ರಿಂದ ನಗರದಲ್ಲಿ ಮತ್ತೆ ಹೆಲ್ಮೆಟ್ ಕಡ್ಡಾಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಬೇಸಿಗೆ ಎಂದು ಹೆಲ್ಮೆಟ್ ಕಡ್ಡಾಯಕ್ಕೆ ರಿಲ್ಯಾಕ್ಸ್ ನೀಡಿತ್ತು . ಆದರೆ ನಗರದಲ್ಲಿ ಬರುವ ಜೂನ್ ಒಂದರಿಂದ ಮತ್ತೆ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಖಡ್ಡಾಯ ಖಡ್ಡಾಯಗೊಳಿಸಲಿದೆಂದು ಎಸ್ಪಿಡಾ. ಸುಮನ್ ಡಿ.ಪನ್ನೇಕರ್ ತಿಳಿಸಿದ್ದಾರೆ

ಅವರಿಂದು ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ.ಈಗಿನಿಂ ದಲೇ ಹೆಲ್ಮೆಟ್ ಖಡ್ಡಾಯ ಕುರಿತು ಜೂನ್ ಒಂದರ ವರೆಗೆ ಜಾಗೃತಿ ಅಭಿಯಾನ ನಡೆಸಲಿದೆಂದರು.

ಕಳೆದ 3 ವರ್ಷದಲ್ಲಿ ದ್ವಿಚಕ್ರ ವಾಹನಗಳಿಂದ 1009 ಪ್ರಕರಣ ದಾಖಲಾಗಿದ್ದು ಇದರಲ್ಲಿ 462 ಸಾವನ್ನಪ್ಪಿದ್ದಾರೆ. 1072 ಜನರು ಗಾಯಾಳುಗಳಾಗಿದ್ದಾರೆ. ಇದರಲ್ಲಿ ಹೆಲ್ಮೆಟ್ ಇಲ್ಲದೆ.

ತಲೆಗೆ ಪೆಟ್ಟು ಬಿದ್ದು ಸಾವಾಗಿರೋ ಘಟನೆ ಹೆಚ್ಚಾಗ್ತಿದೆ.

ಜೂನ್ 1ರಿಂದ ಖಡ್ಡಾಯವಾಗಿ ಎಲ್ಲರೂ ಹೆಲ್ಮೆಟ್ ಧರಿಸಬೇಕು ಎಂದ ಅವರು. ಅಪ್ರಾಪ್ತರು ಬೈಕ್ ಚಾಲನೆ ಮಾಡಿದರೆ ಅವರ ಪೋಷಕರಿಗೆ 25 ಸಾವಿರ ರೂ ದಂಡ ಹಾಕಲಿದ್ದೇವೆಂದು ಹೇಳಿದರು.

# ಮನುಷ್ಯ ಕಾಣೆ ಪತ್ತೆಗಾಗಿ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮೇ.08:– ಬೀದರ ತಾಲ್ಲೂಕಿನ ಮಿರ್ಜಾಪೂರ (ತಾಜ) ಗ್ರಾಮದ ನಿವಾಸಿಯಾದ ಧನರಾಜ ಘಾಳೆಪ್ಪಾ ಶೇರಿಕಾರ (37) ಇವರು ದಿನಾಂಕ: 01–05–2026 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆಯಾಗಿರುತ್ತಾರೆ.

ಕಾಣೆಯಾಗಿರುವ ವ್ಯಕ್ತಿ 5 ಫೀಟ್, 5 ಇಂಚ್ ಎತ್ತರ ಇದ್ದು, ದಪ್ಪ ಮೈಕಟ್ಟು, ಬಿಳಿ ಮೈಬಣ್ಣ, ನೇರ ಮೂಗು, ಕಪ್ಪು ಬಿಳಿ ಕೂದಲು ಹೊಂದಿದ್ದು, ಹೋಗುವಾಗ ಮೈಮೇಲೆ ಪ್ಯಾಂಟ್, ಶರ್ಟ ಧರಿಸಿರುವ ಇವರು ಹಿಂದಿ, ಕನ್ನಡ, ಮರಾಠಿ ಭಾಷೆಯಲ್ಲಿ ಮಾತನಾಡುತ್ತಾರೆ. ಈ ಕಾಣೆಯಾಗಿರುವ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಪಿಎಸ್‌ಐ 1 ಬೀದರ ಸಬ್ ಅರ್ಬನ್ ಪೊಲೀಸ ಠಾಣೆ ಮೊಬೈಲ್: 9480803445 ಅಥವಾ ಸಿಪಿಐ ಬೀದರ ನಗರ ವೃತ ಮೊಬೈಲ್: 9480803430 ಗೆ ಸಂಪರ್ಕಿಸುವಂತೆ ಬೀದರ ಉಪನಗರ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

**IN THE COURT PRINCIPAL CIVIL JUDGE & JMFC AT BALLARI**
**Crl. M.C. No. 393/2026**

Between:-

1)HULUGAPPA S/O PAKKIRAPPA, aged about 54 years, R/o. ward No.23, behind Gokan Guarden, Siddarth Nagar, cantonment, Ballari.
2)HANUMAKKA W/O K NAGAPPA, aged about 56 years, R/o # 63, beside Vasavi School, Siddarath Nagar, cantonment, Ballari.
3)H.SANNA HULIGEMMA S/O H.SANNA HULUGAPPA, aged about 47 years, Housewife, R/o Ingalagi village, Kariganur Post, Hosapete taluk, Vijayanagar District.
4)MALAMMA W/O H.MALLAPPA, aged about 34 years, R/o Harijanakere, near Canal, Dharmasagar village, Hosapete taluk, Vijayanagar District.
5)MEENAKSHI W/O LATE.HANUMANTHA, aged about 34 years, R/o Siddaratha Nagar, Near Vasavi school, cantonment, ward No.23, Ballari.
...Petitioners

And

RESPONDENT

The Thasildhar, cum Register of Births & Death's, Taluk office, Kampli
... Respondent

**NOTICE**

WHEREAS, the above named petitioner has filed the above petition under section 13(2) of Birth and Deaths Act, 1969 against the respondent for the purpose of seeking date of death of Petitioner's FATHER by name PAKKIRAPPA S/o LATE MAREPPA died on 27-02-1993 at Metri village, Kampli taluk, Ballari District.

Therefore, If any persons are interested you are hereby directed to appear in this court in person or by a pleader duly instructed on 25-06-2026 at about 11.00 a.m to show cause against the above suit, failing which the suit will be heard and determined ex-parte against you.

Given under my hand and seal of the court on this 08th day of May 2026

Veeresha.H
Advocates for the petitioners

//By Order of the court//
Chief Ministerial Officers
Principal Civil Judge and JMFC Ballari

**IN THE COURT PRINCIPAL CIVIL JUDGE & JMFC AT BALLARI**
**Crl. M.C. No. 395/2026**

Between:-

1)HULUGAPPA S/O PAKKIRAPPA, aged about 54 years, R/o. ward No.23, behind Gokan Guarden, Siddarth Nagar, cantonment, Ballari.
2)HANUMAKKA W/O K NAGAPPA, aged about 56 years, R/o # 63, beside Vasavi School, Siddarath Nagar, cantonment, Ballari.
3)H.SANNA HULIGEMMA S/O H.SANNA HULUGAPPA, aged about 47 years, Housewife, R/o Ingalagi village, Kariganur Post, Hosapete taluk, Vijayanagar District.
4)MALAMMA W/O H.MALLAPPA, aged about 34 years, R/o Harijanakere, near Canal, Dharmasagar village, Hosapete taluk, Vijayanagar District.
5)MEENAKSHI W/O LATE.HANUMANTHA, aged about 34 years, R/o Siddaratha Nagar, Near Vasavi school, cantonment, ward No.23, Ballari.
...Petitioners

And

RESPONDENT

The Thasildhar, cum Register of Births & Death's, Taluk office, Kampli
... Respondent

**NOTICE**

WHEREAS, the above named petitioner has filed the above petition under section 13(2) of Birth and Deaths Act, 1969 against the respondent for the purpose of seeking date of death of Petitioner's mother by name PAKKIRAMMA W/O LATE PAKKIRAPPA died on 12-08-2006 at Metri village, Kampli taluk, Ballari District.

Therefore, If any persons are interested you are hereby directed to appear in this court in person or by a pleader duly instructed on 25-06-2026 at about 11.00 a.m to show cause against the above suit, failing which the suit will be heard and determined ex-parte against you.

Given under my hand and seal of the court on this 08th day of May 2026

Veeresha.H
Advocates for the petitioners

//By Order of the court.//
Chief Ministerial Officers
Principal Civil Judge and JMFC Ballari

**IN THE COURT PRINCIPAL CIVIL JUDGE & JMFC AT BALLARI**
**Crl. M.C. No. 412/2026**

1)DEVADASI H.AMBAMMA D/O LATE.DEVADASI SANNA HANUMAMMA, aged about 50 years,
2)PAKKIRAPPA S/O LATE.DEVADASI SANNA HANUMAMMA, aged about 50 years, both are residing at No.3, Sanapura village, Ballari taluk and District.
3)SIKILNINGAMMA W/o Sikil Iranna, aged about 54 years, R/o ward No.1, No.10 Muddapura village, Kampli taluk, Ballari District.
4)J.PARVATHI W/O LATE.MARIYAPPA, aged about 46 years, R/o ward No.2, near Ambedkar Nagar, Kallukamba village, Kurugodu taluk, Ballari District. ...Petitioners

RESPONDENT

And

The Register of Births & Death's, Thasildhar, Taluk office, Kampli ...

Respondent

**NOTICE**

WHEREAS, the above named petitioner has filed the above petition under section 13(2) of Birth and Deaths Act, 1969 against the respondent for the purpose of seeking date of death of Petitioner's mother by name SANNA HANUMAMMA DEVADASI D/O LATE BALAPPA & SMT. HARIJANA GANGAMMA was died on 06-03-1989 at No.3 Sanapura village, Kampli taluk, Ballari District in the above mentioned address.

Therefore, If any persons are interested you are hereby directed to appear in this court in person or by a pleader duly instructed on 30 -06-2026 at about 11.00 a.m to show cause against the above suit, failing which the suit will be heard and determined ex-parte against you.

Given under my hand and seal of the court on this May 2026

Veeresha.H
Advocates for the petitioners

By Order of the court.
Chief Ministerial Officers
Principal Civil judgee and JMFC Ballari

**IN THE COURT PRINCIPAL CIVIL JUDGE & JMFC AT BALLARI**
**Crl. M.C. No.415/2026**

1)DEVADASI H.AMBAMMA D/O LATE.DEVADASI SANNA HANUMAMMA, aged about 50 years,
2)PAKKIRAPPA S/O LATE.DEVADASI SANNA HANUMAMMA, aged about 50 years, both are residing at No.3, Sanapura village, Ballari taluk and District.
3)SIKILNINGAMMA W/o Sikil Iranna, aged about 54 years, R/o ward No.1, No.10 Muddapura village, Kampli taluk, Ballari District.
4)J.PARVATHI W/O LATE.MARIYAPPA, aged about 46 years, R/o ward No.2, near Ambedkar Nagar, Kallukamba village, Kurugodu ...Petitioners taluk, Ballari District.

RESPONDENT

And

The Register of Births & Death's, Thasildhar, Taluk office, ...Respondent Kampli

**NOTICE**

WHEREAS, the above named petitioner has filed the above petition under section 13(2) of Birth and Deaths Act, 1969 against the respondent for the purpose of seeking date of death of Petitioner's Grandmother by name HARIJANA GANGAMMA W/O LATE BALAPPA was died on 08-07- 1979 at No.3 Sanapura village, Kampli taluk, Ballari District in the above mentioned address.

Therefore, If any persons are interested you are hereby directed to appear in this court in person or by a pleader duly instructed on 30-6-2026 at about 11.00 a.m to show cause against the above suit, failing which the suit will be heard and determined ex-parte against you.

Given under my hand and seal of the court on this 08th day of may 2026

Veeresha.H
Advocates for the petitioners

By Order of the court.
Chief Ministerial Officers
Principal Civil Gudgee and JMFC Ballari

**IN THE COURT PRINCIPAL CIVIL JUDGE & JMFC AT BALLARI**
**Crl. M.C. No.413/2026**

1)DEVADASI H.AMBAMMA D/O LATE.DEVADASI SANNA HANUMAMMA, aged about 50 years,
2)PAKKIRAPPA S/O LATE.DEVADASI SANNA HANUMAMMA, aged about 50 years, both are residing at No.3, Sanapura village, Ballari taluk and District.
3)SIKILNINGAMMA W/o Sikil Iranna, aged about 54 years, R/o ward No.1, No.10 Muddapura village, Kampli taluk, Ballari District.
4)J.PARVATHI W/O LATE.MARIYAPPA, aged about 46 years, R/o ward No.2, near Ambedkar Nagar, Kallukamba village, Kurugodu ...Petitioners taluk, Ballari District.

RESPONDENT

And

The Register of Births & Death's, Thasildhar, Taluk office, ...Respondent Kampli

**NOTICE**

WHEREAS, the above named petitioner has filed the above petition under section 13(2) of Birth and Deaths Act, 1969 against the respondent for the purpose of seeking date of death of Petitioner's Grand Father by name BALAPPA S/O LATE TAYAPPA was died on 03-05- 1981 at No.3 Sanapura village, Kampli taluk, Ballari District in the above mentioned address.

Therefore, If any persons are interested you are hereby directed to appear in this court in person or by a pleader duly instructed on 30-6-2026 at about 11.00 a.m to show cause against the above suit, failing which the suit will be heard and determined ex-parte against you.

Given under my hand and seal of the court on this 08th day of may 2026

Veeresha.H
Advocates for the petitioners

By Order of the court.
Chief Ministerial Officers
Principal Civil Gudgee and JMFC Ballari

# ಮಾನಸಿಕ ಕಾಯಿಲೆಗೂ ಸಮರ್ಪಕ ಚಿಕಿತ್ಸೆಯಿದೆ: ಡಾ. ಸಿ.ಆರ್. ಚಂದ್ರಶೇಖರ್

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ.8:ಮಾನಸಿಕ ಕಾಯಿಲೆಗೆ ಮದ್ದು ಇಲ್ಲ ಎನ್ನುವುದು ತಪ್ಪು ಕಲ್ಪನೆ; ಅದಕ್ಕೂ ಸಮರ್ಪಕ ಚಿಕಿತ್ಸೆ ಇದೆ ಎಂದು ಪದ್ಮಶ್ರೀ ಪುರಸ್ಕೃತ ಖ್ಯಾತ ಮನೋವೈದ್ಯರಾದ ಡಾ. ಸಿ. ಆರ್. ಚಂದ್ರಶೇಖರ್ ಅವರು ಹೇಳಿದರು. ನಗರದ ಯಿಮ್ಸ್ ಆಸ್ಪತ್ರೆ ಆವರಣದಲ್ಲಿ ಡಾನ್ ಬಾಸ್ಕೋ ಸಮಾಜ ಸೇವಾ ಕೇಂದ್ರ ಯಾದಗಿರಿ, ಬ್ರೆಡ್ಸ್ ಸಂಸ್ಥೆ ಬೆಂಗಳೂರು, ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ, ಯಿಮ್ಸ್ ವೈದ್ಯಕೀಯ ಕಾಲೇಜಿನ ಮನೋವೈದ್ಯಕೀಯ ವಿಭಾಗ ಹಾಗೂ ಒಖಓಆಖ ಯೋಜನೆಯ ಸಂಯುಕ್ತ ಸಹಯೋಗದಲ್ಲಿ ಜನಸಾಮಾನ್ಯರು ಮತ್ತು ಮಕ್ಕಳ ಮಾನಸಿಕ ಆರೋಗ್ಯ ಚಿಕಿತ್ಸೆ ಕುರಿತ ವೈದ್ಯರ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಇಂದಿನ ಸಮಾಜದಲ್ಲಿ ಮಾನಸಿಕ ಕಾಯಿಲೆಗಳು ಹೆಚ್ಚುತ್ತಿದ್ದು, ದೈಹಿಕ ಆರೋಗ್ಯದಂತೆಯೇ ಮಾನಸಿಕ ಆರೋಗ್ಯಕ್ಕೂ ಸಮಾನ ಮಹತ್ವ ನೀಡಬೇಕು. ಮಾನಸಿಕ ಕಾಯಿಲೆಗಳ ಬಗ್ಗೆ ಇರುವ ತಪ್ಪು ಕಲ್ಪನೆಗಳನ್ನು ನಿವಾರಿಸಬೇಕಾಗಿದೆ ಎಂದು ಅವರು ತಿಳಿಸಿದರು. ಸಮಯೋಚಿತ ಔಷಧಿ, ಕೌನ್ಸಿಲಿಂಗ್, ಮನರಂಜನೆ, ಉತ್ತಮ ಪರಿಸರ ಹಾಗೂ ಪ್ರೀತಿಯ ವಾತಾವರಣದಿಂದ ಮಾನಸಿಕ ಆರೋಗ್ಯವನ್ನು ಸುಧಾರಿಸಬಹುದು. ಒತ್ತಡ ಅಥವಾ ಮನಸ್ಸಿಗೆ ಬೇಸರವಾದಾಗ ತಕ್ಷಣ ಕೌನ್ಸಿಲಿಂಗ್ ನೆರವು ಪಡೆಯಬೇಕು ಎಂದರು. ಟೆಲಿ–ಮಾನಸ 14416 ರಾಷ್ಟ್ರೀಯ ಸಹಾಯವಾಣಿಯ ಮೂಲಕ ಮನೆಯಿಂದಲೇ ಕೌನ್ಸಿಲಿಂಗ್ ಪಡೆಯಬಹುದಾಗಿದೆ ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದ ಪ್ರಾಸ್ತಾವಿಕ ಭಾಷಣದಲ್ಲಿ ಡಾನ್ ಬಾಸ್ಕೋ



ಸಮಾಜ ಸೇವಾ ಕೇಂದ್ರದ ನಿರ್ದೇಶಕರಾದ ಫಾ. ಶಾಬು ಫ್ರಾನ್ಸಿಸ್ ಅವರು ಒಖಓಆಖ ಯೋಜನೆಯ ಉದ್ದೇಶಗಳನ್ನು ವಿವರಿಸಿದರು. ಶಾಲಾ ಮಕ್ಕಳು, ಶಿಕ್ಷಕರು, ಪೋಷಕರು ಹಾಗೂ ಸಮುದಾಯದ ಸದಸ್ಯರಿಗೆ ಮಾನಸಿಕ ಆರೋಗ್ಯದ ಅರಿವು ಮೂಡಿಸುವುದು ಹಾಗೂ ಸಮಾಜದಲ್ಲಿರುವ ಕಳಂಕವನ್ನು ಕಡಿಮೆ ಮಾಡುವುದು ಯೋಜನೆಯ ಮುಖ್ಯ ಗು–ರಿಯಾಗಿದೆ ಎಂದು ಹೇಳಿದರು. ಡಾನ್ ಬಾಸ್ಕೋ ಸಂಸ್ಥೆ ಕಳೆದ 22 ವರ್ಷಗಳಿಂದ ಶಿಕ್ಷಣ, ಮಹಿಳಾ ಸಬಲೀಕರಣ, ಮಕ್ಕಳ ಹಕ್ಕುಗಳು ಮತ್ತು ಜೀವನೋಪಾಯ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಪೃಥ್ವಿಕ್ ಶಂಕರ್ ಅವರು ಮಾತನಾಡಿ, ಮಾನಸಿಕ ನೆಮ್ಮದಿ ಹಣದಿಂದ ಮಾತ್ರ ಸಿಗುವುದಿಲ್ಲ. ಇಂದಿನ ದಿನಗಳಲ್ಲಿ ಮಕ್ಕಳಿಂದ ಹಿರಿಯರ ತನಕ ಎಲ್ಲರಿಗೂ ಮಾನಸಿಕ ಆರೋಗ್ಯ ಅತ್ಯವಶ್ಯಕವಾಗಿದೆ ಎಂದು ಹೇಳಿದರು. ಡಾನ್ ಬಾಸ್ಕೋ ಸಂಸ್ಥೆಯ ಕಾರ್ಯವನ್ನು ಅವರು ಶ್ಲಾಘಿಸಿದರು. ಮಕ್ಕಳ ತಜ್ಞರಾದ ಡಾ. ರವಿ ಅಂಗಡಿ ಅವರು ಮಾತನಾಡಿ,"ಮನಸ್ಸು ಅತ್ಯಂತ ಸೂಕ್ಷ್ಮವಾಗಿದ್ದು, ಅದನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯಿಮ್ಸ್ ಆಸ್ಪತ್ರೆಯ ಅಧೀಕ್ಷಕರಾದ ಡಾ. ಸಂತೋಷ್ ವಹಿಸಿದ್ದರು. ಈ ಸಂದರ್ಭದಲ್ಲಿ ಫಾ. ಸಜ್ಜೀ ಜಾರ್ಜ್ ರೆಕ್ಟರ್ ಮತ್ತು ಮ್ಯಾನೇಜರ್ ಅವರು ಪದ್ಮಶ್ರೀ ಡಾ. ಸಿ. ಆರ್. ಚಂದ್ರಶೇಖರ್ ಅವರನ್ನು ಸನ್ಮಾನಿಸಿದರು. ವೇದಿಕೆಯಲ್ಲಿ ಡಾ. ರಿಜ್ವಾನಾ ಆಫ್ರಿನ್, ಡಾ. ಪದ್ಮಾನಂದ ಗಾಯಕವಾಡ, ಡಾ. ಹನುಮರೆಡ್ಡಿ, ಡಾ. ಅಮಿತ್ ಕುಮಾರ್, ಡಾ. ಪ್ರೀತಮ್, ಡಾ. ವಿಜಯಲಕ್ಷ್ಮಿ ಹಾಗೂ ಶರಣಗೌಡ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಯಾದಗಿರಿ ಜಿಲ್ಲೆಯ 91ಕ್ಕೂ ಹೆಚ್ಚು ವೈದ್ಯರು, ಮಾನಸಿಕ ಆರೋಗ್ಯ ಸಿಬ್ಬಂದಿ ಹಾಗೂ ಯಿಮ್ಸ್ ಆಸ್ಪತ್ರೆಯ ಆರೋಗ್ಯ ಕಾರ್ಯಕರ್ತರು ಭಾಗವಹಿಸಿದ್ದರು. ಒಖಓಆಖ ಯೋಜನೆಯ ಆಪ್ತಸಮಾಲೋಚಕರಾದ ಸೂರ್ಯಕಾಂತ್ ಸ್ವಾಗತಿಸಿದರು. ಯೋಜನಾ ಸಂಯೋಜ–ಕರಾದ ಶರಣಪ್ಪ ಸಿ. ಅಮರಾಪುರ ಅವರು ಕಾರ್ಯಕ್ರಮ ನಿರೂಪಿಸಿದರು

# ಬ್ಯಾಂಕ್ ನೌಕರರ ಬೇಡಿಕೆ ಈಡೇರಿಕೆಗೆ ಮೇ 25-26ರಂದು ಮುಷ್ಕರ: ಎಸ್‌ಬಿಎಸ್‌ಯು(ಕೆ) ಮೌನ ಪ್ರತಿಭಟನೆ




• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.8: ಬ್ಯಾಂಕಿನ ನೌಕರರ ಹಲವು ದೀರ್ಘಕಾಲದ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ, ಆಲ್ ಇಂಡಿಯಾ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸ್ಟಾಫ್ ಫೆಡರೇಶನ್ (AIS-BISF) ಮೇ 25 ಮತ್ತು 26ರಂದು ರಾಷ್ಟ್ರವ್ಯಾಪಿ ಮುಷ್ಕರಕ್ಕೆ ಕರೆ ನೀಡಿದೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಸ್ಟೇಟ್ ಬ್ಯಾಂಕ್ ಸ್ಟಾಫ್ ಯೂನಿಯನ್ (ಕರ್ನಾಟಕ) ವತಿಯಿಂದ ನಗರದ ಜಗತ್ ವೃತದಲ್ಲಿ ಮೌನ ಪ್ರತಿಭಟನೆ ನಡೆಸಲಾಯಿತು.

ಸಂಘದ ಪ್ರಮುಖ ಬೇಡಿಕೆಗಳಲ್ಲಿ ಮೆಸೆಂಜರ್‌ಗಳು ಹಾಗೂ ಶಸ್ತ್ರಸಜ್ಜಿತ ರಕ್ಷಕರ ತಕ್ಷಣದ ನೇಮಕಾತಿ, 2019ರಿಂದ ಸೇವೆಗೆ ಸೇರಿದ ನೌಕರರಿಗೆ ಖಅಖ ವರ್ಗಾವಣೆ ಜಾರಿ, ಶಾಶ್ವತ ಹುದ್ದೆಗಳ ಔಟ್‌ಸೋರ್ಸಿಂಗ್ ನಿಲ್ಲಿಸುವುದು, ವೇತನ ಸಮಾನತೆ ಸಮಸ್ಯೆ ಪರಿಹಾರ, ಓಕಖ ವ್ಯಾಪ್ತಿಯ ನೌಕರರಿಗೆ ಪಿಂಚಣಿ ನಿಧಿ ನಿರ್ವಹಣೆಯಲ್ಲಿ ಆಯ್ಕೆಯ ಅವಕಾಶ, ಸಮರ್ಪಕ ಸಿಬ್ಬಂದಿ ನೇಮಕಾತಿ ಹಾಗೂ ವೈದ್ಯಕೀಯ ಮರುಪಾವತಿ ಯೋಜನೆಯಲ್ಲಿ ಸುಧಾರಣೆ ಸೇರಿವೆ.

ನಿರ್ವಹಣೆಯ ನಿರ್ಲಕ್ಷ್ಯ ಹಾಗೂ ಬೇಡಿಕೆಗಳಿಗೆ ಸಮರ್ಪಕ ಸ್ಪಂದನೆ ದೊರೆಯದ ಹಿನ್ನೆಲೆಯಲ್ಲಿ ಮುಷ್ಕರ ಅನಿವಾರ್ಯವಾಗಿದೆ ಎಂದು ಸಂಘದ ಉಪ ಪ್ರಧಾನ ಕಾರ್ಯದರ್ಶಿ ನವೀನ್ ಕಾಗಲ್ಕರ್ ತಿಳಿಸಿದ್ದಾರೆ.

ಈ ಪ್ರತಿಭಟನೆಯಲ್ಲಿ ಗೋಪಾಲಕೃಷ್ಣ ಜೋಶಿ, ಸೋಮಶೇಖರ್ ಕೆ, ರಾಘವೇಂದ್ರ ಕುಲಕರ್ಣಿ, ರೀತಾ ರಾಥೋಡ್ ಸೇರಿದಂತೆ ಇತರರು ಇದ್ದರು.

# ಮೃತರ ಕುಟುಂಬಕ್ಕೆ ಪರಿಹಾಧನದ ಚೆಕ್ ವಿತರಣೆ



• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

ಮೇ 08 : ಇತ್ತೀಚೆಗೆ ನದಿಯಲ್ಲಿ ಈಜಲು ಹೋಗಿ ಮೊಸಳೆ ನೋಡಿ ಗಾಭರಿಗೊಂಡು ಮೃತಪಟ್ಟ ವ್ಯಕ್ತಿಯ ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಮಂಜೂರಾದ 2 ಲಕ್ಷ ರೂ.ಗಳ ಚೆಕ್‌ನ್ನು ಬೀಳಗಿ ಶಾಸಕರು ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಅವರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶುಕ್ರವಾರ ವಿತರಣೆ ಮಾಡಿದರು. ಹಳೆ ಮುರನಾಳದಲ್ಲಿನ ಘಟಪ್ರಭಾ ನದಿಯಲ್ಲಿ ಬೀಳಗಿಯ ನಾಗವ್ವ ಭೀಮಪ್ಪ ಮಾದರ ಎಂಬುವರ ಮಗ ಮಹೇಶ ಮಾದರ ಈಜಲು ಹೋಗಿ ಮೊಳಸೆಯನ್ನು ನೋಡಿ ಗಾಬರಿಗೊಂಡು ಮೃತ ಪಟ್ಟಿದ್ದನು. ಮೃತರ ಕುಟುಂಬಕ್ಕೆ ಮುಖ್ಯ ಮಂತ್ರಿಗಳ ಪರಿಹಾರ ನಿಧಿಯಿಂದ ಮಂಜೂರಾದ 2 ಲಕ್ಷ ರೂ.ಗಳ ಚೆಕ್‌ನ್ನು ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಸೇರಿದಂತೆ ಇತರರು ಉಪಸ್ಥಿಗತರಿದ್ದರು.

# ಕಾರ್ಮಿಕರು ಸರ್ಕಾರದಿಂದ ಸಿಗುವ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಿ: ನ್ಯಾ. ಕವಿತಾ ಎಸ್.ಉಂಡೋಡಿ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.8: ರಾಷ್ಟ್ರ ಕಟ್ಟುವಲ್ಲಿ ಕಾರ್ಮಿಕರು ಪ್ರಮುಖ ಪಾತ್ರವಹಿಸುತ್ತಿದ್ದು, ಕಾರ್ಮಿಕರು ಸರ್ಕಾರದಿಂದ ದೊರೆಯುವ ಯೋಜನೆ, ಸೌಲಭ್ಯಗಳ ಬಗ್ಗೆ ಅರಿತು ಅವುಗಳ ಸದುಪಯೋಗ ಪಡೆದುಕೊಳ್ಳುವಂತೆ ಸಿ.ಜೆ.ಎಮ್. ನ್ಯಾಯಾಲಯದ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಭಾರ ಸದಸ್ಯ ಕಾರ್ಯದರ್ಶಿ ಕವಿತಾ ಎಸ್.ಉಂಡೋಡಿ ಹೇಳಿದರು.ಅವರು ಶುಕ್ರವಾರ ತಾಲೂಕು ಪಂಚಾಯತ ಸಭಾಭವನದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ನ್ಯಾಯವಾದಿಗಳ ಸಂಘ ಇವರುಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ಅಂತರಾಷ್ಟ್ರೀಯ ಕಾರ್ಮಿಕ ದಿನಾಚರಣೆ ಅಂಗವಾಗಿ ಕಾನೂನು ಸಾಕ್ಷರತಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಸರ್ಕಾರವು ಕಾರ್ಮಿಕ ಇಲಾಖೆಯ ಮೂಲಕ ಪಿಂಚಣಿ ಸೌಲಭ್ಯ, ಕುಟುಂಬ ಸೌಲಭ್ಯ, ದುರ್ಬಲತೆ ಪಿಂಚಣಿ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ವೆಚ್ಚ, ಶೈಕ್ಷಣಿಕ ಸಹಾಯಧನ, ಅಪಘಾತ ಪರಿಹಾರ ಇತರೆ ಸೌಲಭ್ಯಗಳನ್ನು ಕಾರ್ಮಿಕರಿಗೆ ನೀಡಲಾಗುತ್ತಿದ್ದು, ಕಾರ್ಮಿಕರು ಈ ಯೋಜನೆ, ಸೌಲಭ್ಯಗಳನ್ನು ಹಾಗೂ ಹಕ್ಕುಗಳನ್ನು ಅರಿತುಕೊಡು ಇದರ ಸದುಪಯೋಗ ಪಡೆದುಕೊಂಡು ಉತ್ತಮ




ಜೀವನ ಸಾಗಿಸಬೇಕು. ಕಾರ್ಮಿಕರು ತಮ್ಮ ಮಕ್ಕಳನ್ನು ಕಾರ್ಮಿಕರನ್ನಾಗಿಸದೇ ಉನ್ನತ ಶಿಕ್ಷಣ ನೀಡಿ, ಉನ್ನತ ಹುದ್ದೆಯನ್ನು ಪಡೆದುಕೊಳ್ಳುವಂತೆ ರೂಪಿಸಿ, ರಾಷ್ಟ್ರ ನಿರ್ಮಾಣದಲ್ಲಿ ಅವರದೇ ಆದ ಕೊಡುಗೆ ನೀಡುವಂತೆ ಮಾಡಬೇಕು ಎಂದ ಅವರು ಪ್ರತಿಯೊಬ್ಬರು ಮಾನವೀಯತೆ ಮೌಲ್ಯಗಳನ್ನು ರೂಢಿಸಿಕೊಂಡು ತಮ್ಮ ಮಕ್ಕಳಲ್ಲಿ ಮಾನವಿಯತೆ ಗುಣಗಳನ್ನು ಬೆಳಸುವಂತೆ ತಿಳಿಸಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಲಲಿತಾ ಸಾತೇನಹಳ್ಳಿ ಮಾತನಾಡಿ, ಕಾರ್ಮಿಕರಲ್ಲಿ ಸಂಘಟಿತ ಹಾಗೂ ಅಸಂಘಟಿತ ಎಂಬ ಎರಡು ವಲಯಗಳಿದ್ದು, ಅಸಂಘಟಿತ ವಲಯ ಕಾರ್ಮಿಕರಿಗೆ ಭದ್ರತೆ ಮತ್ತು ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಸರ್ಕಾರವು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು 2007 ರಲ್ಲಿ ಜಾರಿಗೆ ತಂದಿದೆ. ಅಗತ್ಯ ದಾಖಲಾತಿಗಳೊಂದಿಗೆ ಕಾರ್ಮಿಕ ಇಲಾಖೆ ನೋಂದಾಣಿ ಮಾಡಿಸಿಕೊಂಡಲ್ಲಿ ಅವರಿಗೆ ಕಾರ್ಮಿಕ ಕಾರ್ಡ್‌ನ್ನು ವಿತರಿಸಲಾಗುವುದು. ಅಪಘಾತ ಪರಿಹಾರ, ಮದುವೆ ಸಹಾಯಧನ, ಶೈಕ್ಷಣಿಕ ಸಹಾಯ ಹಲವು ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಅರ್ಹ ಕಾರ್ಮಿಕರು ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದು. 2026 ನೇ ಸಾಲಿನಲ್ಲಿ ವಿವಿಧ ಯೋಜನೆಯಡಿ 1,852 ಫಲಾನುಭವಿಗಳಿಗೆ 10,00,55,946 ರೂ ಧನ ಸಹಾಯ ನೀಡಲಾಗಿದೆ. ಬಾಲ್ಯ ಕಾರ್ಮಿಕರು ಕಂಡು ಬಂದಲ್ಲಿ 1098 ಮಕ್ಕಳ ಸಹಾಯವಾಣಿಗೆ ಮಾಹಿತಿ ನೀಡಿ, ಬಾಲ ಕಾರ್ಮಿಕ ಮುಕ್ತ ಜಿಲ್ಲೆಯನ್ನಾಗಿಸಲು ಪ್ರಯತ್ನಿಸೋಣ ಎಂದರು.

ಪ್ಯಾನಲ್ ವಕೀಲ ಎ.ಆರ್.ಬಿ.ಡಿಸೋಜಾ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಉಪನ್ಯಾಸ ನೀಡಿ, ಇತ್ತೀಚಿನ ದಿನಗಳಲ್ಲಿ ಪೋಷಕರು ಮಕ್ಕಳನ್ನು ಬಾಲ್ಯದಲ್ಲೇ ಕೈಗಾರಿಕೆಗಳಲ್ಲಿ ದುಡಿಯಲು ಕಳುಹಿಸುತ್ತಿದ್ದಾರೆ, ಬಾಲ್ಯ ಕಾರ್ಮಿಕ ರಕ್ಷಣೆಗಾಗಿ ಸರ್ಕಾರ ಅನೇಕ ಯೋಜನೆ ಮತ್ತು ಕಾಯ್ದೆಯನ್ನು ಅನುಷ್ಠಾನ ಜಾರಿಗೆ ತಂದಿದೆ. 14 ವರ್ಷದೊಳಗಿನ ಬಾಲ ಕಾರ್ಮಿಕ ಹಾಗೂ 14 ವರ್ಷದಿಂದ 18 ಕಿಶೋರ ಕಾರ್ಮಿಕರನ್ನು ಕೆಲಸದಲ್ಲಿ ತೊಡಗಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಕೆಲಸಕ್ಕೆ ನೇಮಿಸಿಕೊಂಡಲ್ಲಿ ಮಾಲೀಕರಿಗೆ ಶಿಕ್ಷೆ ಮತ್ತು ದಂಡ ವಿಧಿಸಲಾಗುವುದು. ಒಂದು ವೇಳೆ ಜೀವನ ಸಾಗಿಸಲು ಅಥವಾ ಕುಟುಂಬಿಕ ಅವಶ್ಯಕತೆಗೆ ಕೆಲಸದಲ್ಲಿ ತೊಡಗಿಸಿಕೊಂಡಲ್ಲಿ ಅವರಿಗೆ ಸುರಕ್ಷತೆ, ರಕ್ಷಣೆ, ಸುಚ್ಚಿತವಾದ ವ್ಯವಸ್ಥೆ ಕಲ್ಪಿಸಬೇಕು. ಕಾರ್ಮಿಕರು ಶೋಷಣೆಗೆ ಒಳಗಾಗಿರುವುದು ಕಂಡು ಬಂದಲ್ಲಿ ಕಾರ್ಮಿಕ ಅಧಿಕಾರಿಗಳಿಗೆ ಮಾಹಿತಿ ನೀಡಿ, ಅವರು ಜೀವನ ರೂಪಿಸಿಕೊಳ್ಳಲು ಸಹಕರಿಯಾಗಿ ಎಂದರು.

ಈ ಸಂದರ್ಭದಲ್ಲಿ ಕಾರ್ಮಿಕರಿಗೆ ಸುರಕ್ಷಿತ ಪರಿಕರಗಳನ್ನು (ಕಿಟ್) ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಸಂತೋಷ ವಿ.ಭಾಗವತ, ಕಾರ್ಮಿಕ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು, ಕಾರ್ಮಿಕರು ಮತ್ತಿತರರು ಇದ್ದರು. ಕಾರ್ಮಿಕ ನೀರಿಕ್ಷಕ ಡಿ.ಎಮ್. ವೆಂಕಟೇಶ ಬಾಬು ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.

# ಇಂದು ರಾಜ್ಯಮಟ್ಟದ ವಿಚಾರ ಸಂಕೀರಣ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.8:ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಐಕ್ಯೂಎಸಿ ಸಹಯೋಗದೊಂದಿಗೆ "ಭೌತಿಕ ಮತ್ತು ಜೀವ ವಿಜ್ಞಾನಗಳಲ್ಲಿ ಕೃತಕ ಬುದ್ಧಿಮತ್ತೆ ಹಾಗೂ ಅದರ ಅನ್ವಯಗಳು" ವಿಷಯದ ಕುರಿತು ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣವನ್ನು ದಿನಾಂಕ 09–05–2026ರಂದು ಬೆಳಿಗ್ಗೆ 9 ಗಂಟೆಗೆ ಶ್ರೀ ಅನಂತರಾವ ದೇಶಮುಖ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಈ ವಿಚಾರ ಸಂಕಿರಣವನ್ನು ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿಯ ಗಣಕಯಂತ್ರ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಡಾ. ಶಿವಾನಂದ ಎಸ್. ರುಮ್ಮ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ನೂತನ ವಿದ್ಯಾಲಯ ಸಂಸ್ಥೆಯ ಶೈಕ್ಷಣಿಕ ಮಂಡಳಿಯ ಅಧ್ಯಕ್ಷರಾದ ಡಾ. ಮೀನಾ ಪತ್ಕಿ ದೇಶಪಾಂಡೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕಲಬುರಗಿಯ ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಚೇರಿಯ ಸಹ ನಿರ್ದೇಶಕರಾದ ಡಾ. ಗೊಲ್ಲೆ ಶಿವಶರಣ ಬಿ. ಭಾಗವಹಿಸಲಿದ್ದಾರೆ.

ವಿಚಾರ ಸಂಕಿರಣದ ಮೊದಲ ಅಧಿವೇಶನದಲ್ಲಿ "ಭೌತಿಕ ವಿಜ್ಞಾನಗಳಲ್ಲಿ ಕೃತಕ ಬುದ್ಧಿಮತ್ತೆ" ವಿಷಯದ ಕುರಿತು ಕರ್ನಾಟಕ ಕಾಲೇಜು, ಬೀದರಿನ ನಿವೃತ್ತ ಪ್ರಾಚಾರ್ಯರದ ಡಾ. ಮಲ್ಲಿಕಾರ್ಜುನ ಹಂಗಾರ್ಗೆ ಉಪನ್ಯಾಸ ನೀಡಲಿದ್ದಾರೆ. ಎರಡನೇ ಅಧಿವೇಶನದಲ್ಲಿ "ಜೀವ ವಿಜ್ಞಾನಗಳಲ್ಲಿ ಕೃತಕ ಬುದ್ಧಿಮತ್ತೆ" ವಿಷಯದ ಕುರಿತು ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿಯ ಡಾ. ಶಿವಾನಂದ ಎಸ್. ಗೋರ್ಣಾಳೆ ಅವರು ವಿಚಾರ ಮಂಡನೆ ಮಾಡಲಿದ್ದಾರೆ.

ರಾಜ್ಯದ ವಿವಿಧ ಭಾಗಗಳಿಂದ ವಿದ್ಯಾರ್ಥಿಗಳು, ಅಧ್ಯಾಪಕರು, ಸಂಶೋಧಕರು ಹಾಗೂ ವಿಜ್ಞಾನಾಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಕೃತಕ ಬುದ್ಧಿಮತ್ತೆಯ ಇತ್ತೀಚಿನ ಬೆಳವಣಿಗೆಗಳು ಮತ್ತು ಅದರ ವೈಜ್ಞಾನಿಕ ಅನ್ವಯಗಳ ಕುರಿತು ಚರ್ಚೆ ನಡೆಯಲಿದೆ. ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸುವಂತೆ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ದಯಾನಂದ ಎಂ. ಶಾಸ್ತ್ರಿ ಹಾಗೂ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ನಿರ್ದೇಶಕರಾದ ಪ್ರೊ. ಗೋವಿಂದ ಪೂಜಾರ್ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಿಪ್ಪೇಸ್ವಾಮಿ.ಎ: ಡಾಕ್ಟರೇಟ್ ಪದವಿ ಪ್ರಧಾನ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.08: ಕಾರವಾರದ ಸರ್ಕಾರಿ ಕಲಾ ಮತ್ತು ವಿಜ್ಞಾನ ಮಹಾವಿದ್ಯಾಲಯದ ಕೈಗಾರಿಕರಸಾಯನಶಾಸ್ತ್ರ ವಿಭಾಗದಲ್ಲಿ ಸಹ ಪ್ರಾಧ್ಯಾಪಕ ತಿಪ್ಪೇಸ್ವಾಮಿ.ಎ ಸಲ್ಲಿಸಿರುವ "Synthesis, Structural magnetic and electrochemical properties of doped ferrites nanoparticles" ಎಂಬ



ಸಂಶೋಧನಾ ಮಹಾಪ್ರಬಂಧಕ್ಕೆ ಕುವೆಂಪು ವಿಶ್ವವಿದ್ಯಾಲಯ 35ನೇ ಘಟಿಕೋತ್ಸವದಲ್ಲಿ ಡಾಕ್ಟರೇಟ್ ಪದವಿ ಪ್ರಧಾನ ಮಾಡಿದೆ.

ಶಿವಮೊಗ್ಗ ಸಹ್ಯಾದ್ರಿ ವಿಜ್ಞಾನ ಕಾಲೇಜಿನ ಪ್ರೋ.ಜಿ.ಕೃಷ್ಣಮೂರ್ತಿ, ಇವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು.

# ಸತತ ಪ್ರಯತ್ನದಿಂದ ಯಶಸ್ಸು ಸಾಧ್ಯ; ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.08: ಆತ್ಮಸ್ಥೆರ್ಯದಿಂದ ಕಾರ್ಯ ಸಿದ್ಧಿ ಸಾಧ್ಯ. ವಿದ್ಯಾರ್ಥಿಗಳು ಓದಿನ ಜೊತೆಗೆ ಇತರೆ ಉತ್ತಮ ಹವ್ಯಾಸಗಳನ್ನೂ ರೂಢಿಸಿಕೊಳ್ಳಬೇಕು. ಜೀವನದಲ್ಲಿ ಸತತ ಪ್ರಯತ್ನ ಮುಖ್ಯವಾಗಿದ್ದು, ಪ್ರಯತ್ನದಿಂದ ಯಶಸ್ಸು ಸಾಧ್ಯ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ಹೇಳಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 2025–26 ನೇ ಸಾಲಿನಲ್ಲಿ ಎಸ್. ಎಸ್.ಎಲ್.ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಅತೀ ಹೆಚ್ಚು ಅಂಕ ಪಡೆದ ಮಕ್ಕಳ ಅಭಿನಂದನಾ ಸಮಾರಂಭ ಮತ್ತು ಸಂವಾದದಲ್ಲಿ ಪಾಲ್ಗೊಂಡು ಮಾತನಾಡಿದರು.

ವಿದ್ಯಾರ್ಥಿಗಳು ಕೇವಲ ಅಂಕ ಗಳಿಸುವ ಉದ್ದೇಶದಿಂದ ಮಾತ್ರ ಓದದೇ ಜೀವನದಲ್ಲಿ ತಮ್ಮ ಕನಸನ್ನು ನನಸು ಮಾಡಿಕೊಳ್ಳುವ ಕಡೆಗೆ ಗಮನ ಹರಿಸಬೇಕು. ಅಂಕ ಕೇವಲ ಮಾನದಂಡವಾಗಿದ್ದು, ಒಂದೊಂದು ಅಂಕ ವಿದ್ಯಾರ್ಥಿಯ ಮನೋ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಈ ಬಾರಿಯ ಪರೀಕ್ಷೆಯಲ್ಲಿ ಇಲಾಖೆಯ ಪ್ರಯತ್ನ, ಪಾಲಕರ ಬೆಂಬಲ, ಸಮಾಜದ ಪ್ರೇರಣೆಯಿಂದ ಉತ್ತಮ ಸಾಧನೆಯಾಗಿದೆ ಎಂದರು.



ವಿದ್ಯಾರ್ಥಿಗಳು ಒತ್ತಡಗಳನ್ನು ಎದುರಿಸಿ ಮುಂದಿನ ಭವಿಷ್ಯದ ಕಡೆ ಯೋಚಿಸಿ ನಿರ್ಧಾರ ಕೈಗೊಳ್ಳಬೇಕು. ಜೀವನದಲ್ಲಿ ಸಾಧಿಸಬೇಕು ಎಂಬ ಛಲವಿದ್ದಾಗ ತಮ್ಮ ಗುರಿ ಮುಟ್ಟಲು ಸಾಧ್ಯ. ಆ ನಿಟ್ಟಿನಲ್ಲಿ ಪೋಷಕರು, ಶಿಕ್ಷಕರಿಂದ ನೇರವಾಗಿ ಅಥವಾ ಪರೋಕ್ಷವಾಗಿ ಸಹಕಾರ ಇರುತ್ತದೆ. ಶಿಕ್ಷಣ ಪಡೆದ ನಂತರ ತಾವು ಸಮಾಜಕ್ಕೆ ಏನು ಕೊಡುಗೆ ನೀಡುತ್ತೀರಿ ಎಂಬುದು ಮುಖ್ಯವಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ. ದಿಲೀಷ್ ಶಶಿ ಮಾತನಾಡಿ, ಸರ್ಕಾರಿ ಶಾಲೆಯಲ್ಲಿ ಓದಿ ರಾಜ್ಯಕ್ಕೆ ರ‍್ಯಾಂಕ್ ಬಂದ ವಿದ್ಯಾರ್ಥಿಗಳ ಸಾಧನೆ ಅತೀ ದೊಡ್ಡದು, ಜೀವನದಲ್ಲಿ ಗುರಿ ಸಾಧಿಸಲು ಸತತ ಪ್ರಯತ್ನವಿರಬೇಕು. ಸಿಕ್ಕ ಅವಕಾಶಗಳನ್ನು ಬಳಸಿಕೊಂಡು ಉತ್ತಮ ಸಾಧನೆ ಮಾಡುವ ಕಡೆ ಗಮನ ಹರಿಸಬೇಕು ಎಂದರು.

ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗುವ ಸಂದರ್ಭದಲ್ಲಿ ಮೂಲ ವಿಷಯಗಳನ್ನು ಮೊದಲು ಅರ್ಥ ಮಾಡಿಕೊಂಡು ಅಧ್ಯಯನ ಮಾಡಬೇಕು, ಮಾದರಿ ಪ್ರಶ್ನೆ ಪತ್ರಿಕೆಗಳಿಗೆ ಉತ್ತರ ಬರೆದು ಅದನ್ನು ತಾವೇ ಮೌಲ್ಯಮಾಪನ ಮಾಡಿ, ಅದರಲ್ಲಿ ಆಗಿರುವ ತಪ್ಪುಗಳನ್ನು ಕಂಡು ಹಿಡಿದು ಅವುಗಳನ್ನು ಸರಿಪಡಿಸಿಕೊಳ್ಳಬೇಕು ಕಠಿಣ ಪರಿಶ್ರಮದಿಂದ ಗುರಿ ತಲುಪಲು ಸಾಧ್ಯ. ಓದಿನ ಜೊತೆ ಆಸಕ್ತಿ ಇರುವ ಪಠ್ಯೇತರ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಸಂವಾದದಲ್ಲಿ ಯಲ್ಲಾಪುರದ ಸಮೃದ್ಧಿ ಭಾಗ್ವತ, ಭಟ್ಕಳದ ಸಾನಿಕಾ ಬೈಲೂರ್, ವೈಭವಿ ನಾಯ್ಕ, ಹೊನ್ನಾವರದ ದೇವಿಕಾ ಪೈ ಕುಮಟಾದ ದಿಶಾಂತ್ ನಾಯ್ಕ, ಶಿರಸಿಯ ಅದಿತಿ ನಾಯ್ಕ, ಲತಿಕಾ ಹಾಗೂ ಇತರ ವಿದ್ಯಾರ್ಥಿಗಳು ಸಂವಾದದಲ್ಲಿ ಪಾಲ್ಗೊಂಡು ತಮ್ಮ ಅನಿಸಿಕೆ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ರಾಜ್ಯಕ್ಕೆ ಮೊದಲ ಹತ್ತು ಸ್ಥಾನ ಗಳಿಸಿದ ಶಿರಸಿ ಮತ್ತು ಉತ್ತರ ಕನ್ನಡ ಶೈಕ್ಷಣಿಕ ಜಿಲ್ಲೆಯ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕಿ ಲತಾ ನಾಯಕ, ಕುಮಟಾ ಡಯಟ್ ಉಪನಿರ್ದೇಶಕ ಎನ್ ಆರ್ ಹೆಗಡೆ, ಶಿಕ್ಷಣಾಧಿಕಾರಿ ಡಾ. ಶುಭಾ ನಾಯಕ, ಜಿಲ್ಲಾ ಯೋಜನಾ ಉಪ ಸಮನ್ವಯ ಆಧಿಕಾರಿ ಭಾಸ್ಕರ ಗಾಂವಕರ, ಡಯಟ ಕುಮಟಾ ಹಿರಿಯ ಉಪನ್ಯಾಸಕಿ ಭಾರತಿ ನಾಯ್ಕ, ವಿದ್ಯಾರ್ಥಿಗಳು ಮತ್ತು ಪೋಷಕರು ಇದ್ದರು.

# ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮ ಅಂಕಗಳಿಸಿದವರಿಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.8: ಉತ್ತರ ಕನ್ನಡ ಜಿಲ್ಲಾ ಸರಕಾರಿ ನೌಕರರ ಪತ್ತಿನ ಸಹಕಾರಿ ಸಂಘ ನಿಯಮಿತಿ ಕಾರವಾರ ಇದರ ಸಂಘದ ಸದಸ್ಯರುಗಳ ಮಕ್ಕಳಲ್ಲಿ 2026 ರ ಮಾರ್ಚ್/ಏಪ್ರಿಲ್ ತಿಂಗಳಲ್ಲಿ ಜರುಗಿದ್ದ 10 ನೇ ತರಗತಿ ಪರೀಕ್ಷೆಯಲ್ಲಿ ಮತ್ತು ದ್ವಿತೀಯ ಪಿಯುಸಿ ವಿಜ್ಞಾನ, ಕಲಾ ಮತ್ತು ವಾಣಿಜ್ಯ ವಿಭಾಗದಲ್ಲಿ ಪ್ರಥಮವಾಗಿ ಹಾಜರಾದ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಗಳಿಸಿದ 3 ವಿದ್ಯಾರ್ಥಿಗಳಿಗೆ ಸಂಘದ ವತಿಯಿಂದ ಸನ್ಮಾನಿಸಿ ನಗದು ಬಹುಮಾನ ನೀಡಲಾಗುವುದು.

ಸಂಘದಲ್ಲಿ ಸದಸ್ಯರಾದವರ ಮಕ್ಕಳು ಮಾತ್ರ ಈ ಸೌಲಭ್ಯಕ್ಕೆ ಅರ್ಹರಾಗಿದ್ದು, ಮಾರ್ಚ್/ ಏಪ್ರಿಲ್ 2026 ರಲ್ಲಿ ನಡೆದ 10 ನೇ ತರಗತಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯ ಪ್ರಥಮ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಮಾತ್ರ ಪರಿಗಣಿಸಲಾಗುವುದು. ಉತ್ತರ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಸದಸ್ಯರುಗಳ ಮಕ್ಕಳು ಮಾತ್ರ ಈ ಬಹುಮಾನಕ್ಕೆ ಅರ್ಹರಾಗಿರುತ್ತಾರೆ. ಕ್ರಮವಾಗಿರುವ ಅರ್ಹ ಅರ್ಜಿಗಳಲ್ಲಿ ಗರಿಷ್ಠ ಅಂಕಗಳಿಸಿದ ಎಸ್.ಎಸ್. ಎಲ್.ಸಿ ಮೊದಲ 3 ವಿದ್ಯಾರ್ಥಿಗಳಿಗೆ ಹಾಗೂ ದ್ವಿತೀಯ ಪಿಯುಸಿಯಲ್ಲಿ ಪ್ರಥಮ ಪರೀಕ್ಷೆಯ ಅಂಕ ಪಟ್ಟಿಯ ದೃಢೀಕೃತ ಅಂಕ ಪ್ರತಿ ಹಾಗೂ ಸಂಘಧ ಸದಸ್ಯತ್ವ ಸಂಖ್ಯೆಯೊಂದಿಗೆ ಅರ್ಜಿಯನ್ನು ಸಂಘದ ಕಾರ್ಯದರ್ಶಿಗಳಿಗೆ ಮೇ.31 ರೊಳಗಾಗಿ ಅರ್ಜಿ ಸಲ್ಲಿಸಬಹುದು.ಹೆಚ್ಚಿನ ಮಾಹಿತಿಗಾಗಿ ಸಂಘದ ಕಾರ್ಯದರ್ಶಿ ಮೊ.ಸಂ: 8217879585 ನ್ನು ಸಂಪರ್ಕಿಸುವಂತೆ ಸಂಘದ ಪ್ರಕಟಣೆ ತಿಳಿಸಿದೆ.

# ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿ ಅವಧಿ ಮೇ 18ರವರೆಗೆ ವಿಸ್ತರಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 08:2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಸುವ ಪ್ರಕ್ರಿಯೆಯ ಕಾಲಾವಧಿಯನ್ನು ಮೇ 18 ರ ವರೆಗೆ ವಿಸ್ತರಿಸಿ ರಾಜ್ಯ ಸರ್ಕಾರವು ಆದೇಶಿಸಿದೆ.

ಈ ಸೌಲಭ್ಯವು ಕೇವಲ ಈಗಾಗಲೇ ನೋಂದಾಯಿತರಾದ ರೈತರಿಗೆ ಮಾತ್ರ ಅನ್ವಯಿಸುತ್ತದೆ. ರೈತರು ಯಾವುದೇ ಮಧ್ಯವರ್ತಿಗಳ ಮೊರೆ ಹೋಗದೆ, ನೇರವಾಗಿ ಸರ್ಕಾರದ ಖರೀದಿ ಕೇಂದ್ರಗಳ ಮೂಲಕವೇ ತಮ್ಮ ಉತ್ಪನ್ನವನ್ನು ಮಾರಾಟ ಮಾಡಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು.

# ಕುಡಿಯುವ ನೀರು ಪೈಪ್ ಲೈನ್ ಕಾಮಗಾರಿ ಹೆಸರಿನಲ್ಲಿ ಒಳ್ಳೆಯ ರಸ್ತೆ ದುರಸ್ತಿಗೊಳಿಸುತ್ತಿರುವ ಗುತ್ತಿಗೆದಾರರು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ.8: ಮಹಾನಗರ ಪಾಲಿಕೆಯ 39ನೇ ವಾರ್ಡ್‌ನಲ್ಲಿ ತಾಯಮ್ಮ ದೇವಸ್ಥಾನದ ಎದುರು ಭಾಗದಲ್ಲಿ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿ ಹೆಸರಿನಲ್ಲಿ ಈಗಾಗಲೇ ಉತ್ತಮ ಸ್ಥಿತಿಯಲ್ಲಿದ್ದ ರಸ್ತೆಯನ್ನು ಅಗೆದು ಹಾನಿಗೊಳಿಸುತ್ತಿರುವುದಾಗಿ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಾರ್ವಜನಿಕರ ಪ್ರಕಾರ, ಹೊಸ ಪೈಪ್‌ಲೈನ್ ಅಳವಡಿಸುವ ಕಾಮಗಾರಿ ವೇಳೆ ಯಾವುದೇ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸದೇ ರಸ್ತೆ ಸಂಪೂರ್ಣವಾಗಿ ಒಡೆದು ಹಾಕಲಾಗಿದ್ದು, ಸಂಚಾರಕ್ಕೂ ತೊಂದರೆ ಉಂಟಾಗಿದೆ.ಸ್ಥಳೀಯ ನಿವಾಸಿಗಳು ಹೇಳುವಂತೆ, ರಸ್ತೆ ಮರುನಿರ್ಮಾಣದ ಸ್ಪಷ್ಟ ಯೋಜನೆ ಇಲ್ಲದೇ ಗುತ್ತಿಗೆದಾರರು ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳು ಕೆಲಸ ಕೈಗೊಂಡಿದ್ದಾರೆ. ಪರಿಣಾಮವಾಗಿ ಧೂಳು, ಕೆಸರು ಹಾಗೂ ವಾಹನ ಸವಾರರಿಗೆ ಅಪಾಯಕರ ಪರಿಸ್ಥಿತಿ ನಿರ್ಮಾಣವಾಗಿದೆ. ಮಳೆ ಬಂದರೆ ರಸ್ತೆಯಲ್ಲಿ ನೀರು ನಿಂತು ಸಾರ್ವಜನಿಕರಿಗೆ ಇನ್ನಷ್ಟು ತೊಂದರೆ ಉಂಟಾಗುವ ಭೀತಿ ವ್ಯಕ್ತವಾಗಿದೆ.ನಗರದ ಹಲವು ಭಾಗಗಳಲ್ಲಿ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿಗಳ ವೇಳೆ ರಸ್ತೆ ಹಾನಿ ಹಾಗೂ ಸಮನ್ವಯದ ಕೊರತೆ ಬಗ್ಗೆ ಈಗಾಗಲೇ ಸಾರ್ವಜನಿಕ ಅಸಮಾಧಾನ ವ್ಯಕ್ತವಾಗಿರುವ ಉದಾಹರಣೆಗಳಿವೆ. ವಿವಿಧ ನಗರಗಳಲ್ಲಿ ಕಾಮಗಾರಿಗೆ ಮುನ್ನ ಸಮನ್ವಯತೆ ಇಲ್ಲದಿದ್ದರೆ ರಸ್ತೆ ಅಭಿವೃದ್ಧಿ ಹಾಳಾಗುತ್ತದೆ ಎಂದು ವರದಿಗಳಲ್ಲೂ ಉಲ್ಲೇಖಿಸಲಾಗಿದೆ. ಸ್ಥಳೀಯರ ಪ್ರಮುಖ ಬೇಡಿಕೆಗಳು:ಒಡೆದ ರಸ್ತೆಯನ್ನು ತಕ್ಷಣ ಗುಣಮಟ್ಟದಿಂದ ಮರುನಿರ್ಮಾಣ ಮಾಡಬೇಕು.ಕಾಮಗಾರಿ ಪೂರ್ಣಗೊಳ್ಳುವವರೆಗೆ ಸುರಕ್ಷತಾ ಕ್ರಮ ಕೈಗೊಳ್ಳಬೇಕು.ಸಂಬಂಧಿಸಿದ ಗುತ್ತಿಗೆದಾರರು ಮತ್ತು ಪಾಲಿಕೆ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕು.ಸಾರ್ವಜನಿಕರಿಗೆ ಮುಂಚಿತ ಮಾಹಿತಿ ನೀಡದೇ ರಸ್ತೆ ಒಡೆಯುವ ಕಾಮಗಾರಿ ನಿಲ್ಲಿಸಬೇಕು.ಈ ವಿಷಯದ ಕುರಿತು ವಾರ್ಡ್ ನಿವಾಸಿಗಳು ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ದೂರು ಸಲ್ಲಿಸಲು ಸಿದ್ಧತೆ ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ.ಈ ಕಾಮಗಾರಿ ಆದ ನಂತರ ದುರಸ್ತಿಯಾದ ರಸ್ತೆಯನ್ನು ಸಂಬಂಧಪಟ್ಟ ಗುತ್ತಿಗೆದಾರರಿಂದ ಸರಿಪಡಿಸುತ್ತಿವೆ ಎಂದು ಮಹಾನಗರ ಪಾಲಿಕೆ ಎ.ಇ ಪ್ರಕಾಶ್ ತಿಳಿಸಿದ್ದಾರೆ.



# ವಿಪತ್ತು ನಿರ್ವಹಣೆ ಕುರಿತು ಅಣುಕು ಪ್ರದರ್ಶನ : ಗಮನ ಸೆಳೆದ ತುರ್ತು ಆರೋಗ್ಯ ಸೇವೆಗಳ ಅಣುಕು ಪ್ರದರ್ಶನ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ:8: ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಯಾದಗಿರಿ ಇವರ ಮಾರ್ಗದರ್ಶನದಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ, ಜಿಲ್ಲಾ ಗೃಹರಕ್ಷಕ ದಳ ಹಾಗೂ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಜಖಒಖ) ಜಿಲ್ಲಾ ಆಸ್ಪತ್ರೆ, ಯಾದಗಿರಿಯಲ್ಲಿ ವಿಪತ್ತು ಸನ್ನದ್ಧತೆ ಕುರಿತು ಸಮಗ್ರ ಅಣುಕು ಪ್ರದರ್ಶನ (ಒಂಥಿಇ ಆಡಿಟಟ) ಯಶಸ್ವಿಯಾಗಿ ನಡೆಸಲಾಯಿತು.

ಈ ಅಣುಕು ಪ್ರದರ್ಶನದ ಮುಖ್ಯ ಉದ್ದೇಶವು ಆಸ್ಪತ್ರೆ ಪರಿಸರದಲ್ಲಿ ಸಂಭವಿಸಬಹುದಾದ ಅಗ್ನಿ ಅವಘಡ, ಕಟ್ಟಡ ದುರಂತ, ಭೂಕಂಪ, ವಿದ್ಯುತ್ ಅವಘಡ ಹಾಗೂ ಇತರೆ ತುರ್ತು ಪರಿಸ್ಥಿತಿಗಳ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ತ್ವರಿತವಾಗಿ ಹೇಗೆ ಕಾರ್ಯನಿರ್ವಹಿಸಬೇಕು ಎಂಬುದರ ಕುರಿತು ಪ್ರಾಯೋಗಿಕ ಅರಿವು ಮೂಡಿಸುವುದಾಗಿತ್ತು.

ತುರ್ತು ಪರಿಸ್ಥಿತಿಗಳಲ್ಲಿ ಮಾನವ ಜೀವ ರಕ್ಷಣೆ, ಗಾಯಾಳುಗಳ ಸುರಕ್ಷಿತ ಸ್ಥಳಾಂತರ, ತುರ್ತು ಚಿಕಿತ್ಸೆ, ಜನಸಂದಣಿ ನಿಯಂತ್ರಣ ಹಾಗೂ ಮಾಹಿತಿ ವಿನಿಮಯದ ಮಹತ್ವವನ್ನು ಕಾರ್ಯಕ್ರಮದ ಮೂಲಕ ಸ್ಪಷ್ಟಪಡಿಸಲಾಯಿತು.

ಕಾರ್ಯಕ್ರಮದಲ್ಲಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ಅಗ್ನಿ ನಿಯಂತ್ರಣ ಕ್ರಮಗಳು, ಅಗ್ನಿಶಾಮಕ ಉಪಕರಣಗಳ ಸಮರ್ಪಕ ಬಳಕೆ, ಹೊಗೆ ತುಂಬಿದ ಪ್ರದೇಶಗಳಲ್ಲಿ ಸುರಕ್ಷಿತವಾಗಿ ಕಾರ್ಯನಿರ್ವಹಿಸುವ ವಿಧಾನಗಳು ಹಾಗೂ ತುರ್ತು ನಿರ್ಗಮನ ಮಾರ್ಗಗಳ ಬಳಕೆಯ ಕುರಿತು ಪ್ರಾಯೋಗಿಕ ಪ್ರದರ್ಶನ ನೀಡಿದರು.

ಆಸ್ಪತ್ರೆಯ ವಿವಿಧ ವಾರ್ಡ್‌ಗಳಿಂದ ರೋಗಿಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವ ಕ್ರಮಗಳು, ಸ್ಟ್ರೆಚರ್ ಬಳಕೆ, ತುರ್ತು ವಾಹನಗಳ ಸಂಚಾರ ವ್ಯವಸ್ಥೆ ಹಾಗೂ ಆಂಬ್ಯುಲೆನ್ಸ್ ಸಮನ್ವಯದ ಕಾರ್ಯಪದ್ಧತಿಯನ್ನು ಕೂಡ ಪ್ರದರ್ಶಿಸಲಾಯಿತು.

ಆರೋಗ್ಯ ಇಲಾಖೆಯ ವೈದ್ಯರು ಹಾಗೂ ಸಿಬ್ಬಂದಿ ಗಾಯಾಳುಗಳಿಗೆ ಪ್ರಾಥಮಿಕ ಚಿಕಿತ್ಸೆ ನೀಡುವ ವಿಧಾನಗಳು, ತುರ್ತು ಚಿಕಿತ್ಸಾ ಘಟಕದ ಸಿದ್ಧತೆ, ರಕ್ತದ ಒತ್ತಡ, ಉಸಿರಾಟ ಹಾಗೂ ಇತರೆ ತುರ್ತು ಆರೋಗ್ಯ ಸೇವೆಗಳ ನಿರ್ವಹಣೆಯ ಕುರಿತು ಮಾಹಿತಿಯನ್ನು ಹಂಚಿಕೊಂಡರು. ತುರ್ತು ಸಂದರ್ಭಗಳಲ್ಲಿ ಆಸ್ಪತ್ರೆಯೊಳಗಿನ ಪ್ರತಿಯೊಂದು ವಿಭಾಗದ ಪಾತ್ರ ಮತ್ತು ಜವಾಬ್ದಾರಿಗಳನ್ನು ಸ್ಪಷ್ಟವಾಗಿ ವಿವರಿಸಲಾಯಿತು.

ಜಿಲ್ಲಾ ಗೃಹರಕ್ಷಕ ದಳದ ಸಿಬ್ಬಂದಿ ಜನಸಂದಣಿ ನಿಯಂತ್ರಣ, ಸುರಕ್ಷಿತ ನಿರ್ಗಮನ ವ್ಯವಸ್ಥೆ, ಸಾರ್ವಜನಿಕರಿಗೆ ಮಾರ್ಗದರ್ಶನ ನೀಡುವುದು ಹಾಗೂ ತುರ್ತು ಸಂದರ್ಭಗಳಲ್ಲಿ ಶಾಂತಿ ಮತ್ತು ಶಿಸ್ತು ಕಾಪಾಡುವ ವಿಧಾನಗಳ ಕುರಿತು ಪ್ರಾತ್ಯಕ್ಷಿಕೆ ನಡೆಸಿದರು. ವಿವಿಧ ಇಲಾಖೆಗಳ ನಡುವೆ ತ್ವರಿತ ಮಾಹಿತಿ ವಿನಿಮಯ ಮತ್ತು ಸಮನ್ವಯದ ಅಗತ್ಯತೆಯನ್ನು ಈ ಅಣುಕು ಪ್ರದರ್ಶನದ ಮೂಲಕ ಪರಿಣಾಮಕಾರಿಯಾಗಿ ತೋರಿಸಲಾಯಿತು.

ಒಂಥಿಇ ಆಡಿಟಟ ಸಂದರ್ಭದಲ್ಲಿ ಸಾರ್ವಜನಿಕರು ಹಾಗೂ ಆಸ್ಪತ್ರೆ ಸಿಬ್ಬಂದಿಗೆ ಅಗ್ನಿ ಅವಘಡಗಳ ಸಂದರ್ಭಗಳಲ್ಲಿ ಗಾಬರಿಗೊಳಗಾಗದೆ ಸಮಾಧಾನದಿಂದ ನಡೆದುಕೊಳ್ಳುವುದು, ಲಿಫ್ಟ್‌ಗಳ ಬದಲಾಗಿ ಮೆಟ್ಟಿಲುಗಳನ್ನು ಬಳಸುವುದು, ತುರ್ತು ನಿರ್ಗಮನ ದ್ವಾರಗಳ ಬಗ್ಗೆ ಪೂರ್ವ ಮಾಹಿತಿ ಹೊಂದಿರುವುದು, ಅಗ್ನಿಶಾಮಕ ಸಾಧನಗಳ ಬಳಕೆಯ ಮೂಲಭೂತ ಅರಿವು ಹೊಂದಿರುವುದು ಹಾಗೂ ತುರ್ತು ಸೇವಾ ಇಲಾಖೆಗಳ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವ ಕುರಿತು ಜಾಗೃತಿ ಮೂಡಿಸಲಾಯಿತು.

ಅಣುಕು ಪ್ರದರ್ಶನವು ಕೇವಲ ತುರ್ತು ಪರಿಸ್ಥಿತಿಗಳನ್ನು ಎದುರಿಸುವ ಅಭ್ಯಾಸವಾಗಿರದೇ, ಸಾರ್ವಜನಿಕರಲ್ಲಿ ವಿಪತ್ತು ಸನ್ನದ್ಧತೆ, ಜಾಗೃತಿ ಹಾಗೂ ಆತ್ಮಸ್ಥೈರ್ಯವನ್ನು ವೃದ್ಧಿಸುವ ಮಹತ್ವದ ಕಾರ್ಯಕ್ರಮವಾಗಿ ಪರಿಣಮಿಸಿತು.ಆಸ್ಪತ್ರೆಯ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಸಂಬಂಧಿತ ಇಲಾಖೆಗಳ ಅಧಿಕಾರಿಗಳು, ವೈದ್ಯರು, ಆರೋಗ್ಯ ಸಿಬ್ಬಂದಿ, ಅಗ್ನಿಶಾಮಕ ಸಿಬ್ಬಂದಿ, ಗೃಹರಕ್ಷಕ ದಳದ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಕೊಡದಾಳ ಗ್ರಾಮದಲ್ಲಿ ರೋಜಗಾರ್ ದಿವಸ್ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ತಾಲ್ಲೂಕಿನ ಇರಕಲ್ಲಗಡಾ ಗ್ರಾಮ ಪಂಚಾಯತಿಯ ವತಿಯಿಂದ ಕೊಡದಾಳ ಗ್ರಾಮದ ವಿಜಯ ಮಹಾಂತಶ್ರೀ ವೇದಿಕೆಯಲ್ಲಿ ಗುರುವಾರದಂದು ಮಹಾತ್ಮ ಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ರೋಜಗಾರ್ ದಿವಸ್ ಆಚರಣೆ ಮಾಡಲಾಯಿತು.

ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಪಂಚಾಯತ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ ಅವರು ಮಾತನಾಡಿ, ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಎಲ್ಲಾ ಕೂಲಿಕಾರರು ಫಾರಂ ನಂ.6 ಸಲ್ಲಿಸುವ ಮೂಲಕ ಕೂಲಿ ಕೆಲಸಕ್ಕೆ ಹಾಜರಾಗಬೇಕು. ಪ್ರತಿ ಮಾನವ ದಿನಕ್ಕೆ 370/– ಕೂಲಿ ನಿಗದಿಪಡಿಸಿದ್ದು ಸಂಪೂರ್ಣವಾಗಿ ಕೂಲಿ ಕೆಲಸ ನಿರ್ವಹಿಸಿ ಪೂರ್ತಿ ಹಣ ಪಡೆಯುವಂತೆ ಕರೆ ನೀಡಿದರು.

ಬಿಸಿಲಿನ ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು ಕೆಲಸ ಜೊತೆಗೆ ಆರೋಗ್ಯ ಕಡೆ ಕಾಳಜಿವಹಿಸಬೇಕು. 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಜಾಬಕಾರ್ಡ ಬಳಕೆ ಮಾಡಿಕೊಂಡು ಕೂಲಿ ಕೆಲಸ ಪಡೆಯಲು ಕಡ್ಡಾಯವಾಗಿ ನಮೂನೆ–6 ಸಲ್ಲಿಸಬೇಕು. ಮೇ ಮತ್ತು ಜೂನ್ ವರೆಗೆ 60 ದಿನಗಳ ಕೂಲಿ ಕೆಲಸ ಪಡೆಯಬೇಕು. ಕೂಲಿ ಹಣದಿಂದ ಮಕ್ಕಳ ಶಾಲಾ, ಕಾಲೇಜು ಶುಲ್ಕ ಭರಿಸಲು, ಮಕ್ಕಳ ಸ್ಪರ್ಧಾತ್ಮಕ ಪರೀಕ್ಷೆಗೆ ಶುಲ್ಕ ಹಾಗೂ ಕುಟುಂಬ ನಿರ್ವಹಣೆಗೆ ಅನುಕೂಲವಾಗುತ್ತದೆ. ಜಾಬಕಾರ್ಡನಲ್ಲಿರುವ ಕುಟುಂಬದ ಎಲ್ಲ ಸದಸ್ಯರು ಇ–ಕೆವೈಸಿ ಹೊಂದಿದ ನಂತರವೇ ಎನ್‌ಎಂಆರ್ ಪ್ರಕಾರ ಕೂಲಿಕಾರರು ಕೂಲಿ ಕೆಲಸಕ್ಕೆ ಹಾಜರಾಗಬೇಕು. 1 & 2ನೇ ಹಾಜರಾತಿ ಕಡ್ಡಾಯವಾಗಿರುತ್ತದೆ ಎಂದರು.



ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ, ಪ್ರತಿ ಜಾಬಕಾರ್ಡಗೆ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತಿದ್ದು ಸದುಪಯೋಗ ಪಡೆಯಬೇಕು. ಗ್ರಾಮೀಣ ಭಾಗದ ಕೂಲಿಕಾರರು ಕೂಲಿ ಅರಸಿ ಗುಳೆ ಹೋಗುವದನ್ನು ನಿಯಂತ್ರಿಸಿ ಸ್ಥಳೀಯವಾಗಿ ಉದ್ಯೋಗ ಒದಗಿಸಿ ಅವರಿಗೆ ಕೂಲಿ ಹಣ ಪಾವತಿಸಿ ಸ್ವಾವಂಬಿ ಜೀವನ ನಡೆಸಲು ಯೋಜನೆಯ ಸದುದ್ದೇಶವಾಗಿದೆ. ಎಲ್ಲಾ ಕೂಲಿಕಾರರು ಸಾಮಾಜಿಕ ಭದ್ರತೆ ವಿಮೆಗಳಾದ ಪಿಎಂಜೆಜೆಬಿವೈ, ಪಿಎಂಎಸ್‌ಬಿವೈ.ಗಳಲ್ಲಿ ನೊಂದಣಿ ಮಾಡಿಕೊಳ್ಳುವಂತೆ ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಕಾಯಕ ಬಂಧುಗಳ ಮೂಲಕ ಒಟ್ಟು 121 ಕೂಲಿಕಾರರ ಫಾರಂ ನಂ.6 ಸ್ವೀಕರಿಸಲಾಯಿತು.

ಗ್ರಾಮ ಪಂಚಾಯತಿ ಡಿಇಒ ಶರಣಪ್ಪ, ಸಿಬ್ಬಂದಿ ಸಿದ್ರಾಮಯ್ಯಸ್ವಾಮಿ, ಗ್ರಾಮ ಕಾಯಕ ಮಿತ್ರ ಶ್ರೀದೇವಿ, ಕಾಯಕ ಬಂಧುಗಳಾದ ಹನಮಂತಪ್ಪ, ಮರಿಯಪ್ಪ, ಕಿರಣ್ ಕೂಲಿಕಾರರು ಉಪಸ್ಥಿತರಿದ್ದರು.

# ಗೀತಾ ಸೇವಿ ಸಂಸ್ಕಾರ ಮತ್ತು ವೆಲ್ಫೇರ್ ಟ್ರಸ್ಟ ನಿಂದ ಉಚಿತ ಮಿನರಲ್ ವಾಟರ್ ವಿತರಣೆ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ.8: ನಗರದಲ್ಲಿ ಹೆಚ್ಚುತ್ತಿರುವ ಬಿಸಿಲಿನ ತಾಪದಿಂದ ತತ್ತರಿಸುತ್ತಿರುವ ಜನಸಾಮಾನ್ಯರಿಗೆ ನೆರವಾಗಲು ಗೀತಾ ಸೇವಿ ಸಂಸ್ಕಾರ ಮತ್ತು ವೆಲ್ಫೇರ್ ಟ್ರಸ್ಟ್ ವತಿಯಿಂದ ನಗರದ ಪ್ರಮುಖ ಸ್ಥಳಗಳಲ್ಲಿ ಉಚಿತ ಶುದ್ಧ ಕುಡಿಯುವ ನೀರಿನ ಅರವಟ್ಟಿಗೆಗಳನ್ನು (ಮಿಥಇ) ಇಂದು ಯಶಸ್ವಿಯಾಗಿ ಅಳವಡಿಸಲಾಯಿತು.

ಟ್ರಸ್ಟ್ನ ಈ ಮೊದಲ ಬೃಹತ್ ಸಮಾಜಮುಖಿ ಯೋಜನೆಯು ಇಂದು ಅಧಿಕೃತವಾಗಿ ಚಾಲನೆಗೊಂಡಿತು. ಪ್ರಮುಖವಾಗಿ ಹಳೇ ಬಸ್ ನಿಲ್ದಾಣದ ಎದುರು ಹಾಗೂ ಗುಗ್ಗಿಹಟ್ಟಿ ಮುಂತಾದ ಜನನಿಬಿಡ ಪ್ರದೇಶಗಳಲ್ಲಿ ಈ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು, ಬಾಯಾರಿದ ಹಾದಿಹೋಕರಿಗೆ ಹಾಗೂ ಕಾರ್ಮಿಕರಿಗೆ ಇದು ಆಸರೆಯಾಗಿದೆ.

ಈ ಸಂದರ್ಭದಲ್ಲಿ ಟ್ರಸ್ಟ್ನ ಶ್ರೀ ಶ್ರೀನಿವಾಸ ದೇವಳೆ ಮತ್ತು ಶ್ರೀ ಜಡೆಪ್ಪ ನವರು ಮಾತನಾಡಿ , "ಸೇವೆಯೇ ಪರಮ ಧರ್ಮ ಎಂಬ ಧ್ಯೇಯದೊಂದಿಗೆ ನಮ್ಮ ಟ್ರಸ್ಟ್ ಈ ಕಾರ್ಯಕ್ಕೆ ಮುಂದಾಗಿದೆ. ಈ ಬೇಸಿಗೆ ಮುಗಿಯುವವರೆಗೂ ಅಂದರೆ ಮೇ 25 ರವರೆಗೆ ಪ್ರತಿದಿನ ಈ ಶುದ್ಧ ನೀರಿನ ವಿತರಣೆ ನಿರಂತರವಾಗಿ ನಡೆಯಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು," ಎಂದು ತಿಳಿಸಿದರು.

ನೀರು ವಿತರಿಸುವ ಸ್ಥಳಗಳು–ಹಳೇ ಬಸ್ ನಿಲ್ದಾಣದ ಎದುರು, ಗುಗ್ಗಿರಹಟ್ಟಿ ಮತ್ತು ನಗರದ ಇತರೆ ಪ್ರಮುಖ ಕೇಂದ್ರಗಳು. ಹಾಗೂ ಇಂದಿನಿಂದ ಆರಂಭಗೊಂಡು ಮೇ 25 ರವರೆಗೆ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದ್ದಾರೆ..




# ಓದಿನ ಜೊತೆಗೆ ಸೇವಾ ಮನೋಭಾವ ಬೆಳೆಸಿಕೊಳ್ಳಿ




• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

8– ನಗರದ ವಿದ್ಯಾಪ್ರಸಾರಕ ಮಂಡಳದ ಎಸ್.ಆರ್. ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಯುವ ರೆಡ್‌ಕ್ರಾಸ್ ಘಟಕ ಮತ್ತು ಇತಿಹಾಸ ಹಾಗೂ ಪ್ರಾಚ್ಯಶಾಸ್ತ್ರ ಸ್ನಾತಕೋತ್ತರ ವಿಭಾಗದ ಆಶ್ರಯದಲ್ಲಿ ರೆಡ್‌ಕ್ರಾಸ್ ಪಿತಾಮಹ ಜೀನ್ ಹೆನ್ರಿ ಡುನಾಂಟ್‌ರ ಜನ್ಮದಿನದ ಅಂಗವಾಗಿ ವಿಶ್ವ ರೆಡ್‌ಕ್ರಾಸ್ ದಿನವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ವಿದ್ಯಾರ್ಥಿಗಳು ತಮ್ಮ ಅಧ್ಯಯನದ ಜೊತೆಗೆ ಸೇವಾ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ಈ ದಿಶೆಯಲ್ಲಿ ಶಿಕ್ಷಕರು ಅವರಿಗೆ ಪ್ರೇರಣೆ ನೀಡಬೇಕು. ನಿಸ್ವಾರ್ಥ ಸೇವೆಯಿಂದ ಮಾನಸಿಕ ನೆಮ್ಮದಿ ಸಾಧ್ಯ ಎಂಬ ಅಂಶವನ್ನು ಅವರಿಗೆ ಮನವರಿಕೆ ಮಾಡಿಕೊಡಬೇಕು. ಇದನ್ನು ಡುನಾಂಟ್ ಸಹಿತ ಹಲವರಲ್ಲಿ ಕಾಣಬಹುದಾಗಿದೆ. ಯುವಕರೇ ದೇಶದ ಆಶಾಕಿರಣವಾಗಿರುವಾಗ ಅವರಲ್ಲಿ ಇದನ್ನು ಬೆಳೆಸಬೇಕಿದೆ. ಸಮಾಜಕ್ಕೆ ಉಪಯುಕ್ತವಾಗಬಲ್ಲ ನಾಗರಿಕರನ್ನಾಗಿ ಅವರನ್ನು ರೂಪಿಸಬೇಕಿದೆ ಎಂದರು.

ಸಂಯೋಜಕ ಎಂ.ಡಿ.ಕೋರವಾರ ವಂದಿಸಿದರು. ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಇದ್ದರು.

# ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಸಾರ್ವಜನಿಕರಲ್ಲಿ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯ ಕುಷ್ಟಗಿ ಪಟ್ಟಣದ ನಿವಾಸಿ 40 ವರ್ಷದ ವಿಜಯ ಕುಮಾರ ತಂದೆ ಸಿದ್ದರಾಮಪ್ಪ ಸೂಡಿ ಎಂಬ ವ್ಯಕ್ತಿಯು ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಲು ಕುಷ್ಟಗಿಯ ಪೊಲೀಸ್ ಠಾಣಾಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದಾರೆ.



?ವಿಜಯ ಕುಮಾರ ಎಂಬ ವ್ಯಕ್ತಿಯು 2026ರ ಏಪ್ರಿಲ್ 11 ರಂದು ಬೆಳಿಗ್ಗೆ 8 ಗಂಟೆಗೆ ಸುಮಾರಿಗೆ ಮನೆಯಲ್ಲಿ ಯಾರಿಗೂ ಹೇಳದೆ ಮನೆ ಬಿಟ್ಟು ಹೋಗಿದ್ದು, ಕುಷ್ಟಗಿ ಪಟ್ಟಣದ ಬಸ್ ನಿಲ್ದಾಣ, ಬಸವೇಶ್ವರ ವೃತ್ತ ಇತರೆ ಕಡೆ ಹುಡುಕಾಡಿ ಎಲ್ಲಿಯೂ ಸಿಕ್ಕಿರುವುದಿಲ್ಲ ಎಂದು ಕಾಣೆಯಾದ ವ್ಯಕ್ತಿಯ ಸಹೋದರ ಕುಷ್ಟಗಿ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಠಾಣಾ ಗುನ್ನೆ ನಂ.92/2026 ಕಲಂ: 00ಎಂಪಿಬಿಎನ್‌ಎಸ್–2023 ಅಡಿಯಲ್ಲಿ ಮನುಷ್ಯ ಕಾಣೆ ರೀತ್ಯಾ ಪ್ರಕರಣ ದಾಖಲಾಗಿದೆ.

ವ್ಯಕ್ತಿ ಚಹರೆ ಪಟ್ಟಿ: ವಿಜಯ ಕುಮಾರ ತಂದೆ ಸಿದ್ದರಾಮಪ್ಪ ಸೂಡಿ, ವಯಸ್ಸು 40 ವರ್ಷ, 5.2 ಅಡಿ ಎತ್ತರ, ಕೆಂಪು ಮೈ ಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ, ಉಂಗುರು ಕೂದಲು ಹೊಂದಿದ್ದು, ಮನೆಯಿಂದ ಹೊರಡುವಾಗ ಪಿಂಕ್ ಟಿ ಶರ್ಟ್, ಗ್ರೇ ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ. ಈ ವ್ಯಕ್ತಿಯು ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.

ಈ ವ್ಯಕ್ತಿ ಯಾರಿಗಾದರು ಕಂಡುಬಂದಲ್ಲಿ ಅಥವಾ ಇತನ ಬಗ್ಗೆ ಮಾಹಿತಿ ದೊರೆತಲ್ಲಿ ಕೊಪ್ಪಳ ಜಿಲ್ಲಾ ಪೊಲೀಸ್ ಅಧೀಕ್ಷಕರ ದೂರವಾಣಿ ಸಂಖ್ಯೆ: 08539–230111, ಗಂಗಾವತಿ ಡಿ.ಎಸ್.ಪಿ. ಮೊ.ಸಂ: 9480803721 ಹಾಗೂ ಕುಷ್ಟಗಿ ಸಿ.ಪಿ.ಐ. ಮೊ.ಸಂ: 9480803732 ಮತ್ತು ಕುಷ್ಟಗಿ ಪಿ.ಎಸ್.ಐ ಮೊ.ಸಂ: 9480803757 ಗೆ ಅಥವಾ ಕುಷ್ಟಗಿ ಪೊಲೀಸ್ ಠಾಣೆಗೆ ಮತ್ತು ಕೊಪ್ಪಳ ನಿಯಂತ್ರಣ ಕೊಠಡಿಗಾಗಲಿ ಮಾಹಿತಿ ನೀಡುವಂತೆ ಕುಷ್ಟಗಿ ಪೊಲೀಸ್ ಠಾಣೆಯ ಪ್ರಕಟಣೆ ತಿಳಿಸಿದೆ.

# ಶಾಲಾ ಡೊನೇಷನ್ ದಂಧೆ ವಿರುದ್ಧ ಕರವೇ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಮೇ.8:ಜಿಲ್ಲೆಯಲ್ಲಿ ಹೊಸ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಆರಂಭವಾಗುತ್ತಿದ್ದಂತೆಯೇ ಖಾಸಗಿ ಶಾಲೆಗಳ ಡೊನೇಷನ್ ಮತ್ತು ಅಭಿವೃದ್ಧಿ ಶುಲ್ಕದ ಹೆಸರಿನ ಸುಲಿಗೆ ಮಿತಿಮೀರಿದ್ದು, ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಹೋರಾಟ ನಡೆಸುವುದಾಗಿ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಆನಂದ್ ಎಸ್. ದೊಡ್ಡಮನಿ ಎಚ್ಚರಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಮಾತನಾಡಿದ ಅವರು, ಕರ್ನಾಟಕ ಶಿಕ್ಷಣ ಕಾಯ್ದೆ–1983ರ ಪ್ರಕಾರ ಸರ್ಕಾರ ನಿಗದಿಪಡಿಸಿದ ಶುಲ್ಕಕ್ಕಿಂತ ಹೆಚ್ಚುವರಿ ಹಣ ವಸೂಲಿ ಮಾಡುವಂತಿಲ್ಲ. ಆದರೂ ಜಿಲ್ಲೆಯ ಹಲವು ಖಾಸಗಿ ಶಾಲೆಗಳು ಅಭಿವೃದ್ಧಿ ಶುಲ್ಕದ ಹೆಸರಿನಲ್ಲಿ ಲಕ್ಷಾಂತರ ರೂಪಾಯಿ ದೇಣಿಗೆ ಪಡೆಯುತ್ತಿವೆ ಎಂದು ಆರೋಪಿಸಿದರು.

ಇದರಿಂದ ಬಡ, ರೈತ ಹಾಗೂ ಕೂಲಿ ಕಾರ್ಮಿಕರ ಮಕ್ಕಳಿಗೆ ಉತ್ತಮ ಶಿಕ್ಷಣ ಕೈಗೆಟುಕದಂತಾಗಿದ್ದು, ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆ ಉಂಟಾಗುತ್ತಿದೆ. ಅಲ್ಲದೆ, ಪಡೆಯುವ ದೇಣಿಗೆಗೆ ಯಾವುದೇ ಅಧಿಕೃತ ರಸೀದಿ ನೀಡದೆ ಕಪ್ಪು ಹಣದ ವ್ಯವಹಾರ ನಡೆಯುತ್ತಿರುವುದು ಗಂಭೀರ ವಿಚಾರ ಎಂದು ದೂರಿದರು.

ಈ ಹಿನ್ನೆಲೆಯಲ್ಲಿ ಆದಾಯ ತೆರಿಗೆ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಜಂಟಿಯಾಗಿ ಶಾಲೆಗಳ ಬ್ಯಾಂಕ್ ಖಾತೆ ಪರಿಶೀಲನೆ ನಡೆಸಬೇಕು, ಪ್ರತಿ ಶಾಲೆಯ ಮುಂದೆ ದೂರು ಪೆಟ್ಟಿಗೆ ಅಳವಡಿಸಬೇಕು ಹಾಗೂ ಶಾಲೆಗಳ ಅಧಿಕೃತ ಶುಲ್ಕವನ್ನು ಸಾರ್ವಜನಿಕವಾಗಿ ಪ್ರಕಟಿಸಬೇಕು ಎಂದು ಆಗ್ರಹಿಸಿದರು.

ಒಂದು ವಾರದೊಳಗೆ ಜಿಲ್ಲಾಡಳಿತ ಮತ್ತು ಶಿಕ್ಷಣ ಇಲಾಖೆ ಕ್ರಮ ಕೈಗೊಳ್ಳದಿದ್ದರೆ ಜಿಲ್ಲೆಯಾದ್ಯಂತ ಶಾಲೆಗಳ ಎದುರು ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಎದುರು ಪ್ರತಿಭಟನೆ ನಡೆಸಿ ಬೀಗ ಜಡಿಯುವ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದಾರೆ.

## ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವ: ಮೇ 10 ರಿಂದ ಮದ್ಯ ಮಾರಾಟ ನಿಷೇಧ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ 2026ರ ಜಾತ್ರಾ ಮಹೋತ್ಸವದ ಪ್ರಯುಕ್ತ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮೇ 10ರ ಸಂಜೆ 6 ಗಂಟೆಯಿಂದ ಮೇ 12ರ ಬೆಳಿಗ್ಗೆ 6 ಗಂಟೆಯವರೆಗೆ ಹುಲಿಗಿ ಹಾಗೂ ಹುಲಿಗಿ ಗ್ರಾಮದ ಸುತ್ತಲಿನ 5 ಕಿ.ಮೀ ವ್ಯಾಪ್ತಿಯವರೆಗೆ ಕರ್ನಾಟಕ ಅಬಕಾರಿ ಕಾಯ್ದೆ–1965 ರ ಕಲಂ 21 ರನ್ವಯ ಮದ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.ಈ ವಿಷಯವಾಗಿ ಅಬಕಾರಿ ಉಪ ಆಯುಕ್ತರ ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಿ, ಅದರಲ್ಲಿ ಆರಕ್ಷಕರ ವೃತ್ತ ನಿರೀಕ್ಷಕರು ಹಾಗೂ ಅಬಕಾರಿ ವೃತ್ತ ನಿರೀಕ್ಷಕರು ಕಾರ್ಯನಿರ್ವಹಿಸಲು ಆದೇಶಿಸಿದೆ. ಈ ಆದೇಶವನ್ನು ಅನುಷ್ಠಾನಗೊಳಿಸುವಲ್ಲಿ ನಿರ್ಲಕ್ಷತನ ತೋರಿದವರ ವಿರುದ್ಧ ಕಾನೂನು ರೀತಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಅರ್ಜಿ ಅಹ್ವಾನ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ 2026–27ನೇ ಸಾಲಿನಲ್ಲಿ ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಜೈನ್, ಸಿಖ್ಖ್, ಪಾರ್ಸಿ ವಿಧ್ಯಾರ್ಥಿಗಳಿಂದ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 30 ಕೊನೆಯ ದಿನವಾಗಿದೆ.ಪ್ರಸ್ತುತ ಸಾಲಿನ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಿಇಟಿ, ನೀಟ್‌ನಲ್ಲಿ ಆಯ್ಕೆಯಾಗಿರುವ ವೈಧ್ಯಕೀಯ ಎಂ.ಬಿ.ಬಿ.ಎಸ್ ಮತ್ತು ದಂತವೈಧ್ಯಕೀಯ ಬಿ.ಇ, ಬಿ.ಟೆಕ್, ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್, ಬಿ.ಆಯುಷ್ ಫಾರ್ಮಸಿ, ಕೃಷಿ ವಿಜ್ಞಾನ ಮತ್ತು ಪಶು ವೈಧ್ಯಕೀಯ ಇಂತಹ ಕೋರ್ಸಗಳಿಗೆ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಇಲಾಖೆ ಜಾಲತಾಣ kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಿದಬಹುದು.

# ಬಿಟಿಡಿಎ ಆಡಳಿತಕ್ಕೆ ಹೊಸ ರೂಪ: ಪ್ರಕಾಶ ತಪಶೆಟ್ಟಿ





• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಆಡಳಿತಕ್ಕೆ ಹೊಸ ರೂಪ ನೀಡುವ ಮೂಲಕ ಜನಪರ ಹಾಗೂ ಪಾದರ್ಶಕ ಆಡಳಿತಕ್ಕೆ ಆದ್ಯತೆ ನೀಡಲಾಗುವುದೆಂದು ಬಿಟಿಡಿಎ ನೂತನ ಅಧ್ಯಕ್ಷ ಪ್ರಕಾಶ ತಪಶೆಟ್ಟಿ ಹೇಳಿದರು.

ಬಿಟಿಡಿಎ ಕಚೇರಿಯಲ್ಲಿ ಶುಕ್ರವಾರ ಬಿಟಿಡಿಎ ನೂತನ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ನಂತರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು ಸಂಸ್ಥೆಯ ಅಭಿವೃದ್ಧಿ, ಸಾರ್ವಜನಿಕರ, ಸಂತ್ರಸ್ತರ ಸಮಸ್ಯೆಗಳಿಗೆ ಶೀಘ್ರ ಪರಿಹಾರ, ಮೂಲಭೂತ ಸೌಲಭ್ಯಗಳ ವೃದ್ದಿ ಹಾಗೂ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದೆಂದು ತಿಳಿಸಿದರು.

ಮುಳುಗಡೆ ಸಂತ್ರಸ್ಥರಿಗೆ ಪುನರ್ವಸತಿ ಹಾಗೂ ಪುನರ್ ನಿರ್ಮಾಣದ ಕೆಲಸ ಸಮರ್ಪಕವಾಗಿ ಆಗಬೇಕಿದೆ. ಸಾರ್ವಜನಿಕರು, ಸಂತ್ರಸ್ತರು ಪದೇ ಪದೇ ಕಚೇರಿಗೆ ಬರುದನ್ನು ತಪ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಜಾಗೃತಿಯಿಂದ, ಸುರಕ್ಷತೆಯಿಂದ ಸಾರ್ವಜನಿಕರ ತೊಂದರೆ ಹಾಗೂ ಬೇಡಿಕೆಗಳಿಗೆ ಸ್ಪಂದಿಸಿ, ಪಾರದರ್ಶಕವಾಗಿ ಕೆಲಸ ಕಾರ್ಯಗಳು ಆಗುವ ರೀತಿಯಲ್ಲಿ ಆಡಳಿತದಲ್ಲಿ ಸುಧಾರಣೆ ತರುವ ಕೆಲಸ ಮಾಡಲಾಗುತ್ತದೆ ಎಂದು ತಿಳಿಸಿದರು.

ಸರಕಾರದ ಆಶಯಗಳಿಗೆ ಅನುಗುಣವಾಗಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದು ಅಭಿವೃದ್ದಿಯ ಕಾಮಗಾರಿಗಳಲ್ಲಿ ಹೊಸ ಚೈತನ್ಯ ಮೂಡಿಸಲಾಗುವುದು. ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿದರೆ ಉತ್ತಮ ಆಡಳಿತ ನೀಡಲು ಸಾಧ್ಯವಾಗುತ್ತದೆ. ಸಾರ್ವಜನಿಕರ, ಸಂತ್ರಸ್ತರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡುವುದರ ಜೊತೆಗೆ ಪದೇ ಪದೇ ಅಲೆದಾಡುವದನ್ನು ತಪ್ಪಿಸುವ ಕೆಲಸ ಮಾಡಲಾವುದೆಂದು ತಿಳಿಸಿದ ಅವರು ಜನರಿಗೆ ಗುಣಮಟ್ಟದ ಸೇವೆ ಒದಗಿಸುವುದು ನಮ್ಮ ಮುಖ್ಯ ಗುರಿಯಾಗಿದೆ ಎಂದರು.

ಬಿಟಿಡಿಎ ಆಡಳಿತವನ್ನು ಇನ್ನಷ್ಟು ಜನಸ್ನೇಹಿ, ಪಾರದರ್ಶಕ ಹಾಗೂ ಅಭಿವೃದ್ಧಿ ಮುಖಿಯಾಗಿ ರೂಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಾಗುವುದು. ಸಂತ್ರಸ್ತರಿಗೆ ನಿವೇಶನಗಳ ಹಂಚಿಕೆ, ತಾಂತ್ರಿಕ ದೋಷಗಳು ಸೇರಿದಂತೆ ಒಟ್ಟಾರೆಯಾಗಿ ಸಂತ್ರಸ್ತರಿಗೆ ಅನುಕೂಲವಾಗುವ ರೀತಿಯಲ್ಲಿ ಎಲ್ಲ ರೀತಿಯ ಕೆಲಸ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತದೆ. ಯಾವ ಮಧ್ಯವರ್ತಿಗಳ ಹಸ್ತಕ್ಷೇಪ ಆಗದಂತೆ ನೋಡಿಕೊಳ್ಳಲಾಗುವುದು. ಈ ಕಾರ್ಯಕ್ಕೆ ಸಾರ್ವಜನಿಕರ, ಅಧಿಕಾರಿಗಳ ಸಹಕಾರ ಅಗತ್ಯವಾಗಿ ಬೇಕಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಶಾಸಕ ಉಮೇಶ ಮೇಟಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಮುಖ್ಯ ಇಂಜಿನೀಯರ್ ಚಂದ್ರಹಾಸ ಬಂಡಿ, ಕಾರ್ಯನಿರ್ವಾಹಕ ಅಭಿಯಂತರ ವಾಯ್.ಬಿ.ಪಾತ್ರೋಟ, ಪುನರ್ವಸತಿ ಅಧಿಕಾರಿ ಪ್ರಶಾಂತ ಬಾರಿಗಿಡದ ಸೇರಿದಂತೆ ಇತರರು ಉಪಸ್ಥಿತರಿದ್ದರು.

## 19 ರಂದು ಹೊನ್ನೆಬೈಲ್ ಬಂಡಿಹಬ್ಬ



**ಅಂಕೋಲಾ:** ಮೇ 19 ರಂದು ಹೊನ್ನೆಬೈಲ್ ಗ್ರಾಮದೇವವಾರ ಶ್ರೀ ಬೊಮ್ಮಯ್ಯ, ಮಾಣಿಬೀರ, ಕುಸ್ಲೆ ದೇವರ ಬಂಡಿಹಬ್ಬ ಸಡಗರ–ಸಂಭ್ರಮದಿಂದ ನಡೆಯಲಿದೆ. ಹಬ್ಬದ ನಿಮಿತ್ತವಾಗಿ 3 ದೇವರ ಕಳಸ ಏಳಲಿದೆ. ವಿವಿಧ ಭಾಗಗಳಿಂದ ಸಾವಿರಾರು ಭಕ್ತರು ಆಗಮಿಸಿ ತಮ್ಮ ಹರಕೆಯನ್ನು ಸಲ್ಲಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವಂತೆ ಹೊನ್ನೆಬೈಲ್ ಟೆಂಪಲ್ ಟ್ರಸ್ಟ್ ಅಧ್ಯಕ್ಷ ಹನುಮಂತ ಬೊಮ್ಮು ಗೌಡ, ಅರ್ಚಕರಾದ ಗುಣವಂತ ಗುನಗಾ, ಗಣಪತಿ ಗುನಗಾ, ವಿಠ್ಠಲ ಗುನಗಾ ವಿನಂತಿಸಿದ್ದಾರೆ.

## ಕಾರ್ಯಾಗಾರಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಸಂಗಪ್ಪ



**ಬಾಗಲಕೋಟೆ:** ರಾಜ್ಯ ಹವಾಮಾನ ಬದಲಾವಣೆ ಕ್ರೀಯಾ ಯೋಜನೆ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಹಮ್ಮಿಕೊಂಡ ಒಂದು ದಿನದ ತರಬೇತಿಗೆ ಜಿಲ್ಲಾಧಿಕಾರಿ ಸಂಗಪ್ಪ ಶುಕ್ರವಾರ ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ ಹಳೆಯ ಸಭಾಭವನದಲ್ಲಿ ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಹಾಗೂ ಜಿಲ್ಲಾ ಪಂಚಾಯತ ಸಹಯೋಗದಲ್ಲಿ ಹಮ್ಮಿಕೊಂಡ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಹವಾಮಾನ ಬದಲಾವಣೆಯ ಪ್ರತಿಕೂಲ ಪರಿಣಾಮಗಳು ಹಾಗೂ ಜಿಲ್ಲಾ ನೈಸರ್ಗಿಕ ಸಂಪನ್ಮೂಲಗಳನ್ನು ಉಪಯೋಗಿಸಿಕೊಂಡು ಇಲಾಖೆಗಳು ಹೇಗೆ ಚುರುಕಾಗಿ ಕಾರ್ಯವಹಿಸಬಹುದು ಎಂಬುದನ್ನು ತಿಳಿದುಕೊಳ್ಳಬೇಕು. ಈ ತರಬೇತಿಯ ಪೂರ್ಣ ಸದುಪಯೋಗ ಪಡೆದುಕೊಳ್ಳಲು ತಿಳಿಸಿದರು.

ಈ ಯೋಜನೆಯಡಿಯಲ್ಲಿ ಹವಾಮಾನ ಬದಲಾವಣೆಯ ಕುರಿತ ಕಾರ್ಯ ಅಂಶಗಳನ್ನು ಆಧರಿಸಿ, ವಿವಿಧ ಇಲಾಖೆಗಳು 2025–2030ರ ಅವಧಿಗೆ ಪ್ರಮುಖ ಕಾರ್ಯಕ್ಷಮತಾ ಸೂಚಕಗಳನ್ನು ಗುರಿಗಳೊಂದಿಗೆ ನಿಗದಿಪಡಿಸಿವೆ. ಈ ಸೂಚಕಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರೆ ಪಾಲುದಾರ ಸಂಸ್ಥೆಗಳ ಸಾಮರ್ಥ್ಯ ವೃದ್ಧಿ ಅತ್ಯವಶ್ಯಕವಾಗಿದೆ. ಈ ಹಿನ್ನಲೆಯಲ್ಲಿ, ಎಂಪ್ರಿ ಸಂಸ್ಥೆಯು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಸಹಯೋಗದೊಂದಿಗೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಇದರ ಸದುಪಯೋಗವನ್ನು ಅಧಿಕಾರಿಗಳು ಪಡೆದುಕೊಳ್ಳಲು ತಿಳಿಸಿದರು.

ಡಾ.ಪವಿತ್ರಾ ಪಿ. ನಾಯಕ್ ಅವರು ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕ್ರಿಯಾ ಯೋಜನೆ ಕುರಿತು ಸವಿಸ್ತಾರವಾಗಿ ವಿವರಣೆ ನೀಡಿದರು. ಕಾರ್ಯನೀತಿ, ಕಾರ್ಯತಂತ್ರಗಳು, ವಿವಿಧ ಇಲಾಖೆಗಳ ಪಾತ್ರ ಹಾಗೂ ಅಲ್ಪಾವಧಿಯ ಹವಾಮಾನ ಮಾಲಿನ್ಯಕಾರಕಗಳ ಪರಿಣಾಮಗಳು ಮತ್ತು ಜಿಲ್ಲಾಸ್ಥರದ ದತ್ತಾಂಶಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಜಲ ಸಂಪನ್ಮೂಲ ವಲಯಕ್ಕೆ ಸಂಬಂಧಿಸಿದ ಹವಾಮಾನ ಕ್ರಿಯಾ ಯೋಜನೆ ಕುರಿತು ಜಲ ಸಂಪನ್ಮೂಲ ತಜ್ಞರು ಡಾ. ಶಶಿಕುಮಾರ್ ಎನ್ ರವರು ಸಂಕ್ಷಿಪ್ತವಾಗಿ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ್ ತೇಲಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಸಂಪನ್ಮೂಲ ವ್ಯಕ್ತಿಗಳಾಗಿ ಎಂಪ್ರಿ ಸಂಸ್ಥೆಯ ಸಂಶೋಧನಾ ವಿಜ್ಞಾನಿಗಳಾದ ಡಾ. ಪವಿತ್ರಾ ಪಿ. ನಾಯಕ್, ಜಲ ಸಂಪನ್ಮೂಲ ತಜ್ಞರು ಡಾ.ಶಶಿಕುಮಾರ್, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಎನ್ ಎನ್. ಆರ್.ಡಿ.ಎಂ.ಎಸ್ ಅಧಿಕಾರಿ ಚಂದ್ರಶೇಖರ್ ಗುಂಡ್ ಉಪಸ್ಥಿತರಿದ್ದರು. ತರಬೇತಿ ಕಾರ್ಯಕ್ರಮದಲ್ಲಿ 46 ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಶಿಕ್ಷಣ ಸಂಸ್ಥೆಗಳ ಸದಸ್ಯರು ಹಾಗೂ ಇತರೆ ಪಾಲುದಾರರು ಪಾಲ್ಗೊಂಡಿದ್ದರು.

## ಕನ್ನಡ ಸಂಸ್ಥಾಪನಾ ದಿನಾಚರಣೆ



**ಬಸವಕಲ್ಯಾಣ:** ನಾಡಿನಾದ್ಯಂತ ಸಾಹಿತ್ಯ ಸಮ್ಮೇಳನಗಳನ್ನು ಆಯೋಜಿಸುವುದರ ಮೂಲಕ ನಾಡಿನ ಮೂಲ ಮೂಲೆಗೆ ಕನ್ನಡ ಸಾಹಿತ್ಯವನ್ನು ಹಬ್ಬಿಸುವ ಮಹಾತ್ಕಾರ್ಯ ಕನ್ನಡ ಸಾಹಿತ್ಯ ಪರಿಷತ್ತು ಮಾಡುತ್ತಿದೆ ಎಂದು ರಾಜಕುಮಾರ ಮೇಕರೆ ಹೇಳಿದರು.

ಹುಲಸೂರ ತಾಲೂಕಿನ ಬೇಲೂರು ಗ್ರಾಮದಲ್ಲಿರುವ ಪ್ರಸಿದ್ಧ ಜ್ಞಾನಗಂಗಾ ತರಬೇತಿ ಕೇಂದ್ರದಲ್ಲಿ ಆಯೋಜಿಸಿದ ಕನ್ನಡ ಸಂಸ್ಥಾಪನಾ ದಿನಾಚರಣೆಯ ಉಪನ್ಯಾಸದಲ್ಲಿ ಮೈಸೂರಿನ ಒಡೆಯರಾದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕನ್ನಡ ಸಾಹಿತ್ಯ ಪರಿಷತ್ತು 1915 ಮೇ 05 ರಂದು ಸ್ಥಾಪನೆಗೆ ಚಾಲನೆ ನೀಡಿದರು. ಕನ್ನಡ ಪುಸ್ತಕಗಳ ಪ್ರಕಟಣೆ, ಕನ್ನಡ ನಾಡ ನುಡಿಯ ಸಂರಕ್ಷಣೆ ಹಾಗೂ ಕನ್ನಡ ನಾಡ ನುಡಿಗೆ ಸಮಸ್ಯೆ ಎದುರಾದಾಗ ಕನ್ನಡ ಸಾಹಿತ್ಯ ಪರಿಷತ್ತು ಸದಾ ಕನ್ನಡಿಗರ ಧ್ವನಿಯಾಗಿ ನಿಂತಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷರಾದ ಜಗನ್ನಾಥ ಢಗೆ ಯವರು ಕನ್ನಡ ಭುವನೇಶ್ವರಿ ಮಾತೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿ, ನಾನೊಬ್ಬ ಕನ್ನಡಿಗ ಎಂಬ ಹೆಮ್ಮೆ ನಮಗಿರಬೇಕು ಹಾಗೂ ಕನ್ನಡ ಭಾಷೆ ಉಳಿಸಿ, ಬೆಳೆಸುವ ಗುರುತ್ತರವಾದ ಜವಾಬ್ದಾರಿ ನಮ್ಮದಾಗಿದೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಗರಾಜ ಹಾವಣ್ಣಾ ಮಾತನಾಡಿ, ಕನ್ನಡವೆಂದರೆ ಕೇವಲ ಭಾಷೆಯಲ್ಲ, ಅದು ನಮ್ಮ ಉಸಿರು. ಆ ಉಸಿರನ್ನು ಕಾಪಾಡುವ ಕೆಲಸವನ್ನು ಕನ್ನಡ ಸಾಹಿತ್ಯ ಪರಿಷತ್ತು ಕಳೆದ ಒಂದು ಶತಮಾನಕ್ಕೂ ಹೆಚ್ಚು ಕಾಲದಿಂದ ಮಾಡುತ್ತಾ ಬಂದಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ 2025–26ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯ ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕ ಗಳಸಿದ ಬೇಲೂರಿನ ಸರ್ಕಾರಿ ಪ್ರೌಢ ಶಾಲೆಯ ವಿಧ್ಯಾರ್ಥಿನಿಯರಾದ ಶಿಲ್ಪಾ ನಾಗನಾಥ ಮತ್ತು ಸುಪ್ರೀಯಾ ವಿಠ್ಠಲ ರವರನ್ನು ಹಾಗೂ ಜ್ಞಾನಗಂಗಾ ತರಬೇತಿ ಕೇಂದ್ರದ ಸಂಸ್ಥಾಪಕರಾದ ಪರಮೇಶ್ವರ ಅಂತಪ್ಪ, ಶಿಕ್ಷಕರಾದ ಓಂಕಾರ ಮೂಲಗೆ, ಆನಂದ ಬಿದ್ದಾನೆ, ಮಲ್ಲಮ್ಮ ಹಲಿಂಗೆ ರವರನ್ನು ಗೌರವಿಸಿ ಸನ್ಮಾನಿಸಲಾಯಿತು.

## ತಹಶೀಲ್ದಾರರ ಮೂಲಕ ಸಿಎಂಗೆ ಮನವಿ




• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಗಂಗಾವತಿಯ ಶ್ರೀ ಕೃಷ್ಣದೇವರಾಯ ವೃತ್ತದಲ್ಲಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ನೇತೃತ್ವದಲ್ಲಿ ಪ್ರತಿಭಟನೆ ಮಾಡಿ ತಹಶೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು. ತಹಶೀಲ್ದಾರರ ಪರವಾಗಿ ಉಪ ತಹಶೀಲ್ದಾರರಾದ ಮಾಂತಗೌಡ ರವರು ಮನವಿ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಪ್ರತಿಭಟನೆಯನ್ನು ಉದ್ದೇಶಿಸಿ ಮುಖಂಡರಾದ ಶರಣು ಪಾಟೀಲ್ ಮಾತನಾಡಿ, 56,432 ಹುದ್ದೆಗಳಿಗೆ ಕೂಡಲೇ ಅಧಿಸೂಚನೆ ಹೊರಡಿಸಿ ಹಾಗೂ ಕೆ.ಪಿ.ಎಸ್.ಸಿ. ಸ್ವಚ್ಛಗೊಳಿಸಲು ಪಿ.ಸಿ. ಹೋಟಾ ಸಮಿತಿ ವರದಿ ಜಾರಿಗೊಳಿಸಿ ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಅಭ್ಯರ್ಥಿಗಳಾದ ಗ್ಯಾನೇಶ್ ಗಂಗಾವತಿ, ಆಂಜನೇಯ ರಾಂಪುರ, ಬಸವರಾಜ್ ವಂಕಲಕುಂಟಿ ಬಸವರಾಜು ಗಣೇಶ್ ರವಿಕುಮಾರ್ ವೆಂಕಣ್ಣ ಅಖಿಲ್ ಕುಮಾರ್ ಶ್ರೀನಿವಾಸ್ ಜ್ಯೋತಿ ಸಂಜನಾ ನೀಲಪ್ಪ ಹನುಮೇಶ್ ಚಂದ್ರಶೇಖರ್ ಜಿ ಮಂಜುನಾಥ್ ಇನ್ನು ಅನೇಕರು ಇದ್ದರು.

## ಸಾಲ ಭಾಧೆಯಿಂದ ರೈತ ಆತ್ಮಹತ್ಯೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲೂಕಿನ ಹನಗೋಡು ಹೋಬಳಿಯ ವಡ್ಡಂಬಾಳು ಗ್ರಾಮದ ರೈತ ಸಿದ್ದರಾಜು ಬಿನ್ ಕಗ್ಗಿನಾಯಕ ರವರು ಸಾಲ ಭಾಧೆಯಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಸಿದ್ದರಾಜು ರವರಿಗೆ ಪತ್ನಿ ಹಾಗೂ ಇಬ್ಬರು ಮಕ್ಕಳಿದ್ದಾರೆ. ಎಂದು ತಿಳಿದಿದೆ. ಮೃತ ಸಿದ್ದರಾಜು ಸೇರಿದಂತೆ ಇತರೆ ಕೈ ಸಾಲವಾಗಿ ಹೆಚ್ಚು ಸಾಲ ಮಾಡಿದ್ದು, ಬೆಳೆದ ತಂಬಾಕು ಬೆಳೆ ಹಾಗೂ ಶುಂಠಿ ಬೆಳೆಗೆ ಸರಿಯಾದ ಬೆಲೆ ಸಿಗದೇ ಸಾಲ ಭಾಧೆಯ ಸುಳಿಗೆ ಸಿಲುಕಿದ್ದು ಸಾಲ ತೀರಿಸಲಾಗದೇನ ನೊಂದು ಇಂದು ಅವರ ಜಮೀನಿನ ಮರವೊಂದಕ್ಕೆ ನೇಣಿ ಬಿಗಿದು ಸಾವನ್ನಪ್ಪಿದ್ದಾರೆ.

ಗ್ರಾಮಕ್ಕೆ ತಾಲೂಕಿನ ಮಾಜಿ ಶಾಸಕರಾದ ಎಚ್ ಪಿ ಮಂಜುನಾಥ್ ಭೇಟಿ ನೊಂದ ಕುಟುಂಬಕ್ಕೆ ಸ್ಥಳಕ್ಕೆ ಭೇಟಿ ನೀಡಿ ಸಾಂತ್ವನ;. ಹೇಳಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿ ಸಾಲ ಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತ ಸಿದ್ದರಾಜು ಕುಟುಂಬಸ್ಥರಿಗೆ ಸಾಂತ್ವಾನ ಹೇಳಿ



ನೊಂದ ಕುಟುಂಬಕ್ಕೆ ಸರ್ಕಾರದಿಂದ ಸಿಗುವ ಎಲ್ಲಾ ರೀತಿಯ ಪರಿಹಾರವನ್ನು ಕೂಡಲೇ ಮಂಜೂರು ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಫೋನ್ ಮೂಲಕ ಉನ್ನತ ಮಟ್ಟ ಅಧಿಕಾರಿಗಳಿಗೆ ಮನವಿ ಮಾಡಿ ಮೃತರ ಕುಟುಂಬಕ್ಕೆ ವೈಯಕ್ತಿಕವಾಗಿ ಸಹಾಯಹಸ್ತ ನೀಡುವುದಾಗಿ ಭರವಸೆ ನೀಡಿದರು. ಈ ಪ್ರಕರಣವನ್ನು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

## ಶ್ರೀ ಆಂಜನೇಯ ಸ್ವಾಮಿಗೆ ₹2.5 ಕೋಟಿ ಮೌಲ್ಯದ ಚಿನ್ನದ ಆಭರಣ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಹನುಮಂತನ ಜನ್ಮಸ್ಥಳವಾದ ಕಿಷ್ಕಿಂಧಾ ಅಂಜನಾದ್ರಿ ಬೆಟ್ಟದ ಶ್ರೀ ಆಂಜನೇಯ ಸ್ವಾಮಿಗೆ ಇಂದು ಮುಂಜಾನೆ ಶುಭ ಮುಹೂರ್ತದಲ್ಲಿ ಭಾರತದ ಪ್ರತಿಷ್ಠಿತ ನಿರ್ಮಾಣ ಸಂಸ್ಥೆಯಾದ ಎ.ಎಂ. ಆರ್ (AMR) ಗ್ರೂಪ್‌ನ ಅಧ್ಯಕ್ಷರಾದ ಶ್ರೀ ಡಾ. ಎ. ಮಹೇಶ್ ರೆಡ್ಡಿ ಅವರ ಕುಟುಂಬದವರು ಭಕ್ತಿಭಾವದಿಂದ ವಿಶೇಷ ಸೇವೆ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ, ಸುಮಾರು ₹2.5 ಕೋಟಿ ಮೌಲ್ಯದ ಭವ್ಯ ಬಂಗಾರದ ಆಭರಣಗಳನ್ನು ಶಾಸಕರಾದ ಗಾಲಿ ಜನಾರ್ಧನ ರೆಡ್ಡಿ ಹಾಗೂ ಅವರ ಧರ್ಮಪತ್ನಿ ಲಕ್ಷ್ಮಿ ಅರುಣಾ ಅವರ ಉಪಸ್ಥಿತಿಯಲ್ಲಿ ದೇವಸ್ಥಾನಕ್ಕೆ ಸಮರ್ಪಿಸಿದರು.

ಅತ್ಯಂತ ಕಲಾತ್ಮಕವಾಗಿ ವಿನ್ಯಾಸಗೊಳಿಸಲಾದ ಬಂಗಾರದ ಪ್ರಭಾವಳಿ, ಛತ್ರಿ, ಕಿರೀಟ ಹಾಗೂ ಗದೆಯನ್ನು ಶ್ರೀ ಆಂಜನೇಯ ಸ್ವಾಮಿಗೆ ಅರ್ಪಿಸುವ ಮೂಲಕ ತಮ್ಮ ಅಪಾರ ಭಕ್ತಿ ಮತ್ತು ಶ್ರದ್ಧೆಯನ್ನು ವ್ಯಕ್ತಪಡಿಸಿದರು. ಈ ವೇಳೆ ದೇವಾಲಯದ ಅರ್ಚಕರು ವೇದಮಂತ್ರಗಳೊಂದಿಗೆ ವಿಶೇಷ ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ, ಸಮರ್ಪಿತ ಆಭರಣಗಳಿಗೆ ಪೂಜೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ಗಂಗಾವತಿ ತಹಸಿಲ್ದಾರರಾದ ಶ್ರೀಮತಿ ವಸಂತ ಕುಮಾರಿ, ಕನಕಗಿರಿ ತಹಸಿಲ್ದಾರರಾದ ವಿಶ್ವನಾಥ್, ಗ್ರೇಡ್ 2 ತಹಶೀಲ್ದಾರರಾದ ಮಹಾಂತಗೌಡ ಪಾಟೀಲ್, ಮಾಜಿ ಸಂಸದರಾದ ಶಿವರಾಮೇಗೌಡ, ಮಾಜಿ ಜಿಲ್ಲಾಧ್ಯಕ್ಷರಾದ ವಿರುಪಾಕ್ಷಪ್ಪ ಸಿಂಗನಾಳ್, ಬಿಜೆಪಿ ನಗರ ಮಂಡಲ ಅಧ್ಯಕ್ಷರಾದ ಚಂದ್ರು ಹಿರೂರು, ಮಾಜಿ ಕಾಡಾ ಅಧ್ಯಕ್ಷರಾದ ತಿಪ್ಪೇರುದ್ರಸ್ವಾಮಿ, ಮುಖಂಡರಾದ ಮನೋಹರ ಗೌಡ ಹೇರೂರು, ಯಮನೂರು ಚೌಡ್ಕಿ, ವೀರೇಶ್ ಬಲಕುಂದಿ, ಮಲ್ಲಿಕಾರ್ಜುನ ಸ್ವಾಮಿ, ಬಾಬು ರೆಡ್ಡಿ, ಗಂಗಾಧರ ಸ್ವಾಮಿ, ಸಂಗಮೇಶ್ ಬಾದವಾಡಿಗಿ, ವೆಂಕಟೇಶ್ ಜಬ್ಬಲಗುಡ್ಡ, ರಮೇಶ್ ಹೊಸಮಲಿ, ಮಂಜುನಾಥ ಗೊಂದಿ, ಮಂಜುನಾಥ ಕಲಾಲ್, ಅರ್ಜುನ್ ರಾಯ್ಕರ್, ವೀರೇಶ್ ಅಂಜನಾದ್ರಿ ಹಾಗೂ ತಾಲೂಕು ಆಡಳಿತ ಸಿಬ್ಬಂದಿ ವರ್ಗದವರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕಾಡುತ್ತಿರುವ ಗುಡ್ಡದ ಭೂತ: ಆಡಳಿತ ವ್ಯವಸ್ಥೆಯ ನಿಷ್ಕ್ರೀಯತೆ


• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

2024 ಜುಲೈ 16 ರಂದು ಸಂಭವಿಸಿದ ಶಿರೂರು ದುರಂತ ಇಂದಿಗೂ ಜೀವಂತವಾಗಿದೆ. ಆದರೆ ಅಧಿಕಾರಿ ಮತ್ತು ಆಡಳಿತ ವರ್ಗದವರು ಕುಸಿದ ಗುಡ್ಡದಲ್ಲಿ ಮತ್ತೆ ಕುಸಿಯದಂತೆ ಯಾವ ಕ್ರಮವನ್ನು ಇದುವರೆಗೂ ಸರಿಯಾಗಿ ಕೈಗೊಂಡಿಲ್ಲ. ಹಾಗೇ ಇಲ್ಲಿಯ ಮಣ್ಣು ಗಂಗಾವಳಿ ನದಿಯಲ್ಲಿ ಬಿದ್ದು ಗುಡ್ಡದಂತಾಗಿದೆ. ಇದನ್ನು ಕೂಡ ಇದುವರೆಗೂ ತೆರವುಗೊಳಿಸಿಲ್ಲ. ಹೀಗಾಗಿ ಮಳೆಗಾಲ ಇನ್ನೇನು ಕೆಲವೇ ದಿನಗಳಲ್ಲಿ ಆರಂಭಗೊಳ್ಳಲಿದ್ದು ಸಹಜವಾಗಿಯೇ ಇಲ್ಲಿಂದ ಸಂಚರಿಸುವ ಪ್ರಯಾಣಿಕರು ಆತಂಕಗೊಳ್ಳುವಂತಾಗಿದೆ.

ಶಿರೂರು ಗುಡ್ಡ ಕುಸಿತ ದುರಂತದಲ್ಲಿ 11 ಜನರ ಬಲಿಯಾಗಿದ್ದರು. ಒಂದಿಷ್ಟು ವ್ಯತ್ಯಾಸವಾದರೂ ಕೂಡ ಇನ್ನು ದೊಡ್ಡ ದುರಂತವಾಗುವ ಸಾಧ್ಯತೆಯಿತ್ತು. ಇಲ್ಲಿಯ ಸ್ಥಿತಿಗತಿಗಳ ಬಗ್ಗೆ ರಾಜ್ಯ ಹಾಗೂ ದೇಶಮಟ್ಟದ ಸುದ್ದಿಗಳಾದವು. ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಸಚಿವರಾದ ಕೃಷ್ಣ ಭೈರೆಗೌಡ, ಮಂಕಾಳ ವೈದ್ಯ ಸೇರಿದಂತೆ ಹಲವರು ಸ್ಥಳ ಪರಿಶೀಲಿಸಿದರು. ಆದರೆ ಇದುವರೆಗೂ ಕನಿಷ್ಟ ಪಕ್ಷ ನದಿಯಲ್ಲಿ ಬಿದ್ದ ಮಣ್ಣು ಕೂಡ ತೆರವುಗೊಳಿಸಲಾಗದ ಹಣೆಬರಹ ನಮ್ಮ ಆಡಳಿತ ವ್ಯವಸ್ಥೆಯ ಅವ್ಯವಸ್ಥೆಯನ್ನು ತೋರಿಸುತ್ತದೆ.

ಈ ಬಾರಿಯೂ ಕೂಡ ಇಲ್ಲಿ ಗುಡ್ಡ ಕುಸಿಯಬಹುದು ಎನ್ನುವ ಆತಂಕದಿಂದಾಗಿ ಇನ್ನೊಂದು ದಡವಾದ ಉಳುವರೆ ಗ್ರಾಮದ ನಿರಾಶ್ರಿತರಿಗೆ ಬೇರೆ ಕಡೆ ನಿವೇಶನ ನೀಡಿ ಅವರನ್ನು ಸ್ಥಳಾಂತರಿಸಲಾಗಿದೆ. ಇನ್ನು ಗುಡ್ಡ ಕುಸಿಯುವ ಅಥವಾ ಅಪಾಯದ ಮುನ್ಸೂಚನೆ ಸಿಕ್ಕರೆ ಈಗಾಗಲೇ ನಿರ್ಮಾಣಗೊಂಡಿರುವ ಮಂಜಗುಣಿ–ಗಂಗಾವಳಿ ಸೇತುವೆಯ ಮೂಲಕ





ವಾಹನ ಬಿಡಲು ಅಧಿಕಾರಿಗಳು ಚಿಂತಿಸಿದ್ದಾರೆ. ಇನ್ನು ಯಲ್ಲಾಪುರ–ಹುಬ್ಬಳಿ ಕಡೆಗೆ ತೆರಳುವ ವಾಹನಗಳಿಗೆ ಹೊಸಕಂಬಿ ಒಳಮಾರ್ಗದ ಮೂಲಕ ಹೊಸಕಂಬಿ ಮಾರ್ಗವಾಗಿ ತೆರಳಲು ಸಿದ್ಧತೆ ನಡೆಸಿದ್ದಾರೆ.

ಇಲ್ಲಿ ಗುಡ್ಡ ಕುಸಿಯಲು ಕಾರಣವೇನು, ಮುಂಜಾಗೃತ ಕ್ರಮ ಹೇಗೆ ತೆಗೆದುಕೊಳ್ಳಬೇಕು ಮತ್ತು ಶಾಶ್ವತ ಪರಿಹಾರ ಹೇಗೆ ಮಾಡಬೇಕು ಎನ್ನುವುದರ ಕುರಿತು ಆಡಳಿತವರ್ಗ ಚಿಂತಿಸಿದಂತಿಲ್ಲ. ಹೀಗಾಗಿ ದೊಡ್ಡ ಮಳೆಯ ಸಂದರ್ಭದಲ್ಲಿ ಜನರು ಶಿರೂರು ಮಾರ್ಗವಾಗಿ ಸಂಚರಿಸಲು ಭಯಗೊಳ್ಳುವಂತಾಗಿದೆ. ಹೀಗಾಗಿ ಮಳೆ ಜೋರಾದಾಗಲೆಲ್ಲ ಪೊಲೀಸರು ಹಾಗೂ ಐಆರ್‌ಬಿ ಕಂಪನಿಯವರು ಶಿರೂರು ಗುಡ್ಡದ ಸಮೀಪ ಜಾಗೃತಿ ವಹಿಸಲು ಸಿದ್ಧತೆ ನಡೆಸಿದ್ದಾರೆ.

**ಶಿರೂರು ಗುಡ್ಡ ಕುಸಿತದಿಂದಾಗಿ ಸಾಕಷ್ಟು ಸಮಸ್ಯೆಗಳನ್ನು ಎದುರಿಸಿದ್ದೇವೆ. ಆದರೆ ಇದುವರೆಗೂ ಅಲ್ಲಿ ಯಾವುದೇ ತೆರವು ಕಾರ್ಯ ಮಾಡದಿರುವುದು ಆಡಳಿತ ವ್ಯವಸ್ಥೆಗೆ ಹಿಡಿದ ಕೈಗನ್ನಡಿಯಾಗಿದೆ. ಈ ಬಾರಿ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಅಭಿಪ್ರಾಯ ಪಟ್ಟಿದೆ. ಒಂದೊಮ್ಮೆ ಘಟ್ಟದ ಮೇಲ್ಭಾಗದಲ್ಲಿ ಹೆಚ್ಚಿನ ಮಳೆಯಾದರೆ ಇಲ್ಲಿ ಅಪಾಯ ಕಟ್ಟಿಟ್ಟ ಬುತ್ತಿ ಎನ್ನುವಂತಾಗಿದೆ.**

**–ರಮೇಶ ಗೌಡ,**
**ಶಿರೂರು ಗ್ರಾ.ಪಂ. ಮಾಜಿ ಸದಸ್ಯರು, ಬೆಳಸೆ**

ದೊಡ್ಡ ಪ್ರಮಾಣದಲ್ಲಿ ಮಳೆಯಾದರೆ ನದಿಯಲ್ಲಿ ಬಿದ್ದ ಮಣ್ಣಿನಿಂದಾಗಿ ಮೇಲ್ಭಾಗದ ಸಗಡಗೇರಿ, ವಾಸರಕುದ್ರಿಗೆ, ಅಗಸೂರು, ಡೋಂಗ್ರಿ, ಸುಂಕಸಾಳ, ಹಿಲ್ಲೂರು ಪಂಚಾಯಿತಿ ವ್ಯಾಪ್ತಿಯಲ್ಲಿ ದೊಡ್ಡ ಪ್ರಮಾಣದಲ್ಲಿ ನೀರು ನುಗ್ಗುವ ಸಾಧ್ಯತೆಯಿದೆ. ಹಾಗೇ ಒಮ್ಮೆಲೆ ನೀರಿನ ಒತ್ತಡಕ್ಕೆ ಮಣ್ಣನ್ನು ಒಡೆದು ಬಂದರೆ ಗಂಗಾವಳಿ ನದಿಯ ಪಕ್ಕದ ಗ್ರಾಮಗಳಿಗೆ ನೀರು ನುಗ್ಗುವ ಸಾಧ್ಯತೆ ಇದೆ. ಒಟ್ಟಿನಲ್ಲಿ ಈ ಬಾರಿ ಘಟ್ಟದ ಮೇಲ್ಭಾಗದಲ್ಲಿ ಒಂದೊಮ್ಮೆ ಮಳೆ ವಿಪರೀತವಾದರೆ ವಿವಿಧ ಸಮಸ್ಯೆಗಳಿಗೆ ಕಾರಣವಾಗಲಿದೆ. ಆದರೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಇದನ್ನು ನಿರ್ಲಕ್ಷಿಸಿರುವುದು ತೀರಾ ಖಂಡನಾರ್ಹವಾಗಿದೆ ಎನ್ನುವುದು ಪ್ರಜ್ಞಾವಂತರು ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಸಂಭ್ರಮ ಸಡಗರದಿಂದ ನಡೆದ ಭೂದೇವಿ ಬಂಡಿಹಬ್ಬ



**ಅಂಕೋಲಾ:** ತಾಲೂಕಿನ ಅವರ್ಸಾ ಗ್ರಾಮದ ಶ್ರೀ ಭೂದೇವಿ ದೇವರ ಬಂಡಿಹಬ್ಬವು ಸಂಭ್ರಮ ಸಡಗರದಿಂದ ನಡೆಯಿತು. ಏ.24 ರಿಂದ ಆರಂಭಗೊಂಡಿದ್ದ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದು ಶ್ರೀ ಭೂದೇವಿಯ ಕಳಸದ ಮೆರವಣಿಗೆ ಸೇರಿದಂತೆ ವಿವಿಧ ಕಾರ್ಯಗಳು ನಡೆದವು. ಇದನ್ನು ವೀಕ್ಷಿಸಲು ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದರು. ಪ್ರತಿವರ್ಷ ನಡೆಯುವ ಇಲ್ಲಿಯ ಬಂಡಿಹಬ್ಬಕ್ಕೆ ಸಾಕಷ್ಟು ಜನರು ಬಂದು ದೇವರಿಗೆ ಪೂಜೆ ಹಾಗೂ ಹರಕೆ ತೀರಿಸುತ್ತಾರೆ. ಹಾಗೇ ಸಾಕಷ್ಟು ಭಕ್ತರು ಆಗಮಿಸಿ ದೇವರ ಕೃಪೆಗೆ ಪಾತ್ರರಾದರು.

## ರಸ್ತೆ ದುರಸ್ಥಿಗೆ ಸಾರ್ವಜನಿಕರ ಆಗ್ರಹ



**ಗೋಕರ್ಣ:** ಇಲ್ಲಿಯ ಸಮೀಪದ ಕಡಮೆ ಗ್ರಾಮದಿಂದ ಹನೇಹಳ್ಳಿಗೆ ತೆರಳುವ ರಸ್ತೆಯು ಸಂಪೂರ್ಣ ಹದಗೆಟ್ಟಿದ್ದು, ದ್ವಿಚಕ್ರ ವಾಹನದವರು ಸ್ವಲ್ಪ ಎಚ್ಚರ ತಪ್ಪಿದರೂ ಅಪಘಾತ ಇಲ್ಲಿ ಕಟ್ಟಿಟ್ಟ ಬುತ್ತಿಯಂತಾಗಿದೆ. ಮೂರು ರಸ್ತೆ ಕೂಡುವ ಸ್ಥಳದಲ್ಲಿಯೇ ರಸ್ತೆ ಸಂಪೂರ್ಣ ನಾಶಗೊಂಡು ಅಪಘಾತಕ್ಕೆ ಆಹ್ವಾನಿಸುತ್ತಿದೆ. ಆದರೆ ಈ ಬಗ್ಗೆ ಆಡಳಿತ ವರ್ಗ ಗಮನ ಹರಿಸಿದಂತೆ ಕಂಡುಬರುತ್ತಿಲ್ಲ.

ಈ ಭಾಗದಲ್ಲಿ ಸಾಕಷ್ಟು ಜನವಸತಿ ಪ್ರದೇಶಗಳಿವೆ. ಪ್ರತಿನಿತ್ಯ ಇಲ್ಲಿ ನೂರಾರು ವಾಹನಗಳು ಸಂಚರಿಸುತ್ತದೆ. ರಸ್ತೆಗೆ ಹಾಕಲಾಗಿದ್ದ ಜಲ್ಲಿ ಕಲ್ಲುಗಳು ಎದ್ದು ನಿಂತಿವೆ. ದ್ವಿಚಕ್ರ ವಾಹನದವರು ಇಲ್ಲಿ ಹೊಂಡ ತಪ್ಪಿಸಲು ಹೋಗಿ ಸ್ವಲ್ಪ ಬ್ರೇಕ್ ಹಾಕಿದರೂ ಕೂಡ ಗಾಡಿ ಸ್ಕ್ರೀಡ್ ಆಗಿ ಬೀಳುವ ಸಾಧ್ಯತೆಇದೆ. ಈಗಾಗಲೇ ಕೆಲವರು ಬಿದ್ದುಆಸ್ಪತ್ರೆ ಸೇರಿದ ಘಟನೆಯು ಕೂಡ ನಡೆದಿದೆ. ಹೀಗಾಗಿ ಸಂಬಂಧಪಟ್ಟವರು ಈ ಬಗ್ಗೆ ಗಮನ ಹರಿಸಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

## ಒಳಚರಂಡಿ ಸರಿಪಡಿಸಿ, ಮಕ್ಕಳನ್ನು ಕಾಪಾಡಿ



**ಗಂಗಾವತಿ:** ತಾಲೂಕಿನ ನಗರದ ವಾರ್ಡ ನಂ 19 ಪಿಂಜಾರ ಓಣಿ, ಮತ್ತು 16 ಪಿಂಜಾರ ಓಣಿ, ಈ ವಾರ್ಡಗಳಲ್ಲಿ ಇರುವ ಒಳಚರಂಡಿ ನಿಂದ ನೀರು ಹೋರ ಬಂದು ಸದರಿ ವಾರ್ಡಿನ ಸಾರ್ವಜನಿಕರಿಗೆ ಓಡಾಡಲು ಮತ್ತು ದುರ್ವಾಸನೆಯಿಂದ ಬಹಳ ತೊಂದರೆಯಾಗುತ್ತಿದೆ, ಅಲ್ಲಿ ಇರುವ ಚಿಕ್ಕ ಮಕ್ಕಳಿಗೆ ಮಲೇರಿಯಾ, ಸಾಂಕ್ರಾಮಿಕ ಅಂತ ಸಾಮಾಜಿಕ ರೋಗಕ್ಕೆ ತುತ್ತಾಗುವ ಸಾಧ್ಯತೆ ಇದೆ ಮತ್ತು ಆ ಹೊರಗಡೆ ಇರುವ ಚರಂಡಿಯನ್ನು ಸ್ವಲ್ಪ ಎತ್ತರಕ್ಕೆ ನಿರ್ಮಿಸಬೇಕು ಅಲ್ಲಿ ಜನರಿಗೆ ಅನುಕೂಲ ಮಾಡಿಕೊಟ್ಟಂತಾಗುತ್ತದೆ ಎಂದು ನಗರಸಭೆ ಸದಸ್ಯರಿಗೆ ತಿಳಿಸಿದರೆ ಅವರು ಒಂದು ದಿನ ನೋಡಿಕೊಂಡು ಕಾರ್ಮಿಕರಿಗೆ ಹೇಳಿ ಮೇಲಿಂದಲೇ ಸ್ವಚ್ಛಗೊಳಿಸಿ ಹೋದರು ಬಳಿಕ ಅದೇ ರೀತಿ ಒಳಚರಂಡಿಯ ಲೀಕೇಜ್ ಪೂರ್ಣ ಸ್ವಚ್ಛಗೊಳ್ಳಲಿಲ್ಲ ದಯವಿಟ್ಟು ಈ ಎಲ್ಲವನ್ನು ಸರಿಪಡಿಸಿ

ವಾರ್ಡನಲ್ಲಿರುವ ಕೈ ಭೋರ್ ಅನ್ನು ತೆಗೆದು ಹಾಕಿ ಟ್ಯಾಂಕಗೆ ಸಂಪರ್ಕಿಸಬೇಕು ಹಾಗೂ ಬೀದಿ ದೀಪಗಳನ್ನು ಅಳವಡಿಸಲು ವಿನಂತಿ

ದಯಾಳುಗಳಾದ ತಾವುಗಳು ಈ ನಮ್ಮ ಮನವಿಯನ್ನು ಸ್ವೀಕರಿಸಿ ಈ ವಾರ್ಡಗಳನ್ನು ಸರಿಯಾಗಿ ಪರಿಶಿಲನೆ ಮಾಡಿ ಚರಂಡಿಯ ಡ್ರೈನೇಜನ್ನು ಸರಿಪಡಿಸಿ ಅಲ್ಲಿ ಆರೋಗ್ಯವನ್ನು ಕಾಪಾಡಬೇಕೆಂದು ಈ ಮೂಲಕ ತಮ್ಮಲ್ಲಿ ವಾಸಿಸುವ ನಿವಾಸಿಗಳು ವಿನಂತಿಸಿಕೊಳ್ಳುತ್ತೇವೆ.

ಈ ಕೆಲಸವನ್ನು ಆದಷ್ಟು ಬೇಗ ಸರಿಪಡಿಸಬೇಕೆಂದು ಮಾನ್ಯ ಪೌರಾಯುಕ್ತರು ನಗರಸಭೆ ಕಾರ್ಯಾಲಯಕ್ಕೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಗಂಗಾವತಿ ಇವರ ವತಿಯಿಂದ ಮನವಿ ಸಲ್ಲಿಸಿದರು.

## ಜೆಸ್ಕಾಂಗೆ ನೂತನ ಎಂಡಿ: ಶಶಿಧರ್ ಕುರೇರಾ ಅಧಿಕಾರ ಸ್ವೀಕಾರ

**ಕಲಬುರಗಿ:** ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಜೆಸ್ಕಾಂ)ಗೆ ನೂತನ ವ್ಯವಸ್ಥಾಪಕ ನಿರ್ದೇಶಕರಾಗಿ ಐಎಎಸ್ ಶಶಿಧರ್ ಕುರೇರಾ ಅವರು ನೇಮಕಗೊಂಡಿದ್ದು, ಶುಕ್ರವಾರ ಅಧಿಕಾರ ಸ್ವೀಕರಿಸಿದರು.



ಈ ಹಿಂದೆ ಬಾಗಲಕೋಟೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದ ಶಶಿಧರ್ ಕುರೇರಾ ಅವರು ಆಡಳಿತಾತ್ಮಕ ಅನುಭವ ಹೊಂದಿದ್ದು, ಗ್ರಾಹಕ ಸೇವೆ ಮತ್ತಷ್ಟು ಪರಿಣಾಮಕಾರಿಯಾಗಿಸಲು ಹಾಗೂ ಸಂಸ್ಥೆಯ ಅಭಿವೃದ್ಧಿಗೆ ಆದ್ಯತೆ ನೀಡಲಿದ್ದಾರೆ.

ನೂತನ ಎಂಡಿ ಅಧಿಕಾರ ಸ್ವೀಕರಿಸಿದ ಸಂದರ್ಭದಲ್ಲಿ ಜೆಸ್ಕಾಂನ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದು, ಅವರನ್ನು ಆತ್ಮೀಯವಾಗಿ ಸ್ವಾಗತಿಸಿದರು.

# ದೃಷ್ಟಿಕೋನ ಯೋಜನೆ ಕಾರ್ಯಾಗಾರ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಮುಂದಿನ ಐದು ವರ್ಷದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಆರ್ಥಿಕ, ಸಾಮಾಜಿಕ, ಆರೋಗ್ಯ, ಶೈಕ್ಷಣಿಕ ಒಳಗೊಂಡಂತೆ ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿಗೆ ದೃಷ್ಟಿಕೋನ ಯೋಜನೆಗಳು ರೂಪಿಸುವ ಅಗತ್ಯವಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಹೇಳಿದರು.

ಶುಕ್ರವಾರ ಕಲಬುರಗಿ ನಗರದ ತಾಜ್ ಸುಲ್ತಾನಪುರ ರಸ್ತೆಯ ಹೋಟೆಲ್ ಎನ್‌ರೈಸ್‌ನಲ್ಲಿ ಕೆ.ಕೆ.ಆರ್.ಡಿ.ಬಿ. ಮಂಡಳಿ ಆಯೋಜಿಸಿದ ಕಲ್ಯಾಣ ಕರ್ನಾಟಕ ಅಭಿವೃದಿಗಾಗಿ ದೃಷ್ಟಿಕೋನ ಯೋಜನೆ 2026–2031 ಕಾರ್ಯಗಾರದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಿಸಿ ಮಾತನಾಡಿದ ಅವರು, ಪ್ರದೇಶದಲಿ ಹಿಂದುಳಿವಿಕೆ ಹೋಗಲಾಡಿಸಲು ಮೂಲಸೌಕರ್ಯ ಸೃಷ್ಠಿ, ಬಂಡವಾಳ ಹಕುವುದಷ್ಟೆ ಅಲ್ಲ ಮಾನವ ಬಂಡವಳ ಸೃಷ್ಠಿ ನಮ್ಮ ಆದ್ಯತೆಯಾಗಬೇಕಿದೆ ಎಂದರು.

371ಜೆ ರಚನೆಯಾದ ಮಂಡಳಿಗೆ 2013–14 ರಿಂದ 2025–26ರ ವರೆಗೆ ಸುಮಾರು 23,704 ಕೋಟಿ ರೂ. ಅನುದಾನ ಹಂಚಿಕೆಯಾಗಿದ್ದು, ಇದರಲ್ಲಿ 17,005 ಕೋಟಿ ರೂ. ಖರ್ಚು ಮಾಡಿ ಕೃಷಿ, ನೀರಾವರಿ, ಶಿಕ್ಷಣ, ಆರೋಗ್ಯ, ರಸ್ತೆ, ಮೂಲಸೌಕರ್ಯ ವಲಯದಲ್ಲಿ ಹಣ ಖರ್ಚು ಮಾಡಿದ್ದೇವೆ. ಇನ್ನು ಕಳೆದ ಮೂರು ವರ್ಷದಲ್ಲಿ ಡಾ.ಡಿ.ಎಂ.ನಂಜುಂಡಪ್ಪ ಅವರ ವರದಿಯಂತೆ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಿದ್ದು, ಆರೋಗ್ಯ ಆವಿಷ್ಕಾರ ಕಾರ್ಯಕ್ರಮ ಮೂಲಕ ಆರೋಗ್ಯ ಸಂಸ್ಥೆಗಳ ಬಲವರ್ಧನೆ ಮಾಡಿದ್ದೇವೆ. ಶಿಕ್ಷಣ ಆವಿಷ್ಕಾರ ಕಾರ್ಯಕ್ರಮದ ಮೂಲಕ ಪ್ರದೇಶದಲ್ಲಿ ಎಲ್.ಕೆ.ಜಿ., ಯು.ಕೆ.ಜಿ., ಆಂಗ್ಲ ಮಾಧ್ಯಮ ಬೋಧನೆಗೆ ಅವಕಾಶ ಮಾಡಿಕೊಡಲಾಗಿದ್ದು, 42 ಸಾವಿರ ಮಕ್ಕಳು ಪ್ರವೇಶಾತಿ ಪಡೆದಿದ್ದಾರೆ. 294 ಕೆ.ಪಿ.ಎಸ್. ಶಾಲೆ ನಿರ್ಮಿಸಲಾಗುತ್ತಿದೆ ಎಂದರು.



ಸಾವಿರಾರು ಕೋಟಿ ರೂ. ಹಣ ಖರ್ಚು ಮಾಡಿ ಮೂಲಸೌಕರ್ಯ, ಕಟ್ಟಡ, ಸೇವೆಗಳು ಸ್ಥಾಪಿಸಿದೆಯಾದರು ಇನ್ನು ಈ ಭಾಗದಲ್ಲಿ ತಲಾ ಆದಾಯ ಚೇತನರಿಕೆ ಕಂಡಿಲ್ಲ. ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಹಿಂದಿದ್ದೇವೆ. ರಾಜ್ಯದ ತಲಾ ಆದಾಯ 4.25 ಲಕ್ಷ ರೂ. ಇದೆ. ಬೆಂಗಳೂರು ನಗರ ಜಿಲ್ಲೆಯ ತಲಾ ಆದಾಯ 9.03 ಲಕ್ಷ ರೂ. ಗಳಿದ್ದರೆ ಕಲಬುರಗಿ ಜಿಲ್ಲೆಯ ತಲಾ ಆದಾಯ ಕೇವಲ 1.69 ಲಕ್ಷ ರೂ. ಮಾತ್ರ. ಪ್ರಾದೇಶಿಕ ಅಸಾಮಾನತೆ, ಅಪೌಷ್ಠಿಕ ಮುಕ್ತ ಪ್ರದೇಶ, ಉತ್ತಮ ಆರೋಗ್ಯ ಮತ್ತು ಶಿಕ್ಷಣ, ತಲಾ ಆದಾಯ ಮತ್ತು ಎಚ್.ಡಿ.ಐ ಸೂಚ್ಯಂಕ ವೃದ್ಧಿ ನಮಗೆ ಸವಾಲಾಗಿವೆ. ಇದಕ್ಕಾಗಿ ಕೊರತೆ–ಯ ದತ್ತಾಂಶಗಳನ್ನು ಸಂಗ್ರಹಿಸಿ ತ್ವರಿತಗತಿಯಲ್ಲಿ ಪ್ರಗತಿ ಹೊಂದಲು ಹೊಸ ಆಲೋಚನೆಗಳು, ಚಿಂತನೆಗಳಿಂದ ಅಭಿವೃದ್ಧಿಯ ಅಂತರ ತುಂಬುವಿಕೆಗೆ ಕ್ರಿಯಾ ಯೋಜನೆಗಳು ರೂಪಿಸಬೇಕಿದ್ದು, ಹೀಗಾಗಿ ಪ್ರದೇಶದ ಎಲ್ಲಾ ಇಲಾಖೆಗಳು ಈ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಬೇಕು ಎಂದು ಅಜಯ್ ಸಿಂಗ್ ಹೇಳಿದರು.

**ಮಾನವ ಬಂಡವಾಳ ವೃದ್ಧಿ ಮುಖ್ಯ:** ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಿಸಿದ ಆರ್ಥಿಕ ತಜ್ಞ ಪ್ರೊ. ಗೋವಿಂದರಾವ ಅವರು ಮಾತನಾಡಿ, ಕರ್ನಾಟಕ ದೇಶದಲ್ಲಿ ತೀವ್ರಗತಿಯಲ್ಲಿ ಅಭಿವೃದ್ಧಿ ಹೊಂದುತ್ತಿರುವ ರಾಜ್ಯಗಳಲ್ಲಿ ಒಂದಾಗಿದ್ದರು, ಇಲ್ಲಿನ ಉತ್ತರ ಕರ್ನಾಟಕ ಪ್ರದೇಶ ಅದರಲ್ಲಿಯೂ ಕಲ್ಯಾಣ ಕರ್ನಾಟಕ ಭಾಗ ತೀರಾ ಹಿಂದುಳಿದಿದೆ. 2002ರಲ್ಲಿ ಅಂದಿನ 175 ತಾಲೂಕುಗಳಲ್ಲಿನ 102 ತಾಲೂಕು ಇಂದಿಗೂ ಹಾಗೆ ಇವೆ. ಬಹುಪಾಲು ಇವು ಉತ್ತರ ಕರ್ನಾಟಕ್ಕೆ ಸೇರಿವೆ. ಸಿಕ್ಕಿಂ, ಗೋವಾ ನಂತರ ಹೆಚ್ಚಿನ ತಲಾ ಆದಾಯ ಹೊಂದಿರುವ ರಾಜ್ಯ ನಮ್ಮದಾಗಿದ್ದರೂ ಕಲಬುರಗಿ ಸೇರಿದಂತೆ ಈ ಭಾಗದ ಜನರ ತಲಾ ಆದಾಯ ತುಂಬಾ ಕಡಿಮೆ. ರಾತ್ರೋರಾತ್ರಿ ಹಣ ಸುರಿದರೆ ಬೆಳಗಾದೋಗದ್ರಲ್ಲಿ ಅಭಿವೃದ್ಧಿ ಕಾಣಲು ಅಸಾಧ್ಯ. ಹೀಗಾಗಿ ಇಲ್ಲಿನ ಸರ್ಕಾರಿ ಸಂಸ್ಥೆಗಳು ಲಭ್ಯ ಸಂಪನ್ಮೂಲ ಮತ್ತು ಮಾನವ ಸಂಪನ್ಮೂಲ ಬಳಸಿ ಕಾರ್ಯಕ್ಷಮತೆ ಸುಧಾರಣೆ ಜೊತೆಗೆ ಮಾನವ ಬಂಡವಾಳ ಸೃಷ್ಠಿಸಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು.

ಪ್ರಾದೇಶಿಕ ಅಸಮಾನತೆ ನಿವಾರಣೆ ನಿಟ್ಟಿನಲ್ಲಿ ಹಿಂದೆ 2002ರಲ್ಲಿ ಡಾ.ಡಿ.ಎಂ.ನಂಜುಂಡಪ್ಪ ಸಲ್ಲಿಸಿದ ವರದಿ ಎರಡು ದಶಕವಾದ ಕಾರಣ ಇತ್ತೀಚೆಗೆ ತಮ್ಮ ಅಧ್ಯಕ್ಷತೆಯಲ್ಲಿ ಸರ್ಕಾರ ರಚಿಸಿದ ಪ್ರಾದೇಶಿಕ ಅಸಮಾನತೆ ನಿವಾರಣೆ ಸಮಿತಿಯು ಈಗಾಗಲೆ ರಾಜ್ಯ ಸರ್ಕಾರಕ್ಕೆ ತನ್ನ ವರದಿ ಸಲ್ಲಿಸಿದ್ದು, ಮುಂದಿನ 5 ವರ್ಷದಲ್ಲಿ ಪ್ರತಿ ವರ್ಷ 8 ಸಾವಿರ ಕೋಟಿ ರೂ. ಗಳಂತೆ ಒಟ್ಟು 43,914 ಕೋಟಿ ರೂ. ವಿವಿಧ ವಲಯದಲ್ಲಿ ಖರ್ಚು ಮಾಡಲು ಶಿಫಾರಸ್ಸು ಮಾಡಲಾಗಿದೆ ಎಂದರು.

# ಸಕಾಲದಲ್ಲಿ ಮಾಹಿತಿ ನೀಡದ ಅಧಿಕಾರಿಗಳಿಗೆ ದಂಡ: ಬಿ. ವೆಂಕಟಸಿಂಗ್

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಸಕಾಲಕ್ಕೆ ಮಾಹಿತಿ ನೀಡಲು ನಿರ್ಲಕ್ಷ್ಯ ವಹಿಸುವುದು ಸೇರಿದಂತೆ ವಿಚಾರಣೆಗೆ ಗೈರು ಹಾಜರಾಗಿ ಆಯೋಗದ ನೋಟಿಸಗೆ ಸ್ಪಂದನೆ ನೀಡದ ಕಾರಣ ಕಲ್ಬುರ್ಗಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಹಾಗೂ ಗಂಗಾವತಿ ತಾಲೂಕು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯ ಪಾಲಾನಾ ಅಭಿಯಂತರ ದೇವಣ್ಣ ಕಟ್ಟಿ, ರಾಯಚೂರು ತಾಲೂಕು ಗ್ರೇಡ್ – 2 ತಹಸೀಲ್ದಾರ್ ಪರಶುರಾಮ್ ಸೇರಿ ಹಲವು ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಗ್ರಾಮ ಪಂಚಾಯತ ಕಾರ್ಯದರ್ಶಿಗಳಿಗೆ ರಾಜ್ಯ ಮಾಹಿತಿ ಆಯೋಗದ ಕಲ್ಬುರ್ಗಿ ಪೀಠ ದಿಂದ ದಂಡ ವಿಧಿಸಿ ಆದೇಶ ಮಾಡಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ತಿಳಿಸಿದ್ದಾರೆ.



ಏಪ್ರಿಲ್ ತಿಂಗಳಿನಲ್ಲಿ ನಡೆದ ವಿಚಾರಣೆ ವೇಳೆ ಗೈರು ಹಾಜರಾಗಿದ್ದಲ್ಲದೆ, ಮಾಹಿತಿ ನೀಡದ ಕಾರಣ ಕಲ್ಬುರ್ಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶ್ರೀ ಲಕ್ಷ್ಮಣ ಶೃಂಗೇರಿಗೆ 10 ಸಾವಿರ, ಗಂಗಾವತಿ ತಾಲೂಕು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಶ್ರೀ ದೇವಣ್ಣ ಕಟ್ಟಿಗೆ 15 ಸಾವಿರ,ರಾಯಚೂರು ತಾಲೂಕು ಗ್ರೇಡ್ 2 ತಹಸೀಲ್ದಾರ್ ಪರಶುರಾಮ ಗೆ 5 ಸಾವಿರ,ಜೇವರ್ಗಿ ತಾಲೂಕಿನ ಹಲ್ಲೂರ ಗ್ರಾ.ಪಂ ಕಾರ್ಯದರ್ಶಿ ಮಲ್ಲಿಕಾರ್ಜುನಗೆ 5 ಸಾವಿರ, ಸುರುಪುರ ತಾಲೂಕಿನ ಆಲ್ದಾಳ ಗ್ರಾ.ಪಂ. ಕಾರ್ಯದರ್ಶಿ ರಾಜಕುಮಾರ ಸುಬೆದಾರಗೆ 10 ಸಾವಿರ, ಮಟ್ಟಿ ತಾಲೂಕಿನ ಆರೋಲಿ ಗ್ರಾಪಂ ಪಿ.ಡಿ.ಓ ರಘುನಾಥಗೆ 5 ಸಾವಿರ, ಆಳಂದ ತಾಲೂಕಿನ ಯಲಸಂಗಿ ಗ್ರಾ.ಪಂ ಪಿ.ಡಿ.ಓ ಜಗದೀಶಗೆ 15 ಸಾವಿರ, ಸುರಪುರ ತಾಲೂಕಿನ ನಗನೂರು ಗ್ರಾಪಂ ಕಾರ್ಯದರ್ಶಿಯಾದ ಮಡಿವಾಳಪ್ಪಗೆ 10 ಸಾವಿರ, ಶಹಪುರ ತಾಲೂಕಿನ ಗೋಗಿ.ಕೆ. ಗ್ರಾ.ಪಂ. ಪಿ.ಡಿ.ಓ. ಸಿದ್ರಾಮಗೆ 10 ಸಾವಿರ, ಸಂಡೂರು ತಾಲೂಕಿನ ಹೊಸದರೋಜ ಗ್ರಾಪಂ ಕಾರ್ಯದರ್ಶಿ ಕಲ್ಲಪ್ಪಗೆ 10 ಸಾವಿರ, ಯಾದಗಿರ ತಾಲೂಕಿನ ಸೈದಾಪುರ ಗ್ರಾ.ಪಂ ಪಿ.ಡಿ.ಓ ಮುದುಕಪ್ಪಗೆ 10 ಸಾವಿರ, ವಡಗೇರಾ ತಾಲೂಕಿನ ತಡಿಬಿಡಿ ಗ್ರಾ.ಪಂ. ಕಾರ್ಯದರ್ಶಿ ಯಂಕನಗೌಡಗೆ 5 ಸಾವಿರ, ಕಾರಟಗಿ ತಾಲೂಕಿನ ಸಿದ್ದಾಪುರ ಗ್ರಾಪಂ ಕಾರ್ಯದರ್ಶಿ ಶ್ರೀಮತಿ ಜೋತಿ ರೆಡ್ಡರ್‌ಗೆ 10 ಸಆವಿರ ಕಲ್ಬುರ್ಗಿ ತಾಲೂಕಿನ ಹಾಗಾರಗ ಗ್ರಾ.ಪಂ. ಕಾರ್ಯದರ್ಶಿ ವೇದಾಂಗಗೆ 5 ಸಾವಿರ, ಲಿಂಗಸೂಗೂರು ತಾಲೂಕಿನ ಪೈದೊಡ್ಡಿ ಗ್ರಾ.ಪಂ.ನ ಕಾರ್ಯದರ್ಶಿ ಭೀಮಣ್ಣಗೆ 10 ಸಾವಿರ, ಯಾದಗಿರ ತಾಲೂಕಿನ ರಾಮ ಸಮುದ್ರ ಗ್ರಾ.ಪಂ. ಕಾರ್ಯದರ್ಶಿ ಗಾಲಿಬಸಾಬ ಗೆ 5 ಸಾವಿರ ಹಾಗೂ ರಾಯಚೂರು ತಾಲೂಕಿನ ಗ್ರೇಡ್–2 ತಹಶೀಲದಾರ ಪರುಶುರಾಮಗೆ 5 ಸಾವಿರ ಸೇರಿ ಒಟ್ಟು 18 ಅಧಿಕಾರಿಗಳಿಗೆ ಏಪ್ರೀಲ್ ತಿಂಗಳಿನಲ್ಲಿ 1 ಲಕ್ಷ 50 ಸಾವಿರ ದಂಡ ವಿಧಿಸಲಾಗಿದೆ ಎಂದು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ ಖರೀದಿಗೆ ಆದೇಶ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ 2025–26ನೇ ಸಾಲಿನ ಹಿಂಗಾರು ಹಂಗಾಮಿನ ಸೂರ್ಯಕಾಂತಿಯನ್ನು ಪ್ರತಿ ಕ್ವಿಂಟಾಲ್‌ಗೆ ರೂ 7,721 ದರದಲ್ಲಿ ಖರೀದಿಗೆ ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಆದೇಶ ಮಾಡಿದ್ದಾರೆ.



ಕೇಂದ್ರಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳ ಅನ್ವಯ ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ವಿಜಯಪುರ, ಚಾಮರಾಜನಗರ, ಚಿತ್ರದುರ್ಗ, ಗದಗ, ಕಲಬುರಗಿ, ವಿಜಯನಗರ, ರಾಯಚೂರು ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಅವಶ್ಯಕತೆಗೆ ಅನುಗುಣವಾಗಿ ಖರೀದಿ ಕೇಂದ್ರಗಳನ್ನು ತೆರೆಯಲು ನಿರ್ದೇಶನ ನೀಡಿದ್ದಾರೆ.

ನಾಫೆಡ್ ಮತ್ತು ಎನ್‌ಸಿಸಿಎಫ್ ಸಂಸ್ಥೆಗಳನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ಹಾಗೂ ಕರ್ನಾಟಕ ಸಹಕಾರಿ ಎಣ್ಣೆಬೀಜ ಬೆಳೆಗಾರರ ಮಹಾಮಂಡಳವನ್ನು ರಾಜ್ಯ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ನೇಮಕ ಮಾಡಲಾಗಿದೆ.

ನೋಂದಣಿ ಅವಧಿಯನ್ನು 50 ದಿನ ಹಾಗೂ ಖರೀದಿ ಅವಧಿಯನ್ನು 60 ದಿನ ನಿಗದಿಪಡಿಸಲಾಗಿದ್ದು, ನೋಂದಣಿ ಜೊತೆ–ಗೆ ಖರೀದಿ ಪ್ರಕ್ರಿಯೆ ಆರಂಭಿಸಬೇಕು ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ತಾಂತ್ರಿಕ ಮತ್ತು ವೈಜ್ಞಾನಿಕ ಸೌಲಭ್ಯದಿಂದ ಕೂಡಿರುವ ಗೋದಾಮುಗಳನ್ನು ಹೊಂದಿರುವ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಂಡು ಖರೀದಿ ಕೇಂದ್ರಗಳನ್ನು ತೆರೆಯಬೇಕು . ನೋಂದಣಿ ಮತ್ತು ಖರೀದಿಯಲ್ಲಿ ಯಾವುದೇ ಸಮಸ್ಯೆಗಳಾಗದಂತೆ ಸಿದ್ದತೆ ಮಾಡಿಕೊಂಡು ಪ್ರಕ್ರಿಯೆ ಆರಂಭಿಸಬೇಕು ಎಂದು ಸೂಚಿಸಿದ್ದಾರೆ. ರೈತರ ಹೆಸರಿನಲ್ಲಿ ವರ್ತಕರು ಮತ್ತು ಖರೀದಿ ಸಂಸ್ಥೆಗಳು ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ದುರ್ಬಳಕೆ ಮಾಡಿಕೊಳ್ಳಲು ಅವಕಾಶ ನೀಡಬಾರದು. ಖರೀದಿ ಪ್ರಗತಿಯ ವಿವರವನ್ನು ಪ್ರತಿ ದಿನ ರಾಜ್ಯ ಸರ್ಕಾರ ಹಾಗೂ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಒದಗಿಸಬೇಕು ಎಂದು ತಿಳಿಸಿದ್ದಾರೆ.

# ಪಾಲಕರೇ, ನಿಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ




ಮಕ್ಕಳು ನಮ್ಮ ಭವಿಷ್ಯದ ಬೆಳಕು. ಅವರ ಶಿಕ್ಷಣವೇ ಉತ್ತಮ ಸಮಾಜ ನಿರ್ಮಾಣದ ಅಡಿಪಾಯ. ಇಂದಿನ ಕಾಲದಲ್ಲಿ ಪ್ರತಿಯೊಬ್ಬ ಪಾಲಕರಿಗೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಬೇಕೆಂಬ ಆಸೆ ಸಹಜ. ಆದರೆ "ಉತ್ತಮ ಶಿಕ್ಷಣ" ಎಂದರೆ ಕೇವಲ ದುಬಾರಿ ಖಾಸಗಿ ಶಾಲೆಯಲ್ಲ ಎಂಬ ಸತ್ಯವನ್ನು ನಾವು ಅರಿತುಕೊಳ್ಳಬೇಕು. ನಮ್ಮ ಸುತ್ತಮುತ್ತಲಿರುವ ಸರ್ಕಾರಿ ಶಾಲೆಗಳು ಇಂದು ದ್ವಿಭಾಷಾ ಮಾಧ್ಯಮ ಬೋಧನೆ, ಗುಣಮಟ್ಟದ ಶಿಕ್ಷಣ, ಅನುಭವಸಂಪನ್ನ ಶಿಕ್ಷಕರು, ಉಚಿತ ಸೌಲಭ್ಯಗಳು ಮತ್ತು ಮೌಲ್ಯಾಧಾರಿತ ಬೋಧನೆಯ ಮೂಲಕ ಸಾವಿರಾರು ಮಕ್ಕಳ ಭವಿಷ್ಯವನ್ನು ರೂಪಿಸುತ್ತಿವೆ. ಆದ್ದರಿಂದ ಪಾಲಕರು ತಮ್ಮ ಮಕ್ಕಳನ್ನು ಹತ್ತಿರದ ಸರ್ಕಾರಿ ಶಾಲೆಗೆ ಸೇರಿಸುವ ಕುರಿತು ಗಂಭೀರವಾಗಿ ಚಿಂತಿಸಬೇಕಾದ ಅಗತ್ಯ ಇದೆ.

ಸರ್ಕಾರಿ ಶಾಲೆಗಳು ಕೇವಲ ಓದು ಕಲಿಸುವ ಕೇಂದ್ರಗಳಲ್ಲ; ಅವು ಸಮಾಜದಲ್ಲಿ ಸಮಾನತೆ, ಶಿಸ್ತು ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ಪವಿತ್ರ ಸ್ಥಳಗಳು. ಇಲ್ಲಿ ಬಡ–ಶ್ರೀಮಂತ ಎಂಬ ಭೇದವಿಲ್ಲ. ಎಲ್ಲ ಮಕ್ಕಳೂ ಒಂದೇ ತರಗತಿಯಲ್ಲಿ ಕೂತು ಕಲಿಯುತ್ತಾರೆ. ಇದರಿಂದ ಮಕ್ಕಳಲ್ಲಿ ಸಹಾನುಭೂತಿ, ಸ್ನೇಹಭಾವ ಮತ್ತು ಸಮಾಜದ ಬಗ್ಗೆ ಜವಾಬ್ದಾರಿಯ ಮನೋಭಾವ ಬೆಳೆಯುತ್ತದೆ. ಖಾಸಗಿ ಶಾಲೆಗಳಲ್ಲಿರುವ ಸ್ಪರ್ಧಾತ್ಮಕ ಒತ್ತಡಕ್ಕಿಂತ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸ್ವಭಾವಿಕಪ್ರತಿಭೆಗೆ ಹೆಚ್ಚಿನ ಅವಕಾಶ ದೊರೆಯುತ್ತದೆ.

ಇತ್ತೀಚಿನ ವರ್ಷಗಳಲ್ಲಿ ಸರ್ಕಾರ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿದೆ. ಉಚಿತ ಪಠ್ಯಪುಸ್ತಕಗಳು, ಸಮವಸ್ತ್ರ, ಮಧ್ಯಾಹ್ನದ ಊಟ, ಶೂಸಾಕ್ಸಿತರಣೆ, ವಿದ್ಯಾರ್ಥಿವೇತನ, ಡಿಜಿಟಲ್ತರಗತಿಗಳು, ವಿಜ್ಞಾನ ಪ್ರಯೋಗಾಲಯಗಳು, ಕಂಪ್ಯೂಟರ್ ಶಿಕ್ಷಣ, ಗ್ರಂಥಾಲಯ ಮುಂತಾದ ಸೌಲಭ್ಯಗಳು ಮಕ್ಕಳ ಶಿಕ್ಷಣವನ್ನು ಸುಲಭ ಮತ್ತು ಆಕರ್ಷಕವಾಗಿಸುತ್ತಿವೆ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರಿ ಶಾಲೆಗಳು ಸಾವಿರಾರು ಕುಟುಂಬಗಳ ಆಶಾಕಿರಣಗಳಾಗಿವೆ.

ಸರ್ಕಾರಿ ಶಾಲೆಗಳ ಶಿಕ್ಷಕರು ಉತ್ತಮ ತರಬೇತಿ ಪಡೆದವರು. ಅವರು ಕೇವಲ ಪಾಠ ಹೇಳುವವರಲ್ಲ; ಮಕ್ಕಳ ವ್ಯಕ್ತಿತ್ವ ರೂಪಿಸುವ ಮಾರ್ಗದರ್ಶಕರು. ಮಕ್ಕಳ ಮನೆಯ ಪರಿಸ್ಥಿತಿ, ಅವರ ಸಾಮರ್ಥ್ಯ ಮತ್ತು ಆಸಕ್ತಿಯನ್ನು ಗಮನಿಸಿ ಪ್ರೋತ್ಸಾಹಿಸುವ ಗುಣ ಶಿಕ್ಷಕರಲ್ಲಿ ಕಾಣಸಿಗುತ್ತದೆ. ಅನೇಕ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಇಂದು ಐಎಎಸ್ ಅಧಿಕಾರಿಗಳು, ವಿಜ್ಞಾನಿಗಳು, ವೈದ್ಯರು, ಇಂಜಿನಿಯರ್‌ಗಳು ಮತ್ತು ಸಮಾಜದ ನಾಯಕರು ಆಗಿದ್ದಾರೆ. ಇದು ಸರ್ಕಾರಿ ಶಾಲೆಗಳ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ.

ಮಕ್ಕಳನ್ನು ಹತ್ತಿರದ ಸರ್ಕಾರಿ ಶಾಲೆಗೆ ಸೇರಿಸುವುದರಿಂದ ಇನ್ನೊಂದು ದೊಡ್ಡ ಪ್ರಯೋಜನವೆಂದರೆ ಸಮಯ ಮತ್ತು ಹಣದ ಉಳಿತಾಯ. ದೂರದ ಖಾಸಗಿ ಶಾಲೆಗಳಿಗೆ ಮಕ್ಕಳನ್ನು ಕಳುಹಿಸುವುದರಿಂದ ಪ್ರತಿದಿನ ಪ್ರಯಾಣದ ದಣಿವು, ವಾಹನ ವೆಚ್ಚ ಮತ್ತು ಮಾನಸಿಕ ಒತ್ತಡ ಹೆಚ್ಚಾಗುತ್ತದೆ. ಆದರೆ ಹತ್ತಿರದ ಶಾಲೆಯಲ್ಲಿ ಓದಿದರೆ ಮಕ್ಕಳು ಸಮಯಕ್ಕೆ ಸರಿಯಾಗಿ ಶಾಲೆಗೆ ಹೋಗಬಹುದು, ಕುಟುಂಬದ ಜೊತೆ ಹೆಚ್ಚು ಸಮಯ ಕಳೆಯಬಹುದು ಮತ್ತು ಆರೋಗ್ಯಕರ ಜೀವನ ನಡೆಸಬಹುದು. ಬಾಲ್ಯದಲ್ಲಿ ಮಕ್ಕಳಿಗೆ ಮಾನಸಿಕ ಶಾಂತಿ ಮತ್ತು ಸಂತೋಷ ಅತ್ಯಂತ ಮುಖ್ಯ.

ಇಂದು ಹಲವರು "ಇಂಗ್ಲಿಷ್ ಮೀಡಿಯಂ" ಎಂಬ ಆಕರ್ಷಣೆಗೆ ಒಳಗಾಗಿ ಸರ್ಕಾರಿ ಶಾಲೆಗಳನ್ನು ಕಡೆಗಣಿಸುತ್ತಾರೆ. ಆದರೆ ಭಾಷೆಯಿಗಿಂತ ಜ್ಞಾನ ಮುಖ್ಯ. ಮಕ್ಕಳು ತಮ್ಮ ತಾಯಿಭಾಷೆಯಲ್ಲಿ ಕಲಿತಾಗ ವಿಷಯವನ್ನು ಆಳವಾಗಿ ಅರ್ಥಮಾಡಿಕೊಳ್ಳುತ್ತಾರೆ. ಅನೇಕ ಸರ್ಕಾರಿ ಶಾಲೆಗಳು ಈಗ ಇಂಗ್ಲಿಷ್ ಮಾಧ್ಯಮ ತರಗತಿಗಳನ್ನೂ ಆರಂಭಿಸಿವೆ. ಹೀಗಾಗಿ ಸರ್ಕಾರಿ ಶಾಲೆಗಳು ಕಾಲದ ಅವಶ್ಯಕತೆಗೆ ತಕ್ಕಂತೆ ಬದಲಾಗುತ್ತಿವೆ. ಸರ್ಕಾರಿ ಶಾಲೆಗಳಲ್ಲಿ ಕ್ರೀಡೆ, ಸಂಗೀತ, ನಾಟಕ, ಸಾಹಿತ್ಯ, ಯೋಗ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ವಿಶೇಷ ಆದ್ಯತೆ ನೀಡಲಾಗುತ್ತದೆ. ಇದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವ ಗುಣ ಮತ್ತು ಸೃಜನಶೀಲತೆ ಬೆಳೆಯುತ್ತದೆ. ಶಿಕ್ಷಣ ಎಂದರೆ ಕೇವಲ ಅಂಕ ಗಳಿಸುವುದಲ್ಲ; ಉತ್ತಮ ವ್ಯಕ್ತಿಯಾಗಿ ರೂಪುಗೊಳ್ಳುವುದೂ ಆಗಿದೆ. ಈ ದಿಕ್ಕಿನಲ್ಲಿ ಸರ್ಕಾರಿ ಶಾಲೆಗಳ ಕೊಡುಗೆ ಅಮೂಲ್ಯ.

ಪಾಲಕರು ಒಂದು ವಿಷಯವನ್ನು ನೆನಪಿಡಬೇಕು. ಶಾಲೆಯ ಗುಣಮಟ್ಟ ಕಟ್ಟಡದ ಭವ್ಯತೆಯಿಂದ ನಿರ್ಧಾರವಾಗುವುದಿಲ್ಲ; ಅಲ್ಲಿನ ಶಿಕ್ಷಕರ ಸಮರ್ಪಣೆ ಮತ್ತು ಮಕ್ಕಳ ಕಲಿಕೆಯ ವಾತಾವರಣದಿಂದ ನಿರ್ಧಾರವಾಗುತ್ತದೆ. ಅನೇಕ ಸರ್ಕಾರಿ ಶಾಲೆಗಳಲ್ಲಿ ಇಂದು ಉತ್ತಮ ಫಲಿತಾಂಶಗಳು ಬರುತ್ತಿವೆ. ಮಕ್ಕಳಿಗೆ ಪ್ರೀತಿ, ಪ್ರೋತ್ಸಾಹ ಮತ್ತು ಸರಿಯಾದ ಮಾರ್ಗದರ್ಶನ ಸಿಕ್ಕರೆ ಅವರು ಎಲ್ಲಿಯೇ ಓದಿದರೂ ಯಶಸ್ಸು ಸಾಧಿಸಬಲ್ಲರು. ಸರ್ಕಾರಿ ಶಾಲೆಗಳನ್ನು ಬೆಂಬಲಿಸುವುದು ಅಂದರೆ ದೇಶದ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವುದು. ಸಮಾಜದ ಎಲ್ಲಾ ವರ್ಗದ ಜನರು ಸರ್ಕಾರಿ ಶಾಲೆಗಳಿಗೆ ತಮ್ಮ ಮಕ್ಕಳನ್ನು ಸೇರಿಸಿದಾಗ ಶಾಲೆಗಳ ಗುಣಮಟ್ಟ ಇನ್ನಷ್ಟು ಹೆಚ್ಚುತ್ತದೆ. ಉತ್ತಮ ಸಮಾಜ ನಿರ್ಮಾಣಕ್ಕೆ ಸರ್ಕಾರಿ ಶಾಲೆಗಳ ಬಲವರ್ಧನೆ ಅತ್ಯಗತ್ಯ. ಪ್ರತಿಯೊಬ್ಬ ಪಾಲಕರೂ ಈ ಜವಾಬ್ದಾರಿಯನ್ನು ಅರಿತು ನಡೆದುಕೊಳ್ಳಬೇಕು. ಮಕ್ಕಳ ಶಿಕ್ಷಣವು ವ್ಯಾಪಾರವಾಗಬಾರದು; ಅದು ಸಮಾಜ ಸೇವೆಯಾಗಬೇಕು. ಸರ್ಕಾರಿ ಶಾಲೆಗಳು ಈ ಮೌಲ್ಯವನ್ನು ಉಳಿಸಿಕೊಂಡಿವೆ. ಅಲ್ಲಿ ಮಕ್ಕಳು ಹಣದ ಮೌಲ್ಯಕ್ಕಿಂತ ಮಾನವೀಯ ಮೌಲ್ಯಗಳನ್ನು ಕಲಿಯುತ್ತಾರೆ. ಸರಳ ಜೀವನ, ಶಿಸ್ತು, ಸಹಕಾರ ಮತ್ತು ದೇಶಭಕ್ತಿ ಎಂಬ ಗುಣಗಳು ಮಕ್ಕಳ ವ್ಯಕ್ತಿತ್ವವನ್ನು ಸಮೃದ್ಧಗೊಳಿಸುತ್ತವೆ.

ಕೊನೆಗೆ, ಪ್ರಿಯ ಪಾಲಕರೇ, ನಿಮ್ಮ ಮಕ್ಕಳ ಭವಿಷ್ಯಕ್ಕಾಗಿ ಒಳ್ಳೆಯ ನಿರ್ಧಾರ ತೆಗೆದುಕೊಳ್ಳಿ. ನಿಮ್ಮ ಮನೆಯ ಹತ್ತಿರದ ಸರ್ಕಾರಿ ಶಾಲೆಯನ್ನು ಭೇಟಿ ಮಾಡಿ. ಅಲ್ಲಿನ ಶಿಕ್ಷಕರನ್ನು ಭೇಟಿ ಮಾಡಿ, ಸೌಲಭ್ಯಗಳನ್ನು ಪರಿಶೀಲಿಸಿ, ಮಕ್ಕಳ ಕಲಿಕೆಯ ವಾತಾವರಣವನ್ನು ನೋಡಿ. ನೀವು ಖಂಡಿತವಾಗಿಯೂ ಸರ್ಕಾರಿ ಶಾಲೆಗಳ ಬದಲಾವಣೆಯನ್ನು ಕಂಡು ಸಂತೋಷಪಡುತ್ತೀರಿ. ನಿಮ್ಮ ಮಕ್ಕಳು ಉತ್ತಮ ನಾಗರಿಕರಾಗಲು, ಆತ್ಮವಿಶ್ವಾಸದಿಂದ ಬೆಳೆಯಲು ಮತ್ತು ಸಮಾಜಕ್ಕೆ ಮಾದರಿಯಾಗಲು ಸರ್ಕಾರಿ ಶಾಲೆಗಳು ಉತ್ತಮ ವೇದಿಕೆಗಳಾಗಿವೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)